13 October 2026 Tuesday

SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ವರ್ತಮಾನ

ಸಂಪಾದಕ: ಕೆ.ಎನ್.ರವಿ

info.varthaman@gmail.com

ಭವಿಷ್ಯದ ಮುನ್ನುಡಿ

9742504916 ಮೈಸೂರು ಮಂಡ್ಯ ಬೆಂಗಳೂರು ಹಾಸನ ಚಾಮರಾಜನಗರ ರಾಮನಗರ ಬೆಂಗಳೂರು ಗ್ರಾಮಾಂತರ ಕೊಡಗು

ಕಾರ್ಯನಿರ್ವಾಹಕ ಸಂಪಾದಕ – ಕೆ.ಆರ್.ಮಿಹಿರ್ ಆಕಾಶ್

VARTHAMAN Volume: 69 Issue: 295 Pages: 06 KA/SK/MYS/1098/2023-2025 R.N.I. No.3577/1957 www.varthaman.in Price-3

ಭಾವನಾಂತರಂಗ

ಕೇವಲ ಸಂಪಾದನೆಯ ಮಾರ್ಗ ತೋರಿಸುವ ವಿದ್ಯೆ ಮುಖ್ಯವಲ್ಲ, ಅದರ ಜೊತೆಗೆ ಮಾನವೀಯತೆ ಕಲಿಸುವ ಬುದ್ಧಿಯೂ ಜೀವನಕ್ಕೆ ಅಷ್ಟೇ ಮುಖ್ಯ!

ಸ್ನೇಹಾ ಆನಂದ್

ಲೈಂಗಿಕ ಕಿರುಕುಳ: ವಿದ್ಯಾರ್ಥಿನಿಯರಿಗೆ ನ್ಯಾಯಕ್ಕಾಗಿ ಆಗ್ರಹ ಪುಟ ಸಂ. 2

ನ.26ರಿಂದ ರಾಷ್ಟ್ರೀಯ ವಿಚಾರ ಸಂಕಿರಣ: ಎಚ್.ಸಿ.ಮಹದೇವಪ್ಪ ಪುಟ ಸಂ. 3

50 ದಿನ ಹೋರಾಟ: ರೈತರ ಸ್ಪಂದಿಸದ ಸರ್ಕಾರ ಪುಟ ಸಂ. 4

ಪರಪ್ಪನ ಅಗ್ರಹಾರಕ್ಕೆ ಪ್ರಜ್ವಲ್ ರೇವಣ್ಣ ವಾಪಸ್

ಬೆಂಗಳೂರು: ಲೈಂಗಿಕ ದೌರ್ಜನ್ಯ ಪ್ರಕರಣದ ಅಪರಾಧಿ, ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಅವರನ್ನು ಬೆಳಗಾವಿ ಹಿಂಡಲಗಾ ಜೈಲಿಗೆ ಸ್ಥಳಾಂತರಿಸುವ ಪ್ರಕ್ರಿಯೆ ಸಂದರ್ಭ ಭಾರೀ ಹೈಡ್ರಾಮಾ ನಡೆದಿದೆ.

ಬೆಂಗಳೂರಿನ ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದಿಂದ ಬೆಳಗಾವಿಗೆ ಕರೆದೊಯ್ಯುತ್ತಿದ್ದ ಪೊಲೀಸರು ತುಮಕೂರಿನ ತನಕ ತಲುಪಿದ ಬಳಿಕ ಮಾರ್ಗ ಮಧ್ಯೆಯಿಂದ ದಿಢೀರ್ ವಾಪಸ್ ಬೆಂಗಳೂರಿಗೆ ಮರಳಿದ್ದಾರೆ.

ಸಿಎಆರ್ ಎಸ್ಕಾರ್ಟ್ ಪೊಲೀಸರು ಬಿಗಿ ಭದ್ರತೆಯೊಂದಿಗೆ ಪ್ರಜ್ವಲ್ ರೇವಣ್ಣ ಅವರನ್ನು ಬೆಳಗಾವಿ ಹಿಂಡಲಗಾ ಜೈಲಿಗೆ ಕರೆದೊಯ್ಯುತ್ತಿದ್ದರು. ವಾಹನ ತುಮಕೂರು ತಲುಪುತ್ತಿದ್ದಂತೆ ಹಿರಿಯ ಪೊಲೀಸ್ ಅಧಿಕಾರಿಯೊಬ್ಬರಿಂದ ಬೆಂಗಾವಲು ಪಡೆಗೆ ತುರ್ತು ಕರೆ ಬಂದಿದೆ. ಮೇಲಧಿಕಾರಿಗಳ ಸೂಚನೆಯ ಮೇರೆಗೆ ಸಿಎಆರ್ ಸಿಬ್ಬಂದಿ ವಾಹನವನ್ನು ತಕ್ಷಣವೇ ತಿರುಗಿಸಿ, ಮತ್ತೆ ಬೆಂಗಳೂರಿನ ಪರಪ್ಪನ ಅಗ್ರಹಾರ ಜೈಲಿಗೆ ಕರೆತಂದಿದ್ದಾರೆ.

ಪ್ರಜ್ವಲ್ ರೇವಣ್ಣ ವಿರುದ್ಧ ದಾಖಲಾಗಿರುವ ಎರಡು ಪ್ರಮುಖ ಪ್ರಕರಣಗಳ ವಿಚಾರಣೆ (ಟ್ರಯಲ್) ಪ್ರಸ್ತುತ ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದಲ್ಲಿ ನಡೆಯುತ್ತಿದೆ. ನ್ಯಾಯಾಲಯದ ವಿಚಾರಣೆ

ಸಂದರ್ಭದಲ್ಲಿ ಕೆಲ ಪ್ರಮುಖ ಹಂತಗಳಲ್ಲಿ ಆರೋಪಿ ಖುದ್ದು ಕೋರ್ಟ್‌ಗೆ ಹಾಜರಿರಬೇಕಾಗುತ್ತದೆ.

ಬೆಳಗಾವಿಯ ಹಿಂಡಲಗಾ ಜೈಲಿಗೆ ಸ್ಥಳಾಂತರಿಸಿದರೆ ಪ್ರತಿ ಬಾರಿ ವಿಚಾರಣೆಗೆ ಅಲ್ಲಿಂದ ಬೆಂಗಳೂರಿಗೆ ಕರೆತರುವುದು ಭದ್ರತೆ ಮತ್ತು ತಾಂತ್ರಿಕ ದೃಷ್ಟಿಯಿಂದ ಕಷ್ಟವಾಗಲಿದೆ ಎಂಬ ಕಾರಣಕ್ಕೆ ಕೊನೆ ಕ್ಷಣದಲ್ಲಿ ಶಿಫ್ಟಿಂಗ್ ಪ್ರಕ್ರಿಯೆಯನ್ನು ಸ್ಥಗಿತಗೊಳಿಸಿ ವಾಪಸ್ ಬೆಂಗಳೂರಿನ ಜೈಲಿನಲ್ಲೇ ಉಳಿಸಿಕೊಳ್ಳಲಾಗಿದೆ ಎಂದು ತಿಳಿದುಬಂದಿದೆ.

ಜನರ ಧ್ವನಿಯನ್ನೇ ಹತ್ತಿಕ್ಕುವ ಯತ್ನ: ದೀಪ್ಸೆ

ನವದೆಹಲಿ: ಕೇಂದ್ರ ಸರ್ಕಾರ ಜನರ ಧ್ವನಿಯನ್ನೇ ಹತ್ತಿಕ್ಕುವ ಯತ್ನ ನಡೆಸಿದೆ ಎಂದು ಕಾಕ್ರೋಚ್ ಜನತಾ ಪಾರ್ಟಿ ಸಂಸ್ಥಾಪಕ ಅಭಿಜೀತ್ ದೀಪ್ಸೆ ಆಕ್ರೋಶ ವ್ಯಕ್ತಪಡಿಸಿದರು.

ರಾಷ್ಟ್ರ ರಾಜಧಾನಿ ಜಂತರ್ ಮಂತರ್ ಅನ್ನು ಪ್ರತಿಭಟನಾ ಸ್ಥಳಗಳ ಪಟ್ಟಿಯಿಂದ ರದ್ದುಗೊಳಿಸಿರುವ ಕೇಂದ್ರ ಸರ್ಕಾರದ ನಿರ್ಧಾರದ ವಿರುದ್ಧ ಸಾಮಾಜಿಕ ಜಾಲತಾಣದಲ್ಲಿ ಸಿಟ್ಟು ವ್ಯಕ್ತಪಡಿಸಿದ್ದಾರೆ.

ಸರ್ಕಾರಕ್ಕೆ ಜಂತರ್ ಮಂತರ್ ಸ್ಥಳದ ಬಗ್ಗೆ ತಕರಾರಿಲ್ಲ. ಬದಲಾಗಿ ತಮ್ಮ ವಿರುದ್ಧ ಜನ ಪ್ರತಿಭಟಿಸುತ್ತಾರೆ ಎಂಬುದೇ ಅವರಿಗೆ ದೊಡ್ಡ ಸಮಸ್ಯೆಯಾಗಿದೆ. ಒಬ್ಬ ಸರ್ವಾಧಿಕಾರಿಗೆ ಜನ ತನ್ನ ವಿರುದ್ಧ ಧ್ವನಿ ಎತ್ತುವುದನ್ನು ಸಹಿಸಿಕೊಳ್ಳಲು ಸಾಧ್ಯವಾಗುವುದಿಲ್ಲ ಎಂದು ಕಿಡಿಕಾರಿದ್ದಾರೆ.

ಹೆದ್ದಾರಿಯಲ್ಲಿ ಕುದುರೆ ರೇಸ್!

ಮಂಡ್ಯ: ರಾಷ್ಟ್ರೀಯ ಹೆದ್ದಾರಿಯಲ್ಲೇ ಕೆಲವು ಕಿಡಿಗೇಡಿಗಳು ಕಾನೂನನ್ನು ಗಾಳಿಗೆ ತೂರಿದ್ದಾರೆ. ಬೆಂಗಳೂರು– ಮಂಗಳೂರು ರಾಷ್ಟ್ರೀಯ ಹೆದ್ದಾರಿ–75 ಅನ್ನು ರೇಸ್ ಟ್ರಾಕ್ ಮಾಡಿಕೊಂಡಿರುವ ಘಟನೆ ಜಿಲ್ಲೆಯ ನಾಗಮಂಗಲ ತಾಲೂಕಿನಲ್ಲಿ ನಡೆದಿದೆ.

ನಾಗಮಂಗಲ ತಾಲೂಕಿನ ಬೆಳ್ಳೂರು ಕ್ರಾಸ್‌ನಿಂದ ಕದಬಳ್ಳಿ ಟೋಲ್ ಗೇಟ್‌ವರೆಗಿನ ಹೆದ್ದಾರಿ ರಸ್ತೆಯಲ್ಲಿ ಕುದುರೆ ಗಾಡಿ ರೇಸ್ ಜೋರಾಗಿಯೇ ನಡೆದಿದೆ. ಕಾನೂನಿನ ಯಾವುದೇ ಭಯವಿಲ್ಲದೇ, ಹೆದ್ದಾರಿಯ ಮಧ್ಯದಲ್ಲೇ ಕುದುರೆ ಗಾಡಿಗಳನ್ನ ವೇಗವಾಗಿ ಓಡಿಸಲಾಗಿದೆ.

ಈ ಕುದುರೆ ಗಾಡಿ ರೇಸ್ ಹಿಂದೆ ದೊಡ್ಡ ಮಟ್ಟದ ಬೆಟ್ಟಿಂಗ್ ನಡೆದಿರುವ ಆರೋಪ ಕೇಳಿಬಂದಿದೆ. ಲಕ್ಷ–ಲಕ್ಷ ರೂಪಾಯಿ ಬೆಟ್ಟಿಂಗ್ ಕಟ್ಟಿ ಈ ಅಪಾಯಕಾರಿ ರೇಸ್ ನಡೆಸಲಾಗಿದೆ. ಕುದುರೆ ಗಾಡಿ ಬೆನ್ನಲ್ಲೇ ನೂರಾರು ಬೈಕ್‌ಗಳು ಸಹ ಅಜಾಗರೂಕತೆಯಿಂದ ರಸ್ತೆಯಲ್ಲಿ ನುಗ್ಗಿ ಸಂಚಾರ ನಿಯಮಗಳನ್ನು ಸಂಪೂರ್ಣವಾಗಿ ಉಲ್ಲಂಘಿಸಿದ್ದಾರೆ.

ಹೆದ್ದಾರಿಯಲ್ಲಿ ಈ ರೀತಿ ಜನರ ಜೀವದೊಂದಿಗೆ ಚೆಲ್ಲಾಟವಾಡುತ್ತಿರುವುದನ್ನು ಪ್ರಶ್ನಿಸಲು ಹೋದ ಸಾರ್ವಜನಿಕರಿಗೆ ರೇಸ್‌ನಲ್ಲಿದ್ದವರು ಅವಾಚ್ಯ ಶಬ್ದಗಳಿಂದ ನಿಂದಿಸಿ, ಬೆದರಿಕೆ ಹಾಕಿದ್ದಾರೆ. ಇದರಿಂದ ಆ ಮಾರ್ಗದಲ್ಲಿ ಪ್ರಯಾ

ಣಿಸುತ್ತಿದ್ದ ಇತರೆ ವಾಹನ ಸವಾರರು ಮತ್ತು ಪ್ರಯಾಣಿಕರು ಕೆಲಕಾಲ ತೀವ್ರ ಪರದಾಟ ಹಾಗೂ ಆತಂಕ ಅನುಭವಿಸುವಂತಾಯಿತು. ಈ ಬಗ್ಗೆ ಬೆಳ್ಳೂರು ಠಾಣೆ ದೂರು ದಾಖಲಿಸಲಾಗಿದೆ.

ಕುಚುಕು ನಡುವೆ 'ಶೀತಲ ಸಮರ'

ಸಿದ್ದರಾಮಯ್ಯಗೆ ಆಹ್ವಾನ ನೀಡದೆ ಟಾಂಗ್ ಕೊಟ್ಟ ಎಚ್.ಸಿ.ಮಹದೇವಪ್ಪ

ಮೈಸೂರು: ಗಳಸ್ಯ–ಕಂಠಸ್ಯ ಆಪ್ತ ಮಿತ್ರರಾಗಿದ್ದ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಮಾಜಿ ಸಚಿವ ಎಚ್.ಸಿ.ಮಹದೇವಪ್ಪ ಈಗ ನಾನೊಂದು ತೀರ, ನೀನೊಂದು ತೀರ ಎಂಬಂತಾಗಿದೆ. ಇಬ್ಬರ ನಡುವಿನ ಶೀತಲಸಮರ ಬಹಿರಂಗಗೊಂಡಿದೆ.

ಇಬ್ಬರ ನಡುವಿನ ಮುನಿಸು 2ನೇ ಹಂತಕ್ಕೆ ತಲುಪಿದಂತಿದೆ. ಮಹದೇವಪ್ಪ ಅವರು ಮೈಸೂರಿನಲ್ಲಿ ರಾಷ್ಟ್ರೀಯ ಸಂವಿಧಾನ ದಿನ ಕಾರ್ಯಕ್ರಮ ಆಯೋಜನೆ ಮಾಡಿದ್ದಾರೆ. ಆದರೆ ತಮ್ಮ ಆಪ್ತಮಿತ್ರ ಸಿದ್ದರಾಮಯ್ಯ ಅವರಿಗೆ ಆಹ್ವಾನ ನೀಡಿಲ್ಲ. ಆಹ್ವಾನ ಪತ್ರಿಕೆಯಲ್ಲಿ ಅವರ ಹೆಸರನ್ನೂ ಸಹ ಹಾಕಿಲ್ಲ.

ಮೈಸೂರಿನಲ್ಲಿ ನವೆಂಬರ್ 26, 27ರಂದು ರಾಷ್ಟ್ರೀಯ ಸಂವಿಧಾನ ದಿನ ಸಮ್ಮೇಳನವನ್ನ ಹಮ್ಮಿಕೊಳ್ಳಲಾಗಿದೆ. ಈ ಸಮ್ಮೇಳನ ಮಾಜಿ ಸಚಿವ ಡಾ.ಎಚ್.ಸಿ ಮಹದೇವಪ್ಪ ನೇತೃತ್ವದಲ್ಲಿ ನಡೆಯುತ್ತಿದೆ. ಅಲ್ಲದೆ, ಕಾರ್ಯಕ್ರಮ ಬಗ್ಗೆ ಸೋಮವಾರ ಮಹದೇವಪ್ಪ ಪತ್ರಿಕಾಗೋಷ್ಠಿ ನಡೆಸಿದರು.

ಈ ಸಂದರ್ಭದಲ್ಲಿ ಸಿದ್ದರಾಮಯ್ಯ ಅವರನ್ನು ಆಹ್ವಾನಿಸಲ್ಲವೇ? ಎಂಬ ಪ್ರಶ್ನೆಗೂ ಮಹದೇವಪ್ಪ ಸ್ಪಷ್ಟ ಉತ್ತರ ನೀಡಲಿಲ್ಲ. ಇಬ್ಬರ ನಡುವಿನ ಮುನಿಸು ಬೀದಿಗೆ ಬಂತೆ ಅನ್ನೋ ಪ್ರಶ್ನೆ ಮೂಡಿಸಿದೆ.

ಯಾವುದೇ ವ್ಯಕ್ತಿ ಮುಖ್ಯವಲ್ಲ!

ಸಿದ್ದರಾಮಯ್ಯ ಅವರನ್ನು ಆಹ್ವಾನಿಸದಿರುವ ಪ್ರಶ್ನೆಗೆ ಹೆಸರು ಹೇಳದೇ ಖಡಕ್ ಉತ್ತರ ಕೊಟ್ಟ ಎಚ್.ಸಿ.ಮಹದೇವಪ್ಪ, ಇಲ್ಲಿ ಯಾವ ವ್ಯಕ್ತಿಯ ಪ್ರಶ್ನೆಯೂ ಇರಲ್ಲ. ಯಾರೂ ಮುಖ್ಯ ಅಥವಾ ಅಮುಖ್ಯರಲ್ಲ. ಸಂವಿಧಾನದ ರಕ್ಷಕರು ಎಲ್ಲಾ ಸೇರಿ ಇದರಲ್ಲಿ ಭಾಗವಹಿಸುತ್ತಾರೆ ಎಂದಷ್ಟೇ ಹೇಳಿದರು. ತಮ್ಮ ಹಾಗೂ ಸಿದ್ದರಾಮಯ್ಯ ನಡುವಿನ ಫ್ರೆಂಡ್‌ಶಿಪ್ ಕುರಿತ ಪ್ರಶ್ನೆಗೂ ಉತ್ತರ ಕೊಡದೆ ನುಣುಚಿಕೊಂಡ ಮಹದೇವಪ್ಪ ಅವರು, ಸ್ನೇಹಿತ ಯಾವಾಗಲೂ ಸ್ನೇಹಿತನೇ, ಸ್ನೇಹದ ಪ್ರೀತಿ ಜಾಸ್ತಿಯೂ ಆಗಲ್ಲ, ಕಡಿಮೆಯೂ ಆಗಲ್ಲ ಎಂದು ಹಾರಿಕೆಯ ಉತ್ತರ

ಪುಟ 2ಕ್ಕೆ

24 ಅರ್ಹರ ಪಟ್ಟಿ ನೀಡಿದ ಇಡಿ

ಕೆಪಿಎಸ್‌ಸಿ ಪಶುವೈದ್ಯಾಧಿಕಾರಿಗಳ ನೇಮಕಾತಿ ಅಕ್ರಮ ಪ್ರಕರಣ

ಬೆಂಗಳೂರು: ಕೆಪಿಎಸ್‌ಸಿ ಪಶುವೈದ್ಯಾಧಿಕಾರಿಗಳ ನೇಮಕಾತಿ ಅಕ್ರಮದಲ್ಲಿ 24 ಅಭ್ಯರ್ಥಿಗಳಿಗೆ ನ್ಯಾಯ ಸಿಗಬೇಕಿದೆ. ಕಷ್ಟಪಟ್ಟು ಓದಿರುವ ಅಭ್ಯರ್ಥಿಗಳ ಹೆಸರನ್ನು ಇಡಿ ಕೋರ್ಟ್‌ಗೆ ನೀಡಿದೆ. ಈ ಅಭ್ಯರ್ಥಿಗಳಿಗೆ ಕೆಲಸ ಸಿಗಬೇಕು ಎಂದು ವಾದಿಸಿದೆ.

ಕರ್ನಾಟಕ ಲೋಕಸೇವಾ ಆಯೋಗ ನಡೆಸಿದ ಪಶುವೈದ್ಯಾಧಿಕಾರಿಗಳ ನೇಮಕಾತಿ ಪರೀಕ್ಷೆಯಲ್ಲಿ ನಡೆದ ಭಾರಿ ಅಕ್ರಮದ ರಹಸ್ಯವನ್ನು ಜಾರಿ ನಿರ್ದೇಶನಾಲಯ ಎಳೆಎಳೆಯಾಗಿ ಬಿಚ್ಚಿಟ್ಟಿದೆ. ಕಷ್ಟಪಟ್ಟು ಓದಿ ಪ್ರಾಮಾಣಿಕವಾಗಿ ಪರೀಕ್ಷೆ ಬರೆದಿದ್ದ 24 ಅರ್ಹ ಅಭ್ಯರ್ಥಿಗಳು ಅವಕಾಶ ವಂಚಿತರಾಗಿದ್ದಾರೆ. ಹಣ ನೀಡಿದ 29 ಮಂದಿ ಅಕ್ರಮವಾಗಿ ಹುದ್ದೆ ಗಿಟ್ಟಿಸಿಕೊಂಡಿದ್ದಾರೆ ಎಂದು ಇಡಿ ತನ್ನ ತನಿಖಾ ವರದಿಯಲ್ಲಿ ನ್ಯಾಯಾಲಯಕ್ಕೆ ತಿಳಿಸಿದೆ. ಪ್ರಶ್ನೆಪತ್ರಿಕೆ ಸೋರಿಕೆ, ಉತ್ತರಗಳ ಅಕ್ರಮ ಸರಬರಾಜು ಸೇರಿದಂತೆ ಮೂರು ವಿಭಿನ್ನ ಮಾರ್ಗಗಳಲ್ಲಿ ಅಕ್ರಮ ಎಸಗಲಾಗಿತ್ತು. ಹಣ ಕೊಟ್ಟ ಅಭ್ಯರ್ಥಿಗಳಿಗೆ 400ಕ್ಕೂ ಹೆಚ್ಚು ಅಂಕಗಳನ್ನು ನೀಡಿ ಜಾಕ್‌ಪಾಟ್ ಹೊಡೆಯುವಂತೆ ಮಾಡಲಾಗಿತ್ತು. ಇಡಿ ಅಧಿಕಾರಿಗಳು ಸಂತ್ರಸ್ತ ಅಭ್ಯರ್ಥಿಗಳನ್ನು ವಿಚಾರಣೆ ನಡೆಸಿ ಮಾಹಿತಿ ಸಂಗ್ರಹಿಸಿದ್ದು, ಪ್ರಾಮಾಣಿಕವಾಗಿ ಓದಿದ 24 ಅಭ್ಯರ್ಥಿಗಳಿಗೆ ಕಠಿಣ ಅನ್ಯಾಯವಾಗಿದೆ ಎಂದು ಕೋರ್ಟ್ ನೀಡಿದ ವರದಿಯಲ್ಲಿ ಸ್ಪಷ್ಟವಾಗಿ ಉಲ್ಲೇಖಿಸಿದ್ದಾರೆ.

ಅಕ್ರಮ ಎಸಗಿದವರ ವಿರುದ್ಧ ಕ್ರಮ ಕೈಗೊಂಡು, ವಂಚಿತರಾದ 24 ಮಂದಿಗೆ ಕೂಡಲೇ ಸೂಕ್ತ ನ್ಯಾಯ ಸಿಗಬೇಕೆಂದು ಇಡಿ ವರದಿ ಪ್ರತಿಪಾದಿಸಿದೆ.

ಕಿಂಗ್‌ಪಿನ್ ಕನ್ನಾಳೆಗೆ 5 ದಿನಗಳ ಜಾಮೀನು

ಬೆಂಗಳೂರು: ಕೆಪಿಎಸ್‌ಸಿ ಅಕ್ರಮದ ಕಿಂಗ್‌ಪಿನ್ ಬಸವರಾಜ್ ಕನ್ನಾಳೆಗೆ ಐದು ದಿನಗಳ ಜಾಮೀನು ನೀಡಿ ಕೋರ್ಟ್ ಆದೇಶ ಹೊರಡಿಸಿದೆ.

ನ್ಯಾಯಮೂರ್ತಿ ವಿಶ್ವಜಿತ್ ಶೆಟ್ಟಿ ಅರ್ಜಿ ವಿಚಾರಣೆ ನಡೆಸಿದರು. ಕನ್ನಾಳೆ ಪರ ಹಿರಿಯ ವಕೀಲ ಅರುಣ್ ಶ್ಯಾಮ್ ವಾದ ಮಂಡಿಸಿದರು. ಕನ್ನಾಳೆ ಪತ್ನಿ ಹೆಣ್ಣು ಮಗುವಿಗೆ ಜನ್ಮ ನೀಡಿದ್ದಾರೆ. 12 ದಿನದ ಮಗುವಿಗೆ ನಾಮಕರಣದ ಅಗತ್ಯವಿದೆ. ಮಾನವೀಯತೆ ಮೇಲೆ ಒಂದು ವಾರದ ಜಾಮೀನು ನೀಡುವಂತೆ ವಕೀಲರು ಮನವಿ ಮಾಡಿದರು.

5 ದಿನಗಳ ಕಾಲ ಜಾಮೀನು ಮಂಜೂರು ಮಾಡಿ ಕೋರ್ಟ್ ಆದೇಶಿಸಿದೆ. ಅ.15ರಿಂದ 20ರ ವರೆಗೆ ಜಾಮೀನು ನೀಡಲಾಗಿದೆ. ಪೊಲೀಸರು ಜೊತೆಯಲ್ಲಿಯೇ ಹೋಗಬೇಕು. ಮೊಬೈಲ್ ಬಳಸಬಾರದು. ಐದು ದಿನದ ಒಳಗಾಗಿ ನಾಮಕರಣ ಮುಗಿಸಬೇಕು. ಒಬ್ಬರೇ ಹೋಗಲು ಅನುಮತಿಸಬಾರದು ಎಂದು ಷರತ್ತು ವಿಧಿಸಿದೆ.

ಪೊಲೀಸರು ಕನ್ನಾಳೆ ಮನೆ ಮತ್ತು ಆಸ್ಪತ್ರೆಗೆ ಹೋಗುವಂತಿಲ್ಲ. ಪೊಲೀಸರು ಇಲ್ಲದಿರುವಾಗ ಮೊಬೈಲ್ ಬಳಸಬಾರದು. ಬೀದರ್‌ಗೆ ಪೊಲೀಸರು ಕರೆದೊಯ್ಯಬೇಕು. ಬೇರೆ ಯಾರನ್ನೂ ಭೇಟಿ ಆಗಬಾರದೆಂದು ಷರತ್ತು ವಿಧಿಸಿ ಜಾಮೀನು ಮಂಜೂರು ಮಾಡಲಾಗಿದೆ.

ಸುತ್ತೂರು ಶ್ರೀಗಳ ಆಶೀರ್ವಾದ ಪಡೆದ ಖ್ಯಾತ ನಟ ಪ್ರಭುದೇವ್

ಮೈಸೂರು: ಬಹುಭಾಷಾ ನಟ ಪ್ರಭುದೇವ್ ಅವರು ತಾಯಿ ಜೊತೆ ಸುತ್ತೂರು ಮಠಕ್ಕೆ ಭೇಟಿ ನೀಡಿ ಸುತ್ತೂರು ಶ್ರೀಗಳ ಆಶೀರ್ವಾದ ಪಡೆದರು.

ಮೈಸೂರು ದಸರಾದಲ್ಲಿ ಯುವ ದಸರಾವನ್ನು ಮಂಗಳವಾರ ನಟ ಪ್ರಭುದೇವ್ ಉದ್ಘಾಟಿಸಲಿದ್ದಾರೆ. ಈ ಹಿನ್ನೆಲೆಯಲ್ಲಿ ಅವರು ಮೈಸೂರಿಗೆ ಆಗಮಿಸಿದ್ದಾರೆ.

ಈ ಸಂದರ್ಭ ಮಾತನಾಡಿದ ಅವರು, ಐದಾರು ವರ್ಷಗಳಿಂದ ದಸರಾ ಮಿಸ್ ಮಾಡಿಕೊಳ್ತಿದ್ದೆ. ಈ ಬಾರಿ ಯುವದಸರಾಗೆ ಆಹ್ವಾನ ಬಂದ ತಕ್ಷಣವೇ ಒಪ್ಪಿಕೊಂಡೆ ಎಂದು ಹೇಳಿದರು.

ಮೈಸೂರು ದಸರಾ ಕುರಿತು ಮಾತನಾಡಿದ ಅವರು, ನಾನು ಇಲ್ಲಿಯವರೆಗೆ ನೇರವಾಗಿ ದಸರಾ ನೋಡೇ ಇರಲಿಲ್ಲ. ಈ ಬಾರಿ ಯುವದಸರಾಗೆ ಆಹ್ವಾನ ಬಂದ ತಕ್ಷಣವೇ ಯಾವುದೇ ಯೋಚನೆ ಮಾಡದೆ

ಒಪ್ಪಿಕೊಂಡೆ. ನನಗೆ ಬಹಳ ಸಂತೋಷವಾಗುತ್ತಿದೆ. ದಸರಾದಲ್ಲಿ ಇಷ್ಟು ಅದ್ಭುತವಾದ ಕಾರ್ಯಕ್ರಮ ಇರುತ್ತವೆ ಎಂದು ನನಗೆ ಇಲ್ಲಿ ಬಂದ ಮೇಲೆಯೇ ಗೊತ್ತಾಗಿದ್ದು ಎಂದು ಸಂತಸ ವ್ಯಕ್ತಪಡಿಸಿದರು.

ಶ್ರೀರಂಗಪಟ್ಟಣದಲ್ಲಿ ದಸರಾ ಸಂಭ್ರಮ

ನಾಡಿನ ಕಲೆ, ಸಂಸ್ಕೃತಿಗೆ ಹೊಸ ಮೆರುಗು: ಅದಿತಿ ಪ್ರಭುದೇವ

ಮಂಡ್ಯ: ವಿಜಯನಗರ ಸಾಮ್ರಾಜ್ಯದ ಕಾಲದಿಂದಲೂ ನಡೆದುಬಂದಿರುವ ದಸರಾ ಮಹೋತ್ಸವದ ಪರಂಪರೆಯನ್ನು ಶ್ರೀರಂಗಪಟ್ಟಣದಲ್ಲಿ ಮುಂದುವರಿಸಿಕೊಂಡು ಹೋಗುತ್ತಿರುವುದು ಹೆಮ್ಮೆಯ ಸಂಗತಿಯಾಗಿದೆ. ಈ ಬಾರಿ ಆಯೋಜಿಸಿರುವ ಯುವ ಸಂಭ್ರಮ ಕಾರ್ಯಕ್ರಮವು ಯುವಜನರಲ್ಲಿ ನಾಡಿನ ಕಲೆ, ಸಂಸ್ಕೃತಿ ಮತ್ತು ಪರಂಪರೆಯ ಬಗ್ಗೆ ಅಭಿಮಾನ ಬೆಳೆಸುವುದರ ಜೊತೆಗೆ ಶ್ರೀರಂಗಪಟ್ಟಣ ದಸರಾ ಮಹೋತ್ಸವಕ್ಕೆ ಹೊಸ ಮೆರುಗು ನೀಡಿದೆ ಎಂದು ಚಲನಚಿತ್ರ ನಟಿ ಅದಿತಿ ಪ್ರಭುದೇವ ಹೇಳಿದರು.

ಶ್ರೀರಂಗಪಟ್ಟಣ ದಸರಾ ಮಹೋತ್ಸವದ ಅಂಗವಾಗಿ ತಾಲ್ಲೂಕು ಕ್ರೀಡಾಂಗಣದಲ್ಲಿ ಅಕ್ಟೋಬರ್ 12ರಂದು ಆಯೋಜಿಸಿದ್ದ ಯುವ ಸಂಭ್ರಮ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಯುವ ಪ್ರತಿಭೆಗಳಿಗೆ ತಮ್ಮ ಕಲಾ ಸಾಮರ್ಥ್ಯವನ್ನು ಪ್ರದರ್ಶಿಸಲು ಇಂತಹ ವೇದಿಕೆಗಳು ಅತ್ಯಂತ ಅಗತ್ಯವಾಗಿವೆ. ಯುವಜನರಲ್ಲಿ ಸೃಜನಶೀಲತೆ ಮತ್ತು ಸಾಂಸ್ಕೃತಿಕ ಆಸಕ್ತಿಯನ್ನು ಉತ್ತೇಜಿಸುವ ಮೂಲಕ ನಮ್ಮ ನಾಡಿನ ಕಲಾ ಪರಂಪರೆಯನ್ನು ಮುಂದಿನ ಪೀಳಿಗೆಗೆ ಪರಿಚಯಿಸಲು ಯುವ ಸಂಭ್ರಮ ಸಹಕಾರಿಯಾಗಿದೆ ಎಂದು ತಿಳಿಸಿದರು.

ಯುವ ಸಂಭ್ರಮ ನಿರಂತರವಾಗಿ ಮುಂದುವರಿಯಲಿ: ಶಾಸಕ ರಮೇಶ್ ಬಂಡಿಸಿದ್ದೇಗೌಡ

ಶ್ರೀರಂಗಪಟ್ಟಣ ದಸರೆಗೆ ಧನಂಜಯ ಆನೆ ಆಯ್ಕೆ

ಮೈಸೂರು: ಶ್ರೀರಂಗಪಟ್ಟಣ ದಸರೆಯಲ್ಲಿ ಅಂಬಾರಿ ಹೊರಲು ಧನಂಜಯ ಆನೆ ಆಯ್ಕೆಯಾಗಿದೆ.



ಕುಶಾಲತೋಪು ತಾಲೀಮು ಮುಕ್ತಾಯಗೊಂಡ ಬಳಿಕ ಸೋಮವಾರ ಅರಣ್ಯ ಇಲಾಖೆ ಸಿಎಫ್ ರವಿಶಂಕರ್ ಮಾತನಾಡಿ, ಶ್ರೀರಂಗಪಟ್ಟಣ ದಸರಾದಲ್ಲಿ ಧನಂಜಯ ಮರದ ಅಂಬಾರಿ ಹೊರಲಿದೆ. ಲಕ್ಷ್ಮಿ ಹಾಗೂ ರೂಪ ಆನೆಯನ್ನು ಕುಮ್ಕಿ ಆನೆಗಳನ್ನಾಗಿ ಆಯ್ಕೆ ಮಾಡಲಾಗಿದೆ.

ಮೈಸೂರು ದಸರಾ ಜಂಬೂಸವಾರಿ ಮೂರು ದಿನಕ್ಕೂ ಮೊದಲು ದಸರಾ ಅಂಬಾರಿ ಹೊರುವ ಆನೆ ಯಾವುದೆಂದು ಘೋಷಿಸುತ್ತೇವೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದ ಅಧ್ಯಕ್ಷರು ಹಾಗೂ ಶ್ರೀರಂಗಪಟ್ಟಣ ವಿಧಾನಸಭಾ ಕ್ಷೇತ್ರದ ಶಾಸಕ ಎ.ಬಿ. ರಮೇಶ್

ಪುಟ 2ಕ್ಕೆ

ಮೈಸೂರಿಗೆ ಅಂಚೆ ವಲಯ ಪ್ರಧಾನ ಕಚೇರಿ ಸ್ಥಳಾಂತರ

ಮೈಸೂರು: ಬೆಂಗಳೂರಿನಲ್ಲಿರುವ ದಕ್ಷಿಣ ಕರ್ನಾಟಕ ಅಂಚೆ ವಲಯ ಪ್ರಧಾನ ಕಚೇರಿಯನ್ನು ಮೈಸೂರಿಗೆ ಸ್ಥಳಾಂತರಿಸಲು ಕ

ಇಂದಿನಿಂದ ಯುವ ದಸರಾ ಸಂಭ್ರಮ

ಮೈಸೂರು: ಮೈಸೂರು ದಸರಾ ಮಹೋತ್ಸವದ ಪ್ರಮುಖ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಒಂದಾದ ಮೈಸೂರು ಯುವ ದಸರಾ 2026 ಅ.13ರಿಂದ 17ರವರೆಗೆ ಮೈಸೂರಿನ ರಿಂಗ್ ರಸ್ತೆಯಲ್ಲಿರುವ, ಜ್ವಾಲಾಮುಖಿ ತ್ರಿಪುರ ಸುಂದರಿ ದೇವಸ್ಥಾನದ ಸಮೀಪ ಆಯೋಜಿಸಲಾಗಿದೆ. ಪ್ರತಿದಿನ ಸಂಜೆ ಅದ್ಧೂರಿ ಸಂಗೀತ ಮತ್ತು ಮನರಂಜನಾ ಕಾರ್ಯಕ್ರಮಗಳು ನಡೆಯಲಿವೆ.

ಈ ಸಂಬಂಧ ಯುವ ದಸರಾ ಉಪ ವಿಶೇಷಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿ, ಯುವ ದಸರಾ 2026ರ ವಿಶೇಷ ಆಕರ್ಷಣೆಯಾದ ಯುವ ದಸರಾ ಆಲ್ಬಂ ಸಾಂಗ್ ಅನ್ನು ಬಿಡುಗಡೆ ಮಾಡಿ ಅವರು ಮಾಹಿತಿ ನೀಡಿದರು. ಯುವ ದಸರಾ ಕಾರ್ಯಕ್ರಮವು ಅ.13ರಂದು ಸಂಜೆ 6.30 ಗಂಟೆಗೆ ಉದ್ಘಾಟನೆಗೊಳ್ಳಲಿದೆ. ಖ್ಯಾತ ಚಲನಚಿತ್ರ ನಟ, ನಿರ್ದೇಶಕ ಹಾಗೂ ನೃತ್ಯ ನಿರ್ದೇಶಕ ಪ್ರಭುದೇವ ಉದ್ಘಾಟಿಸಲಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಶಾಸಕ ಜಿ.ಟಿ.ದೇವೇಗೌಡ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಜಿಲ್ಲೆಯ ಸಚಿವರು, ಶಾಸಕರು, ಜನಪ್ರತಿನಿಧಿಗಳು ಹಾಗೂ ಗಣ್ಯರು ಭಾಗವಹಿಸಲಿದ್ದಾರೆ. ವೇದಿಕೆ ಮತ್ತು ಆಸನ ವ್ಯವಸ್ಥೆಗಳನ್ನು ಸರ್ಕಾರದ ಶಿಷ್ಟಾಚಾರದಂತೆ ಕೈಗೊಳ್ಳಲಾಗುವುದು ಎಂದರು.

ಯುವ ದಸರಾ ಆಲ್ಬಂ ಗೀತೆಗೆ ಜಿ.ಎಸ್.ಸೋಮ ಶೇಖರ್ ಮತ್ತು ಮನೋಜ್ ಸೌಗಂಧ್ ಸಾಹಿತ್ಯ ರಚಿಸಿದ್ದು, ಖ್ಯಾತ ಚಲನಚಿತ್ರ ಸಂಗೀತ ನಿರ್ದೇಶಕ ಅಜನೀಶ್ ಲೋಕನಾಥ್ ಸಂಗೀತ ಸಂಯೋಜನೆ ಮಾಡಿದ್ದಾರೆ. ಈ ಗೀತೆ ಯುವಜನರ ಉತ್ಸಾಹ, ಮೈಸೂರಿನ ಸಾಂಸ್ಕೃತಿಕ ವೈಭವ ಮತ್ತು ದಸರಾ ಸಂಭ್ರಮವನ್ನು ಪ್ರತಿಬಿಂಬಿಸಲಿದೆ. ಅ.13ರಂದು ಉದ್ಘಾಟನಾ ಸಮಾರಂಭ ಹಾಗೂ ಅಜನೀಶ್ ಲೋಕನಾಥ್ ಅವರ ಸಂಗೀತ ಕಾರ್ಯಕ್ರಮ, ಅ.14: ಶಂಕರ್?ಎಹ್ಸಾನ್?ಲಾಯ್, ಅ.15: ಸಿದ್ ಶ್ರೀರಾಮ್,ಅ.16 ರಂದು ಸ್ಯಾಂಡಲ್‌ವುಡ್ ನೈಟ್ಸ್, ಅ. 17ರಂದು ಜಾಸ್ಮಿನ್ ಸ್ಯಾಂಡ್ಲಾಸ್ ಎಂದರು.

ಯುವ ದಸರಾ 2026ರ ಮತ್ತೊಂದು ಪ್ರಮುಖ ಆಕರ್ಷಣೆಯಾಗಿ 100ಕ್ಕೂ ಹೆಚ್ಚು ಆಹಾರ ಮಳಿಗೆಗಳನ್ನು ಒಳಗೊಂಡ ಬೃಹತ್ ಆಹಾರ ಮೇಳವನ್ನು ಆಯೋಜಿಸಲಾಗಿದೆ. ಮೈಸೂರು ಸೇರಿ ವಿವಿಧ ಜಿಲ್ಲೆಗಳು ಹಾಗೂ ದೂರದ ಊರುಗಳಿಂದ ಆಗಮಿಸುವ ಕಲಾಭಿಮಾನಿಗಳು, ಯುವಜನರು ಮತ್ತು ಸಾರ್ವಜನಿಕರಿಗೆ ವೈವಿಧ್ಯಮಯ ಆಹಾರ ಪದಾರ್ಥಗಳನ್ನು ಸವಿಯುವ ಅವಕಾಶ ಕಲ್ಪಿಸುವುದು ಇದರ ಉದ್ದೇಶವಾಗಿದೆ. ಆಹಾರ ಮೇಳದಲ್ಲಿ ದಕ್ಷಿಣ ಭಾರತದ ಹಾಗೂ ಉತ್ತರ ಭಾರತದ ವಿವಿಧ ಶೈಲಿಯ ಆಹಾರ ಪದಾರ್ಥಗಳು ಲಭ್ಯವಿರಲಿದ್ದು, ಇದು ಯುವ ದಸರಾಕ್ಕೆ ಆಗಮಿಸುವವರಿಗೆ ವಿಶೇಷ ಆಕರ್ಷಣೆಯಾಗಲಿದೆ ಎಂದರು.

14 ಎಕರೆ ಪ್ರದೇಶದಲ್ಲಿ ಕಾರ್ಯಕ್ರಮವನ್ನು ಆಯೋಜಿಸಲಾಗುತ್ತಿದ್ದು, ಸುಮಾರು 8060 ಅಡಿ ಅಳತೆಯ ಬೃಹತ್ ವೇದಿಕೆ ನಿರ್ಮಿಸಲಾಗುತ್ತಿದೆ. ಅಂತರರಾಷ್ಟ್ರೀಯ ಮಟ್ಟದ ಸಂಗೀತ ಕಾರ್ಯಕ್ರಮಗಳಿಗೆ ಅನುಗುಣವಾಗಿ ಜರ್ಮನ್ ತಂತ್ರಜ್ಞಾನ ಆಧಾರಿತ ಧ್ವನಿ ವ್ಯವಸ್ಥೆ, ಮಿಕ್ಸರ್ ಹಾಗೂ ಅತ್ಯಾಧುನಿಕ ಲೈಟಿಂಗ್ ಮತ್ತು ಲೇಸರ್ ವ್ಯವಸ್ಥೆಗಳನ್ನು ಅಳವಡಿಸಲಾಗುತ್ತಿದೆ. ಪ್ರೇಕ್ಷಕರಿಗೆ ಉನ್ನತ ಗುಣಮಟ್ಟದ ಧ್ವನಿ ಮತ್ತು ಬೆಳಕಿನ ಅನುಭವ ನೀಡುವುದು ಇದರ ಉದ್ದೇಶವಾಗಿದೆ. ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಆಗಮಿಸುವ ನಿರೀಕ್ಷೆಯಿರುವುದರಿಂದ ಪೊಲೀಸ್ ಇಲಾಖೆಯ ಸಹಯೋಗದೊಂದಿಗೆ ಸೂಕ್ತ ಭದ್ರತಾ ವ್ಯವಸ್ಥೆ ಕೈಗೊಳ್ಳಲಾಗುತ್ತಿದೆ. ಪೊಲೀಸ್ ಸಿಬ್ಬಂದಿ, ಗೃಹರಕ್ಷಕ ದಳ, ಕೆಎಸ್‌ಆರ್‌ಪಿ, ಡಿಎಆರ್, ಕ್ಯೂಆರ್‌ಟಿ ತಂಡಗಳು ಹಾಗೂ ಇತರ ಭದ್ರತಾ ಘಟಕಗಳನ್ನು ನಿಯೋಜಿಸುವ ಯೋಜನೆಯಿದೆ ಎಂದರು.

ಜೊತೆಗೆ ಡ್ರೋನ್‌ಗಳು ಮತ್ತು ಸಿಸಿಟಿವಿ ಕ್ಯಾಮೆರಾಗಳ ಮೂಲಕ ನಿಗಾ ವಹಿಸುವ ವ್ಯವಸ್ಥೆಯನ್ನೂ ಕೈಗೊಳ್ಳಲಾಗುತ್ತಿದೆ. ಸಾರ್ವಜನಿಕರ ಸುರಕ್ಷತೆ, ಸುಗಮ ಸಂಚಾರ ಮತ್ತು ಕಾರ್ಯಕ್ರಮದ ಶಾಂತಿಯುತ ನಿರ್ವಹಣೆಗೆ ಆದ್ಯತೆ ನೀಡಲಾಗುವುದು. ಯುವ ದಸರಾ ಕೇವಲ ಸಂಗೀತ ಕಾರ್ಯಕ್ರಮವಲ್ಲ ಯುವಜನರ ಪ್ರತಿಭೆ, ಸಂಗೀತ, ಕಲೆ, ಸಂಸ್ಕೃತಿ ಮತ್ತು ಮನರಂಜನೆಯನ್ನು ಒಂದೇ ವೇದಿಕೆಯಲ್ಲಿ ಪರಿಚಯಿಸುವ ಉತ್ಸವವಾಗಿದೆ. ಮೈಸೂರಿನ ಸಾಂಸ್ಕೃತಿಕ ಪರಂಪರೆಯನ್ನು ಜಾಗತಿಕ ಮಟ್ಟದಲ್ಲಿ ಪರಿಚಯಿಸುವುದರ ಜೊತೆಗೆ ಸ್ಥಳೀಯ ಪ್ರವಾಸೋದ್ಯಮ ಮತ್ತು ಆರ್ಥಿಕ ಚಟುವಟಿಕೆಗಳಿಗೆ ಉತ್ತೇಜನ ನೀಡುವುದು ಇದರ ಆಶಯವಾಗಿದೆ. ಮೈಸೂರು ಯುವ ದಸರಾ 2026ಕ್ಕೆ ಸಾರ್ವಜನಿಕರು, ಯುವಜನರು ಹಾಗೂ ಸಂಗೀತಾಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವಂತೆ ಮನವಿ ಮಾಡಿದರು. ಪತ್ರಿಕಾಗೋಷ್ಠಿಯಲ್ಲಿ ಯುವ ದಸರಾ ಕಾರ್ಯಧ್ಯಕ್ಷ ಸೋಮಶೇಖರ್ ಇತರರು ಹಾಜರಿದ್ದರು.

ಅಧಿಕಾರೇತರ ಸಮಿತಿ ರಚನೆ

ಯುವ ದಸರಾ ಉತ್ಸವದ ಯಶಸ್ವಿ ಆಯೋಜನೆ ಹಾಗೂ ಕಾರ್ಯಕ್ರಮಗಳ ಸಮರ್ಪಕ ನಿರ್ವಹಣೆಯ ಉದ್ದೇಶದಿಂದ ಯುವ ದಸರಾ ಉಪಸಮಿತಿಯ ಅಧಿಕಾರೇತರ ಸಮಿತಿಯ ಅಧ್ಯಕ್ಷರನ್ನಾಗಿ ರಾಯರ ಉಂಡಿ ರವಿ ಅವರನ್ನು ನೇಮಕ ಮಾಡಲಾಗಿದೆ. ಇವರೊಂದಿಗೆ ಒಟ್ಟು 187 ಸದಸ್ಯರು ಸಮಿತಿಯಲ್ಲಿ ಕಾರ್ಯನಿರ್ವಹಿಸಲಿದ್ದು, ಯುವ ದಸರಾ ಕಾರ್ಯಕ್ರಮಗಳ ಆಯೋಜನೆ, ಸಂಘಟನೆ ಮತ್ತು ಯಶಸ್ವಿ ಅನುಷ್ಠಾನದಲ್ಲಿ ಸಹಕರಿಸಲಿದ್ದಾರೆ.

ಅ.13	ಉದ್ಘಾಟನೆ(ಅಜನೀಶ್ ಲೋಕನಾಥ್ ಸಂಗೀತ)
ಅ.14	ಶಂಕರ್ ಎಹ್ಸಾನ್ ಲಾಯ್
ಅ.15	ಸಿದ್ ಶ್ರೀರಾಮ್
ಅ.16	ಸ್ಯಾಂಡಲ್‌ವುಡ್ ನೈಟ್ಸ್
ಅ.17	ಜಾಸ್ಮಿನ್ ಸ್ಯಾಂಡ್ಲಾಸ್

ಮೊದಲ ಪುಟದಿಂದ

ಪ್ರತಿಭಟನೆ ನಿಷೇಧ

ಪ್ರತಿಭಟನೆ ನಡೆಸಲು ಮೂರು ಪರ್ಯಾಯ ಮೈದಾನಗಳನ್ನು ನಿಗದಿ ಪಡಿಸಲಾಗಿದೆ. ರಾಮಲೀಲಾ ಮೈದಾನ, ಬುರಾರಿ ಮೈದಾನ, ಪೂರ್ವ ದೆಹಲಿಯ ಸಿಬಿಡಿ ಮೈದಾನದಲ್ಲಿ ಪ್ರತಿಭಟನೆ ನಡೆಸಲು ನಿಗದಿ ಮಾಡಲಾಗಿದೆ.

ಯಾವುದೇ ವ್ಯಕ್ತಿ ಮುಖ್ಯವಲ್ಲ!

ನೀಡಿದರು. ನಾನು ಈಗ ಬೇರೆ ಯಾವ ಪ್ರಶ್ನೆಗಳಿಗೂ ಈಗ ಉತ್ತರ ಕೊಡಲ್ಲ. ಬೇರೆ ಯಾವುದೇ ವಿಷಯವನ್ನ ಇಲ್ಲಿ ತರೋದು ಬೇಡ, ಮುಕ್ತ ಮನಸ್ಸಿನಿಂದ ರಾಷ್ಟ್ರೀಯ ಸಮ್ಮೇಳನ ಕಾರ್ಯಕ್ರಮ ನಡೆಸುತ್ತಿದ್ದೇವೆ ಎಲ್ಲರೂ ಪಾಲ್ಗೊಳ್ಳಿ ಎಂದು ಹೇಳಿ ಜಾರಿಕೊಂಡಿದ್ದಾರೆ.

ಕಂಗೊಳಿಸಿದ ದೀಪಾಲಂಕಾರ

ವ್ಯವಸ್ಥೆಯನ್ನು ಪರ್ಯಾಯವಾಗಿ ಕಲ್ಪಿಸಲಾಗಿದೆ. ಹೀಗಿದ್ದರೂ ಸಹ ದೀಪಾಲಂಕಾರ ವೀಕ್ಷಿಸಲು ಜನಸಂದಣಿ ಹೆಚ್ಚಾಗಿ ಆಗಮಿಸಿದ್ದರಿಂದ ಎಲ್ಲೆಡೆ ಸಂಚಾರ ದಟ್ಟಣೆ ಹೆಚ್ಚಾಗಿತ್ತು. ಅಲ್ಲದೆ, ಅರಮನೆ ಬೆಳಕಿನಲ್ಲಿ ಸಾಂಸ್ಕೃತಿಕ ಕಾರ್ಯಕ್ರಮದ ಅಂದು ಕಣ್ತುಂಬಿಕೊಳ್ಳಲು ಸಾವಿರಾರು ಮಂದಿ ಸಂಭ್ರಮಿಸುತ್ತಿದ್ದದ್ದು ಕಂಡು ಬಂತು.

ದಸರಾ ಯುವ ಸಂಭ್ರಮ



ಬಂಡಿಸಿದ್ದೇಗೌಡ ಮಾತನಾಡಿ, ಮೈಸೂರು ದಸರಾ ಮಾದರಿಯಲ್ಲಿ ಶ್ರೀರಂಗಪಟ್ಟಣದಲ್ಲಿಯೂ ಯುವ ಸಂಭ್ರಮ ಆಯೋಜಿಸುವ ಮೂಲಕ ಜಿಲ್ಲೆಯ ಯುವ ಪ್ರತಿಭೆಗಳಿಗೆ ಸೂಕ್ತ ವೇದಿಕೆ ಕಲ್ಪಿಸುವ ಪ್ರಯತ್ನ ಮಾಡಲಾಗಿದೆ. ಈ ಬಾರಿ ಆರಂಭಿಸಿರುವ ಯುವ ಸಂಭ್ರಮ ಮುಂದಿನ ವರ್ಷಗಳಲ್ಲಿಯೂ ನಿರಂತರವಾಗಿ ಮುಂದುವರಿಯಬೇಕು. ಜಿಲ್ಲೆಯ ಯುವಜನರಿಗೆ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಲು ಹೆಚ್ಚಿನ ಅವಕಾಶಗಳು ದೊರೆಯಬೇಕು ಎಂದು ಆಶಿಸಿದರು. ಶ್ರೀರಂಗಪಟ್ಟಣ ದಸರಾ ಈ ಹಿಂದೆ ಕೆಲವೇ ದಿನಗಳ ಕಾರ್ಯಕ್ರಮಗಳಿಗೆ ಸೀಮಿತವಾಗಿತ್ತು. ಮೈಸೂರು ದಸರಾ ಯುವ ಸಂಭ್ರಮದಲ್ಲಿ ಜಿಲ್ಲೆಯ ಯುವಕರು ಭಾಗವಹಿಸುವಂತೆ, ಇಲ್ಲಿಯೂ ಸ್ಥಳೀಯ ಪ್ರತಿಭೆಗಳಿಗೆ ಅಂತಹದ್ದೇ ಅವಕಾಶ ಕಲ್ಪಿಸಬೇಕು ಎಂಬ ಉದ್ದೇಶದಿಂದ ಈ ಹೊಸ ಪ್ರಯತ್ನಕ್ಕೆ ಚಾಲನೆ ನೀಡಲಾಗಿದೆ ಎಂದು ಹೇಳಿದರು. ಯುವ ಸಂಭ್ರಮವನ್ನು ಯಶಸ್ವಿಯಾಗಿ ಆಯೋಜಿಸಲು ಜಿಲ್ಲಾಡಳಿತದ ಅಧಿಕಾರಿಗಳು, ಸಿಬ್ಬಂದಿ ಹಾಗೂ ಸಮಿತಿಯ ಸದಸ್ಯರು ಸಂಘಟಿತವಾಗಿ ಶ್ರಮಿಸಿದ್ದಾರೆ. ಯಾವುದೇ ಕಾರ್ಯಕ್ರಮದ ಯಶಸ್ಸಿಗೆ ಸಮನ್ವಯ, ಸಹಕಾರ ಮತ್ತು ಸಮರ್ಪಣಾ ಮನೋಭಾವ ಮುಖ್ಯವಾಗಿದ್ದು, ಎಲ್ಲರ ಪರಿಶ್ರಮದಿಂದ ಕಾರ್ಯಕ್ರಮ ಅಚ್ಚುಕಟ್ಟಾಗಿ ಮೂಡಿಬಂದಿದೆ ಎಂದು ಶ್ಲಾಘಿಸಿದರು.

ಪ್ರತಿಯೊಬ್ಬ ವಿದ್ಯಾರ್ಥಿಯಲ್ಲೂ ಪ್ರತಿಭೆ ಅಡಗಿದೆ: ಜಿಲ್ಲಾಧಿಕಾರಿ ಡಾ. ಕುಮಾರ

ಜಿಲ್ಲಾಧಿಕಾರಿ ಡಾ. ಕುಮಾರ ಮಾತನಾಡಿ, ಶ್ರೀರಂಗಪಟ್ಟಣ ದಸರಾ ಮಹೋತ್ಸವದ ಅಂಗವಾಗಿ ಇದೇ ಮೊದಲ ಬಾರಿಗೆ ಯುವ ಸಂಭ್ರಮ ಆಯೋಜಿಸಿರುವುದು ಅರ್ಥಪೂರ್ಣ ಬೆಳವಣಿಗೆಯಾಗಿದೆ. ಯುವಜನರಲ್ಲಿರುವ ಪ್ರತಿಭೆಯನ್ನು ಗುರುತಿಸಿ, ಅವರಿಗೆ ಅದನ್ನು ಅನಾವರಣಗೊಳಿಸಲು ಅವಕಾಶ ಕಲ್ಪಿಸುವುದು ಈ ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿದೆ ಎಂದು ತಿಳಿಸಿದರು.

ಶಾಸಕರಾದ ರಮೇಶ್ ಬಂಡಿಸಿದ್ದೇಗೌಡ ಅವರ ಪರಿಕಲ್ಪನೆಯಂತೆ ಯುವ ಸಂಭ್ರಮಕ್ಕೆ ಚಾಲನೆ ನೀಡಲಾಗಿದ್ದು, ಅದನ್ನು ಯಶಸ್ವಿಯಾಗಿ ಕಾರ್ಯರೂಪಕ್ಕೆ ತರುವಲ್ಲಿ ಸಮಿತಿಯ ಸದಸ್ಯರು ಹಾಗೂ ಅಧಿಕಾರಿಗಳು ಒಗ್ಗಟ್ಟಿನಿಂದ ಶ್ರಮಿಸಿದ್ದಾರೆ ಎಂದರು.

ಪ್ರತಿಯೊಬ್ಬ ವಿದ್ಯಾರ್ಥಿಯಲ್ಲಿಯೂ ಒಂದಲ್ಲೊಂದು ಪ್ರತಿಭೆ ಅಡಗಿರುತ್ತದೆ. ಅದನ್ನು ಪ್ರದರ್ಶಿಸಲು ಸೂಕ್ತ ವೇದಿಕೆ ದೊರೆಯದಿದ್ದರೆ ಪ್ರತಿಭೆ ಬೆಳಕಿಗೆ ಬಾರದೆ ಉಳಿಯುವ ಸಾಧ್ಯತೆ ಇದೆ. ಈ ಹಿನ್ನೆಲೆಯಲ್ಲಿ ಯುವ ಸಂಭ್ರಮ ವಿದ್ಯಾರ್ಥಿಗಳಿಗೆ ತಮ್ಮ ಕಲಾ ಸಾಮರ್ಥ್ಯ ಪ್ರದರ್ಶಿಸಲು ಮತ್ತು ಆತ್ಮವಿಶ್ವಾಸ ಬೆಳೆಸಿಕೊಳ್ಳಲು ಉತ್ತಮ ಅವಕಾಶ ಕಲ್ಪಿಸಿದೆ. ಜಿಲ್ಲೆಯ ವಿವಿಧ ಕಾಲೇಜುಗಳ ವಿದ್ಯಾರ್ಥಿಗಳು ಉತ್ಸಾಹದಿಂದ ಪಾಲ್ಗೊಂಡಿರುವುದು ಸಂತಸದ ಸಂಗತಿ ಎಂದು ಹೇಳಿದರು.

ಕಾರ್ಯಕ್ರಮದ ಯಶಸ್ಸಿಗೆ ಶ್ರಮಿಸಿದ ಯುವ ಸಂಭ್ರಮ ಸಮಿತಿಯ ಸದಸ್ಯರು ಹಾಗೂ ಅಧಿಕಾರಿಗಳ ಕಾರ್ಯವನ್ನು ಅಭಿನಂದಿಸಿದ ಅವರು, ಎಲ್ಲರ ಸಂಘಟಿತ ಪ್ರಯತ್ನದಿಂದ ಕಾರ್ಯಕ್ರಮ ಉತ್ತಮವಾಗಿ ಮೂಡಿಬಂದಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಯುವ ಸಂಭ್ರಮದ ಲೋಗೋ ಬಿಡುಗಡೆ

ಇದೇ ಸಂದರ್ಭದಲ್ಲಿ ಚಲನಚಿತ್ರ ನಟಿ ಅದಿತಿ ಪ್ರಭುದೇವ ಅವರು ಶ್ರೀರಂಗಪಟ್ಟಣ ದಸರಾ ಮಹೋತ್ಸವದ ಯುವ ಸಂಭ್ರಮ ಕಾರ್ಯಕ್ರಮದ ಲೋಗೋವನ್ನು ಬಿಡುಗಡೆ ಮಾಡಿದರು.

ಕಾರ್ಯಕ್ರಮಕ್ಕೂ ಮುನ್ನ ವಿವಿಧ ಜಾನಪದ ಕಲಾತಂಡಗಳಿಂದ ಡೊಳ್ಳು ಕುಣಿತ, ವೀರಗಾಸೆ, ಕಂಸಾಳೆ ಸೇರಿದಂತೆ ಹಲವು ಸಾಂಪ್ರದಾಯಿಕ ಕಲಾ ಪ್ರದರ್ಶನಗಳು ನಡೆದವು. ಕಲಾವಿದರ ಆಕರ್ಷಕ ಪ್ರದರ್ಶನಗಳು ನೆರೆದಿದ್ದವರ ಗಮನ ಸೆಳೆದವು. ಜಾನಪದ ಕಲೆ ಮತ್ತು ಸಾಂಸ್ಕೃತಿಕ ಪರಂಪರೆಯ ವೈಭವವನ್ನು ಅನಾವರಣಗೊಳಿಸಿದ ಕಲಾತಂಡಗಳಿಗೆ ಮೆಚ್ಚುಗೆ ವ್ಯಕ್ತವಾಯಿತು. ಈ ಸಂದರ್ಭದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ವಿ.ಜೆ. ಶೋಭಾರಾಣಿ, ಅಪರ ಜಿಲ್ಲಾಧಿಕಾರಿ ಬಿ.ಸಿ. ಶಿವಾನಂದಮೂರ್ತಿ, ಮಂಡ್ಯ ವಿಶ್ವವಿದ್ಯಾಲಯದ ಕುಲಪತಿ ಕಲ್ಪಶ್ರೀ, ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಪಿ. ಲಕ್ಷ್ಮಿ, ತಾಲ್ಲೂಕು ಗ್ಯಾರಂಟಿ ಯೋಜನೆ ಸಮಿತಿ ಅಧ್ಯಕ್ಷ ದಿನೇಶ್ ಸೇರಿದಂತೆ

ಲೈಂಗಿಕ ಕಿರುಕುಳ: ಜೆಎನ್‌ಯು ವಿದ್ಯಾರ್ಥಿನಿಯರಿಗೆ ನ್ಯಾಯಕ್ಕಾಗಿ ಆಗ್ರಹ

ಮೈಸೂರು: ದೆಹಲಿ ಜವಾಹರಲಾಲ್ ನೆಹರು ವಿಶ್ವವಿದ್ಯಾಲಯದ(ಜೆಎನ್ಯು) ಪ್ರಾಧ್ಯಾಪಕ ಹಾಗೂ ಮಣಿಪುರದ ಸಂಸದ ಪ್ರೊ.ಅಂಗೋಮ್ಚಾ ಬಿಮೋಲ್ ಅಕೋಯಿಜಮ್ ವಿರುದ್ಧ 11 ವಿದ್ಯಾರ್ಥಿನಿಯರು ಲೈಂಗಿಕ ಕಿರುಕುಳದ ಆರೋಪವನ್ನು ಗಂಭೀರವಾಗಿ ಪರಿಗಣಿಸುವಂತೆ ಆಗ್ರಹಿಸಿ ಮೈಸೂರು ನಗರ ಮಹಿಳಾ ಮೋರ್ಚಾದಿಂದ ನಗರದಲ್ಲಿ ಪ್ರತಿಭಟಿಸಿದರು.

ನಗರದ ನಂಜರಾಜ ಬಹದ್ದೂರ್ ಛತ್ರದ ಸಮೀಪದಲ್ಲಿ ಜಮಾವಣೆಗೊಂಡ ಮಹಿಳಾ ಮೋರ್ಚಾದ ಕಾರ್ಯಕರ್ತೆಯರು ನಾನಾ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಈ ಪ್ರಕರಣದ ಕುರಿತು ವಿಶ್ವವಿದ್ಯಾಲಯದ ಆಂತರಿಕ ಸಮಿತಿಯ ತನಿಖೆಯ ನಂತರ, 2026ರ ಅ.9ರಂದು ಅವರನ್ನು ಪ್ರಾಧ್ಯಾಪಕ ಹುದ್ದೆಯಿಂದ ವಜಾಗೊಳಿಸುವ ಆದೇಶ ಹೊರಡಿಸಲಾಗಿದೆ ಎಂದು ವರದಿಗಳು ತಿಳಿಸಿವೆ. ಅವರು ಈ ಹಿಂದಿನ ಆರೋಪಗಳನ್ನು ನಿರಾಕರಿಸಿದ್ದರು. ಪ್ರಕರಣಕ್ಕೆ ಸಂಬಂಧಿಸಿದ ಪ್ರಕ್ರಿಯೆಗಳ ಬಗ್ಗೆಯೂ ಕೆಲವು ವಿದ್ಯಾರ್ಥಿ ಪ್ರತಿನಿಧಿಗಳು ಆಕ್ಷೇಪ ವ್ಯಕ್ತಪಡಿಸಿರುವ ವರದಿಗಳಿವೆ. ಶಿಕ್ಷಣ ಸಂಸ್ಥೆಗಳು ವಿದ್ಯಾರ್ಥಿನಿಯರಿಗೆ ಜ್ಞಾನ, ಆತ್ಮವಿಶ್ವಾಸ ಮತ್ತು ಸುರಕ್ಷತೆಯನ್ನು ನೀಡುವ ಸ್ಥಳಗಳಾಗಿರಬೇಕು. ವಿದ್ಯಾರ್ಥಿನಿಯರ ದೂರುಗಳನ್ನು ಗಂಭೀರವಾಗಿ ಪರಿಗಣಿಸಿ, ಪಾರದರ್ಶಕ ತನಿಖೆ ನಡೆಸಿ, ಕಾನೂನು ಮತ್ತು ನಿಯಮಗಳ ಪ್ರಕಾರ ನ್ಯಾಯ ಒದಗಿಸುವುದು ಅತ್ಯಗತ್ಯ. ಮಹಿಳೆಯರ ಹಕ್ಕುಗಳ ಬಗ್ಗೆ ಮಾತನಾಡುವ ಎಲ್ಲ ರಾಜಕೀಯ ಪಕ್ಷಗಳೂ ಇಂತಹ ಗಂಭೀರ ಪ್ರಕರಣಗಳಲ್ಲಿ ಹೊಣೆಗಾರಿಕೆ ಮತ್ತು ಪಾರದರ್ಶಕತೆಯನ್ನು ಎತ್ತಿಹಿಡಿಯಬೇಕು ಎಂದರು.

ನಗರ ಮಹಿಳಾ ಮೋರ್ಚಾದ ಅಧ್ಯಕ್ಷೆ ಮೋನಿಕಾ, ಪ್ರಧಾನ ಕಾರ್ಯದರ್ಶಿ ಕಾವೇರಿ, ರಶ್ಮಿ, ಮುಖಂಡ ಹೇಮಂತ್, ಮಹಾನಗರ ಪ್ರಧಾನ ಕಾರ್ಯದರ್ಶಿಗಳಾದ ಸೋಮಸುಂದರ, ಸಿ.ಕೆ.ರುದ್ರಮೂರ್ತಿ, ಉಪಾಧ್ಯಕ್ಷ ಟಿ.ಎನ್.ಶಾಂತ, ನಗರಪಾಲಿಕೆ ಮಾಜಿ ಸದಸ್ಯೆ ಪ್ರಮೀಳಾ ಭರತ್, ರಾಜ್ಯ ಮಹಿಳಾ ಮೋರ್ಚಾ ಉಪಾಧ್ಯಕ್ಷೆ ಪ್ರಫುಲ್ಲ ಮಲ್ಲಾಡಿ, ಮುಖಂಡರಾದ ಹೇಮಾ ನಂದೀಶ್, ಶೋಭಾ, ಲಕ್ಷ್ಮೀ, ಮಹಿಳಾ ಮೋರ್ಚಾ ಮಂಡಲ ಅಧ್ಯಕ್ಷರಾದ ಚಂದ್ರಕಲಾ, ಸರ್ವಮಂಗಳ, ಪುಟಮ್ಮಣಿ, ಅನಿತಾ, ಮಂಜುಳಾ, ಸುಧಾಮಣಿ, ರೂಪಾ, ವತ್ಸಲಾ, ರಶ್ಮಿ, ಮಂಜುಳಾ, ಗ್ರಾಮಾಂತರ ಮಹಿಳಾ ಮೋರ್ಚಾದ ವೆಂಕಟಮ್ಮ, ಪೂರ್ಣಿಮಾ, ಜಯಲಕ್ಷ್ಮೀ, ಉಪಾಧ್ಯಕ್ಷ ಮೈಪು ರಾಜೇಶ್, ಮುರಳೀಧರ, ರಾಕೇಶ್ ಗೌಡ, ಮಂಡಲ ಅಧ್ಯಕ್ಷ ದಿನೇಶ್ ಗೌಡ, ಪೈ.ಟಿ.ರವಿ, ಮಂಜುನಾಥ, ರಾಕೇಶ್ ಭಟ್ಟ ಇತರರು ಇದ್ದರು.

ಭೋವಿ ಸಮಾಜದ ಜಮೀನು ಒತ್ತುವರಿ ತೆರವಿಗೆ ಆಗ್ರಹ

ವಿದ್ಯಾರ್ಥಿನಿಲಯದ ಜಮೀನು ಅತಿಕ್ರಮಣ ಖಂಡಿಸಿ ಪ್ರತಿಭಟನೆ

ಎಚ್.ಡಿ.ಕೋಟೆ: ಭೋವಿ ಸಮಾಜದ ಬಡ ಮಕ್ಕಳ ವಿದ್ಯಾರ್ಥಿನಿಲಯ ನಿರ್ಮಾಣಕ್ಕಾಗಿ ಸರ್ಕಾರ ಮಂಜೂರು ಮಾಡಿರುವ 15 ಎಕರೆ ಜಮೀನಿನ ಒತ್ತುವರಿ ತೆರವುಗೊಳಿಸಿ, ಸಮಾಜಕ್ಕೆ ನ್ಯಾಯ ಒದಗಿಸಬೇಕು ಎಂದು ಆಗ್ರಹಿಸಿ ಭೋವಿ ಸಮಾಜದ ಮುಖಂಡರು ಪಟ್ಟಣದ ತಹಶೀಲ್ದಾರ್ ಕಚೇರಿ ಎದುರು ಧರಣಿ ನಡೆಸಿದರು. ಭೋವಿ ಸಮಾಜದ ಎಚ್.ಡಿ. ಕೋಟೆ ಹಾಗೂ ಸರಗೂರು ತಾಲೂಕುಗಳ ಅಧ್ಯಕ್ಷ ಐಡಿಯಾ ವೆಂಕಟೇಶ್ ನೇತೃತ್ವದಲ್ಲಿ ನಡೆದ ಈ ಪ್ರತಿಭಟನೆಯಲ್ಲಿ, ಸಮಾಜಕ್ಕೆ ಸೇರಿದ ಜಮೀನನ್ನು ಅತಿಕ್ರಮಿಸಿಕೊಂಡು ತೊಂದರೆ ನೀಡಲಾಗುತ್ತಿದ್ದು, ಕೂಡಲೇ ಒತ್ತುವರಿ

ವರ್ತಮಾನ

ವರ್ತಮಾನ
ದಸರಾ ವಿಶೇಷ









ಚರ್ಚೆಗೆ ಬರುವಂತೆ ಕೈ ಸವಾಲು

ಸರಗೂರು: ಎಚ್.ಡಿ. ಕೋಟೆ ಹಾಗೂ ಸರಗೂರು ಅವಳಿ ತಾಲೂಕುಗಳ ಅಭಿವೃದ್ಧಿ ಕಾಮಗಾರಿಗಳ ಕುರಿತು ಬಹಿರಂಗ ಚರ್ಚೆಗೆ ಬರುವಂತೆ ಬಿಜೆಪಿ ಜಿಲ್ಲಾಧ್ಯಕ್ಷ ಕುಂಬ್ರಳ್ಳಿ ಸುಬ್ಬಣ್ಣ ಅವರಿಗೆ ಕಾಂಗ್ರೆಸ್ ಎಸ್ಟಿ ಘಟಕದ ಮುಖಂಡರು ಸವಾಲು ಹಾಕಿದ್ದಾರೆ.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಮಾತನಾಡಿದ ಕಾಂಗ್ರೆಸ್ ಎಸ್ಟಿ ಘಟಕದ ಮುಖಂಡರು, ಶಾಸಕ ಅನಿಲ್ ಚಿಕ್ಕಮಾದು ಅವರ ಅಭಿವೃದ್ಧಿ ಕಾರ್ಯಗಳು ಶೂನ್ಯ ಎಂದು ಬಿಜೆಪಿ ಜಿಲ್ಲಾಧ್ಯಕ್ಷ ಕುಂಬ್ರಳ್ಳಿ ಸುಬ್ಬಣ್ಣ ನೀಡಿರುವ ಹೇಳಿಕೆಯನ್ನು ಖಂಡಿಸಿದರು. ಜವಾಬ್ದಾರಿಯುತ ಸ್ಥಾನದಲ್ಲಿರುವ ಸುಬ್ಬಣ್ಣ ಅವರು ಜನರಲ್ಲಿ ಗೊಂದಲ ಮೂಡಿಸುವಂತಹ ಹೇಳಿಕೆಗಳನ್ನು ನೀಡುವ ಬದಲು, ತಾಲೂಕುಗಳಲ್ಲಿ ನಡೆದಿರುವ ಅಭಿವೃದ್ಧಿ ಕಾಮಗಾರಿಗಳ ಕುರಿತು ಬಹಿರಂಗ ಚರ್ಚೆಗೆ ಬರಬೇಕು ಎಂದು ಆಗ್ರಹಿಸಿದರು.

ಇತ್ತೀಚೆಗೆ ಮಾಧ್ಯಮಗಳ ಮೂಲಕ ಮಾತನಾಡಿದ್ದ ಬಿಜೆಪಿ ಜಿಲ್ಲಾಧ್ಯಕ್ಷ ಕುಂಬ್ರಳ್ಳಿ ಸುಬ್ಬಣ್ಣ, ಎಚ್.ಡಿ. ಕೋಟೆ ಹಾಗೂ ಸರಗೂರು ತಾಲೂಕುಗಳಲ್ಲಿ ಶಾಸಕ ಅನಿಲ್ ಚಿಕ್ಕಮಾದು ಅವರು ಗುದ್ದಲಿಪೂಜೆ ನೆರವೇರಿಸುತ್ತಾರೆಯೇ ಹೊರತು, ಕಾಮಗಾರಿಗಳು ಸಮರ್ಪಕವಾಗಿ ನಡೆಯುತ್ತಿಲ್ಲ ಎಂದು ಆರೋಪಿಸಿದ್ದರು. ಅಲ್ಲದೆ, ತಾಲೂಕುಗಳಲ್ಲಿ ಕೈಗೊಂಡಿರುವ ಅಭಿವೃದ್ಧಿ ಕಾಮಗಾರಿಗಳ ವಿವರ ಹಾಗೂ ಅವುಗಳಿಗೆ ವೆಚ್ಚ ಮಾಡಿರುವ ಅನುದಾನದ ಕುರಿತು ಶ್ವೇತಪತ್ರ ಹೊರಡಿಸುವಂತೆ ಒತ್ತಾಯಿಸಿದ್ದರು.

ಈ ಹೇಳಿಕೆಗೆ ಪ್ರತಿಕ್ರಿಯಿಸಿದ ಕಾಂಗ್ರೆಸ್ ಮುಖಂಡರು, ಅಭಿವೃದ್ಧಿ ಕಾಮಗಾರಿಗಳ ಬಗ್ಗೆ ಆರೋಪಿಸುವವರು ವಾಸ್ತವಾಂಶಗಳೊಂದಿಗೆ ಚರ್ಚೆಗೆ ಬರಬೇಕು. ಶಾಸಕ ಅನಿಲ್ ಚಿಕ್ಕಮಾದು ಅವರ ಅಭಿವೃದ್ಧಿ ಕಾರ್ಯಗಳ ಕುರಿತು ಬಹಿರಂಗ ಚರ್ಚೆ ನಡೆಸಲು ಕಾಂಗ್ರೆಸ್ ಸಿದ್ಧವಿದೆ ಎಂದು ತಿಳಿಸಿದರು. ಕಾಂಗ್ರೆಸ್ ಎಸ್ಟಿ ಘಟಕದ ತಾಲ್ಲೂಕು ಅಧ್ಯಕ್ಷ ಇಟ್ನಾ ಈರನಾಯಕ, ಮುಖಂಡರಾದ ಸರಗೂರು ತಿಮ್ಮರಾಜು, ಸಾಗರೆ ಗ್ರಾಮದ ಸೋಮಣ್ಣ, ಜಯಪ್ಪ ಹಾಗೂ ಹೆಗ್ಗುಡಿಲು ಗ್ರಾಮದ ಬೆಟ್ಟನಾಯಕ ಇದ್ದರು.

ಪುಸ್ತಕಗಳ ವೀಕ್ಷಿಸಿದ ಶ್ರೀಗಳು

ಮೈಸೂರು: ವಿಶ್ವವಿಖ್ಯಾತ ನಾಡಹಬ್ಬ ಮೈಸೂರು ದಸರಾ ಮಹೋತ್ಸವ 2026ರ ಉದ್ಘಾಟನೆಮಾಡಿದ ಕೊಪ್ಪಳದ ಗವಿಮಠದ ಶ್ರೀ ಅಭಿನವ ಗವಿ ಸಿದ್ದೇಶ್ವರ ಸ್ವಾಮೀಜಿ ಅವರು ದಸರಾ ಪುಸ್ತಕ ಮೇಳದಲ್ಲಿ ವಿವಿಧ ಪುಸ್ತಕಗಳನ್ನು ವೀಕ್ಷಣೆ ಮಾಡಿದರು.

ನಗರದ ಭಾರತ್ ಸೌಟ್ಸ್ ಮತ್ತು ಗೈಡ್ಸ್ ಮೈದಾನದಲ್ಲಿ ಮೈಸೂರು ದಸರಾ ಮಹೋತ್ಸವ–2026ರ ಅಂಗವಾಗಿ ಅ.11 ರಿಂದ 20ರವರೆಗೆ "ಕನ್ನಡ ಪುಸ್ತಕಗಳ ರಿಯಾಯಿತಿ ಮಾರಾಟ ಮೇಳವನ್ನು ಆಯೋಜಿಸಲಾಗಿದ್ದು, ಸೋಮವಾರ ದಸರಾ ಪುಸ್ತಕ ಮೇಳದ ಮಳಿಗೆಗಳಿಗೆ ಭೇಟಿಕೊಟ್ಟ ಅವರು, ಹಲವಾರು ಪುಸ್ತಕಗಳನ್ನು ವೀಕ್ಷಣೆ ಮಾಡಿ, ಪುಸ್ತಕದಲ್ಲಿನ ಬರವಣಿಗೆಯನ್ನು ಕಣ್ಣಾಡಿಸಿದರು. ಸುಮಾರು ಒಂದು ಗಂಟೆಗೂ ಅಧಿಕ ಸಮಯವನ್ನು ಪುಸ್ತಕ ಮೇಳದಲ್ಲಿ ಪುಸ್ತಕಗಳ ವೀಕ್ಷಣೆಯಲ್ಲಿ ಕೆಳೆ ಸ್ವಾಮೀಜಿ ಅವರು,ಕೆಲವು ಪುಸ್ತಕಗಳ ಹೆಸರು ಮತ್ತು ಲೇಖಕರ ಹಸರನ್ನು ಸ್ವತಃ ತಮ್ಮ ನೋಟ್ ಪುಸ್ತಕದಲ್ಲಿ ಬರೆದುಕೊಂಡರು. ಸ್ವಾಮೀಜಿ ಅವರಿಗೆ ವಿವಿಧ ಪ್ರಕಾಶಕರು ತಮ್ಮ ಪ್ರಕಾಶನದಲ್ಲಿ ಮುದ್ರಣಗೊಂಡಿರುವ ಪುಸ್ತಕಗಳನ್ನು ನೀಡಿದರು. ಈ ಸಂದರ್ಭದಲ್ಲಿ ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷ ಡಾ.ಮಾನಸ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ಎಸ್.ನಿರ್ಮಲ ಮಠಾಪತಿ, ಕನ್ನಡ ಪುಸ್ತಕ ಪ್ರಾಧಿಕಾರ ಆಡಳಿತಾಧಿಕಾರಿ ಕೆ.ಬಿ. ಕಿರಣ್ ಸಿಂಗ್, ಮೈಸೂರು ಜಿಲ್ಲಾ ಸಾಹಿತ್ಯ ಪರಿಷತ್ ಮಾಜಿ ಅಧ್ಯಕ್ಷ ಚಂದ್ರಶೇಖರ್ ಇದ್ದರು.

ನ.26ರಿಂದ ರಾಷ್ಟ್ರೀಯ ವಿಚಾರ ಸಂಕಿರಣ

77ನೇ ಸಂವಿಧಾನ ದಿನಾಚರಣೆ । ಮಾಜಿ ಸಚಿವ ಡಾ.ಎಚ್.ಸಿ.ಮಹದೇವಪ್ಪ ಮಾಹಿತಿ

ಮೈಸೂರು: 77ನೇ ಸಂವಿಧಾನ ದಿನಾಚರಣೆಯ ಅಂಗವಾಗಿ ಸಂವಿಧಾನದ ಧ್ವನಿ ಭಾರತೀಯರ ಜೀವಧ್ವನಿ ಆಶಯದಲ್ಲಿ ನವೆಂಬರ್ 26 ಮತ್ತು 27ರಂದು ಮಹಾರಾಜ ಕಾಲೇಜು ಮೈದಾನನಲ್ಲಿ ಎರಡು ದಿನಗಳ ರಾಷ್ಟ್ರೀಯ ವಿಚಾರ ಸಂಕಿರಣ ಆಯೋಜಿಸಲಾಗಿದೆ ಎಂದು ಸಮ್ಮೇಳನ ಅಧ್ಯಕ್ಷ ಮಾಜಿ ಸಚಿವ ಡಾ.ಎಚ್.ಸಿ.ಮಹದೇವಪ್ಪ ತಿಳಿಸಿದರು.

ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೈಸೂರು ವಿಭಾಗದ ಐದಾರು ಜಿಲ್ಲೆಗಳ ಪ್ರಗತಿಪರ ಚಿಂತಕರು, ಸ್ನೇಹಿತರು, ಹೋರಾಟಗಾರರು, ಬುದ್ಧಿಜೀವಿಗಳೊಂದಿಗೆ ಸಮಾಲೋಚನೆ ನಡೆಸಿ ಈ ನಿರ್ಧಾರ ಕೈಗೊಳ್ಳಲಾಗಿದೆ. ದೇಶದಲ್ಲಿ ಆಗುತ್ತಿರುವ ಆಡಳಿತಾತ್ಮಕ ದೋಷಗಳು, ಪ್ರಜಾಸತ್ತಾತ್ಮಕ ನಿಲುವುಗಳು, ಸಂವಿಧಾನದ ಆಶಯಗಳು ಹಾಗೂ ಜನರ ಸಮಸ್ಯೆಗಳ ಬಗ್ಗೆ ಚರ್ಚಿಸಲು ದಲಿತ ಸಂಘಟನೆಗಳ ಐಕ್ಯತಾ ಸಮಿತಿ, ಸಂವಿಧಾನ ಸಂರಕ್ಷಣಾ ಹೋರಾಟ ಸಮಿತಿ, ಸಂವಿಧಾನ ಜನಾಂದೋಲನ ಸಮಿತಿ ವತಿಯಿಂದ ಈ ಸಮ್ಮೇಳನ ಆಯೋಜಿಸಲಾಗಿದೆ ಎಂದರು.

ಸಂವಿಧಾನ ಜಾರಿಗೆ ಬರುವ ಮುನ್ನವೇ, ಸ್ವಾತಂತ್ರ?ಯ ಪೂರ್ವದಲ್ಲಿ ಸಾಮಾಜಿಕ ನ್ಯಾಯ, ಪ್ರಜಾಪ್ರತಿನಿಧಿ ಕಾಯ್ದೆ ಹಾಗೂ ಸರ್ವಾಂಗೀಣ ಅಭಿವೃದ್ಧಿಗೆ ಒತ್ತು ನೀಡುವ ಮೂಲಕ ಮಹಾತ್ಮ ಗಾಂಧೀಜಿಯವರಿಂದ ರಾಜರ್ಷಿ ಎಂದು ಕರೆಸಿಕೊಂಡ ನಾಲ್ವಡಿ ಕೃಷ್ಣರಾಜ ಒಡೆಯರ್ ಇಡೀ ದೇಶಕ್ಕೆ ಮಾದರಿಯಾದ ಆಡಳಿತ ನೀಡಿದ್ದರು. ಅವರ ಹೆಜ್ಜೆ ಗುರುತುಗಳನ್ನು ಸ್ಮರಿಸುತ್ತಾ ಮೈಸೂರಿನಲ್ಲಿಯೇ ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ವಿಶ್ರಾಂತ ಮುಖ್ಯ ಚುನಾವಣಾ ಆಯುಕ್ತ ಡಾ.ಶಹಬುದ್ದೀನ್ ಖುರೇಷಿ ಸಮ್ಮೇಳನ ಉದ್ಘಾಟಿಸಲಿದ್ದು, ಮಾಜಿ ಸಭಾಪತಿ ಕೆ.ಆರ್.ರಮೇಶ್‌ಕುಮಾರ್ ಸಮಾರೋಪ ಭಾಷಣ ಮಾಡುವರು ಎಂದರು.

> ದೇಶಕ್ಕೆ ಸ್ವಾತಂತ್ರ?ಯ ಬಂದು 80 ವರ್ಷಗಳಾದರೂ ಸಂವಿಧಾನ ಪರಿಪೂರ್ಣವಾಗಿ ಜಾರಿಯಾಗಿಲ್ಲ. ಯುವಕರ ಭವಿಷ್ಯ, ಪ್ರಜಾಪ್ರಭುತ್ವದ ಬೇರುಗಳನ್ನು ಗಟ್ಟಿಗೊಳಿಸಲು ಪ್ರತಿಯೊಬ್ಬ ಪ್ರಜೆಯೂ ಜಾಗೃತರಾಗಬೇಕು. ಇದಕ್ಕಾಗಿ ಎರಡನೇ ಸ್ವಾತಂತ್ರ?ಯ ಸಂಗ್ರಾಮದ ಮಾದರಿಯಲ್ಲಿ ಚಳವಳಿಯಾಗಬೇಕು. ಈ ಸಮ್ಮೇಳನದಲ್ಲಿ ಯಾವುದೇ ರಾಜಕೀಯ ಅಜೆಂಡಾ ಇರುವುದಿಲ್ಲ. ದೇಶದ ಸಂವಿಧಾನ ಮತ್ತು ಪ್ರಜಾಪ್ರಭುತ್ವ ಉಳಿಸಿ ಬೆಳೆಸುವ ನಿಟ್ಟಿನಲ್ಲಿ ಎಲ್ಲರೂ ಒಗ್ಗೂಡಬೇಕಿದೆ.
>
> –ಡಾ.ಎಚ್.ಸಿ.ಮಹದೇವಪ್ಪ ಮಾಜಿ ಸಚಿವ

ವರ್ಷವಿಡೀ ಕಾರ್ಯಕ್ರಮ: 3 ಪ್ರಮುಖ ಪೂರ್ಣಾಧಿವೇಶ, 6 ಸಮಾನಾಂತರ ಗೋಷ್ಠಿಗಳು ಇರಲಿವೆ. ಸಂವಿಧಾನದ ಆಶಯಗಳು, ಪ್ರಜಾಸತ್ತಾತ್ಮಕ ನಿಲುವುಗಳು, ಸ್ವಾಯತ್ತ ಸಂಸ್ಥೆಗಳ ಕಾರ್ಯವೈಖರಿ, ಮಹಿಳೆಯರು, ಅಲ್ಪಸಂಖ್ಯಾತರು, ಕಾರ್ಮಿಕ ಹಾಗೂ ಕೃಷಿ ಸಮಸ್ಯೆಗಳು, ಸಾಮಾಜಿಕ ನ್ಯಾಯ ಮತ್ತು ಮೀಸಲಾತಿ ಕುರಿತು ಎರಡು ದಿನಗಳ ಕಾಲ ಸಮಗ್ರ ಚರ್ಚೆ ನಡೆಯಲಿದೆ. ಎಸ್‌ಐಆರ್ ಪ್ರಜಾಪ್ರಭುತ್ವ ಬೇರನ್ನೇ ಅಲುಗಾಡಿಸುತ್ತಿದ್ದು, ಇದರ ಕುರಿತೂ ಚರ್ಚಿಸಲಾಗುವುದು ಸಂಜೆ ಸಾಂಸ್ಕೃತಿಕ ಕಾರ್ಯಕ್ರಮಗಳು ಇರಲಿದ್ದು, 27ರಿಂದ ಮೈಸೂರು, ಚಾಮರಾಜನಗರ, ಮಂಡ್ಯ, ಹಾಸನ, ಕೊಡಗು ಜಿಲ್ಲೆಗಳಲ್ಲಿ ಸಂವಿಧಾನದ ಪ್ರಚಾರಯಾನ ನಡೆಯಲಿದೆ. ನ.25ರಂದು ಬೆಂಗಳೂರಿನಿಂದ ಮೈಸೂರಿಗೆ ಸಂವಿಧಾನದ ಸ್ತಬ್ಧಚಿತ್ರ ಮೆರವಣಿಗೆ ಹಮ್ಮಿಕೊಳ್ಳಲಾಗಿದೆ. ಅಲ್ಲದೆ ಈ ಕಾರ್ಯಕ್ರಮವನ್ನು ವರ್ಷವಿಡೀ ಆಚರಿಸಲು ತೀರ್ಮಾನಿಸಿದ್ದು, 31ಜಿಲ್ಲೆಗಳಲ್ಲೂ ಆಯೋಜಿಸಲಾಗುತ್ತಿದೆ. 2027ರಲ್ಲಿ ಬೆಂಗಳೂರಿನ ಸ್ವಾತಂತ್ರ?ಯ ಉದ್ಯಾನವನದಲ್ಲಿ ಬೃಹತ್ ಕಾರ್ಯಕ್ರಮ ಆಯೋಜಿಸಲಾಗುತ್ತಿದೆ ಎಂದು ತಿಳಿಸಿದರು. ಗೋಷ್ಠಿಯಲ್ಲಿ ಮುಖಂಡರಾದ ಹರಿಹರ ಆನಂದಸ್ವಾಮಿ, ಕೊಸಕೋಟೆ ಬಸವರಾಜು, ಎನ್.ಭಾಸ್ಕರ್ ವಡ್ಡಗೆರೆ ಚಿನ್ನಸ್ವಾಮಿ ಇದ್ದರು.

ಗೋಳೂರು ನಾರಾಯಣಸ್ವಾಮಿ ಆರೋಪ । ನಂಜನಗೂಡಿನಲ್ಲಿ ಫಲವತ್ತಾದ ಕೃಷಿ ಭೂಮಿ ಸ್ವಾಧೀನಕ್ಕೆ ತೀವ್ರ ವಿರೋಧ

ರೈತರ ಭೂಮಿ ಕಬಳಿಸುತ್ತಿರುವ ಬಂಡವಾಳಶಾಹಿಗಳ ಸರ್ಕಾರ

ಮೈಸೂರು: ಬಿಡದಿ, ಮೈಸೂರು, ಇದೀಗ ನಂಜನಗೂಡಿನ ಸರದಿ. ಎಲ್ಲೆಲ್ಲಿ ಭೂ ಕಬಳಿಕೆ ಸಾಧ್ಯವೋ ಅಲ್ಲೆಲ್ಲ ರೈತರಿಂದ ಫಲವತ್ತಾದ ಭೂಮಿಯನ್ನು ಕಸಿಯುವ ಕಾರ್ಯದಲ್ಲಿ ರಾಜ್ಯ ಸರ್ಕಾರ ತೊಡಗಿದ್ದು, ಈ ಮೂಲಕ ಕರ್ನಾಟಕ ಸರ್ಕಾರ ಭೂ ಕಬಳಿಕೆಯ ಸರ್ಕಾರ ಹಾಗೂ ರೈತ ವಿರೋಧಿ ಸರ್ಕಾರ ಎಂಬ ಅಪಖ್ಯಾತಿಗೆ ಒಳಗಾಗಿದೆ ಎಂದು ಸಾಹಿತಿ, ಹೋರಾಟಗಾರ ಗೋಳೂರು ನಾರಾಯಣಸ್ವಾಮಿ ಆರೋಪಿಸಿದರು.

ಮೈಸೂರಿನ ಪತ್ರಕರ್ತರ ಸಂಘದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ನಂಜನಗೂಡು ತಾಲೂಕು ಕಸಬಾ ಹೋಬಳಿಗೆ ಸೇರಿದ ಗೋಳೂರು ಗ್ರಾಮದ 53 ಎಕರೆ ಹಾಗೂ ಗೀಕಳ್ಳಿ ಗ್ರಾಮದ 220 ಎಕರೆ ಫಲವತ್ತಾದ ಕೃಷಿಯೋಗ್ಯ ಭೂಮಿಯನ್ನು ಸರ್ಕಾರ ಕಾರ್ಖಾನೆ ನಿರ್ಮಾಣದ ಉದ್ದೇಶಕ್ಕಾಗಿ ಎಂದು ಹೇಳಿ ವಿಶೇಷ ಭೂಸ್ವಾಧೀನ ಪ್ರಕ್ರಿಯೆ ಆರಂಭಿಸಿದೆ ಎಂದು ತೀವ್ರ ಕಳವಳ ವ್ಯಕ್ತಪಡಿಸಿದರು.

ಕೃಷಿ ಹಾಗೂ ಹೈನುಗಾರಿಕೆ ಮೂಲಾಧಾರ

ಗೋಳೂರು ಗ್ರಾಮವು ನಂಜನಗೂಡಿಗೆ ಕೂಗಳತೆ ದೂರದಲ್ಲಿದೆ. ಅದರ ಮಗ್ಗುಲಲ್ಲೇ ಗೀಕಳ್ಳಿ ಗ್ರಾಮವಿದೆ. ಈ ಭಾಗದಲ್ಲಿ ಭತ್ತ, ಕಬ್ಬು, ತೆಂಗು ಹಾಗೂ ಧವಸ ಧಾನ್ಯಗಳನ್ನು ಬೆಳೆಯುತ್ತಾರೆ. ವಿಶೇಷವಾಗಿ ಗೋಳೂರು ಮೂಲಂಗಿ ಹಾಗೂ ಸೌತೆಕಾಯಿ, ನಂಜನಗೂಡು ರಸಬಾಳೆ ಅಷ್ಟೇ ಪ್ರಸಿದ್ಧಿ ಪಡೆದಿದ್ದು, ಮದುವೆ ಹಾಗೂ ಇತರೆ ಸಮಾರಂಭಗಳಲ್ಲಿ ಗೋಳೂರು ಮೂಲಂಗಿ, ಸೌತೆಕಾಯಿಗೆ ಎಲ್ಲಿಲ್ಲದ ಬೇಡಿಕೆ ಇದೆ. ಅಲ್ಲದೆ ಹದಿನೈದು ವರ್ಷಗಳಿಂದೀಚೆಗೆ ಹೈನುಗಾರಿಕೆ ದೊಡ್ಡ ಉದ್ಯಮವಾಗಿ ಬೆಳೆದಿದೆ. ಎಂದು ವಿವರಿಸಿದರು.

ಹೋರಾಟದ ಹಾದಿ ಹಿಡಿದ ರೈತರು

ಈಗ ಸರ್ಕಾರ ಕೈಗೊಂಡಿರುವ ಭೂ ಸ್ವಾಧೀನ ಪ್ರಕ್ರಿಯೆಯಿಂದ ರೈತರು ಆತಂಕಗೊಂಡಿದ್ದು, ಹೋರಾಟದ ಹಾದಿ ಹಿಡಿದಿದ್ದಾರೆ. ಯಾವುದೇ ಕಾರಣಕ್ಕೂ ಅನ್ನ ನೀಡುವ ಭೂಮಿಯನ್ನು ಕಳೆದುಕೊಳ್ಳಲು ರೈತರು ತಯಾರಿಲ್ಲ. ನಂಜನಗೂಡು ನಗರ ಹಾಗೂ ಸುತ್ತಮುತ್ತ ಭೂಮಿಯ ಬೆಲೆ ಗಗನಕ್ಕೇರಿದೆ. ಮುಂದೆ ನಮ್ಮ ಮಕ್ಕಳು ಮನೆಮಠ ಕಟ್ಟಬೇಕು ಅಂದರೆ ಲಕ್ಷಾಂತರ ರೂಪಾಯಿ ಕೊಟ್ಟು ಅವರೆಲ್ಲಿ ಭೂಮಿ ಖರೀದಿ ಮಾಡಲು ಸಾಧ್ಯ, ನಮ್ಮ ಹೊಲ ಗದ್ದೆಗಳು ಹೋದರೆ ನಾವೆಲ್ಲಿ ಹೋಗಿ ಬದುಕುವುದು ಎಂಬ ಚಿಂತೆಯಲ್ಲಿ ರೈತರಿದ್ದಾರೆ. ಎಂದು ಅವರು ಹೇಳಿದರು.

ಭೂ ಸ್ವಾಧೀನ ಪ್ರಕ್ರಿಯೆ ಕೈಬಿಡದಿದ್ದರೆ ಹೋರಾಟ

ಸರ್ಕಾರ ಈ ಕೂಡಲೇ ರೈತರು ಉಳುಮೆ ಮಾಡಿ ಬದುಕುತ್ತಿರುವ ಭೂಮಿಯನ್ನು ವಶಕ್ಕೆ ತೆಗೆದುಕೊಳ್ಳುವ ಭೂ ಸ್ವಾಧೀನ ಪ್ರಕ್ರಿಯೆಯನ್ನು ಕೈ ಬಿಡಬೇಕೆಂದು ರೈತರು, ಕಾರ್ಮಿಕರು, ಮಹಿಳಾ ಸಂಘಟನೆಗಳು ಹಾಗೂ ರೈತ ಸಂಘಟನೆಗಳು ಆಗ್ರಹಿಸುತ್ತಿವೆ. ಇಲ್ಲವಾದಲ್ಲಿ ಕಾನೂನು ಪ್ರಕಾರ ಹೋರಾಟ ಮುಂದುವರೆಯುತ್ತದೆ. ರೈತ ವಿರೋಧಿ ಸರ್ಕಾರದ ಈ ಎಲ್ಲ ನಡೆಗಳನ್ನು ಜನರು ಗಮನಿಸುತ್ತಿದ್ದು, ಸಮಯ ಬಂದಾಗ ತಕ್ಕ ಪಾಠ ಕಲಿಸುತ್ತೇವೆ ಎಂದು ಸರ್ಕಾರಕ್ಕೆ ಎಚ್ಚರಿಕೆ ನೀಡಿದರು. ರಾಜಧರ್ಮ ಇಲ್ಲದವನು ಆಳ್ವಿಕೆ ನಡೆಸಿದರೆ ಈ ದೇಶದ ಜನರು, ಭೂಮಿ, ಸಂಸ್ಕೃತಿ ನಾಶ ಎಂಬ ಹಿರಿಯರ ಮಾತಿನಂತೆ ರಾಜ್ಯದಲ್ಲಿ ತುರ್ತುಪರಿಸ್ಥಿತಿ ನಿರ್ಮಾಣವಾಗಿದೆ. ಇದು ಇಲ್ಲಿಗೆ ನಿಲ್ಲುವುದಿಲ್ಲ, ಸಾಮಾನ್ಯ ಜನರು ಎಚ್ಚೆತ್ತುಕೊಳ್ಳದಿದ್ದರೆ ದೊಡ್ಡ ಮಟ್ಟದ ಅಪಾಯ ಖಂಡಿತವಾಗಿ ಕಾದಿದೆ ಎಂದು ಆತಂಕ ವ್ಯಕ್ತಪಡಿಸಿದರು. ರೈತರ ನಾಶವೇ ಮನುಕುಲದ ಅಂತ್ಯವಾಗಿದ್ದು, 'ಎದ್ದೇಳು ಕರ್ನಾಟಕ, ಜಾಗೃತವಾಗಿ ಪ್ರತಿರೋಧ ತೋರಬೇಕಿದೆ. ಅನ್ನ ತಿನ್ನುವ ಪ್ರತಿಯೊಬ್ಬರೂ ಮಾತಾಡಲೇ ಬೇಕಾದ ಸಮಯ ಬಂದಿದೆ, ಮಾತಾಡಿ, ಉಳುವ ಭೂಮಿಯನ್ನು ಉಳಿಸಿ' ಎಂದು ಸಾಹಿತಿ ಮತ್ತು ಹೋರಾಟಗಾರರಾದ ಗೋಳೂರ ನಾರಾಯಣಸ್ವಾಮಿ ಅವರು ಸಾರ್ವಜನಿಕರಿಗೆ ಕರೆ ನೀಡಿದರು.



ಭೋವಿ ಸಮಾಜದ ಜಮೀನು ಒತ್ತುವರಿ ತೆರವಿಗೆ ಆಗ್ರಹ

ಎಚ್.ಡಿ.ಕೋಟೆ: ಭೋವಿ ಸಮಾಜದ ಬಡ ಮಕ್ಕಳ ವಿದ್ಯಾರ್ಥಿನಿಲಯ ನಿರ್ಮಾಣಕ್ಕಾಗಿ ಸರ್ಕಾರ ಮಂಜೂರು ಮಾಡಿರುವ 15 ಎಕರೆ ಜಮೀನಿನ ಒತ್ತುವರಿ ತೆರವುಗೊಳಿಸಿ, ಸಮಾಜಕ್ಕೆ ನ್ಯಾಯ ಒದಗಿಸಬೇಕು ಎಂದು ಆಗ್ರಹಿಸಿ ಭೋವಿ ಸಮಾಜದ ಮುಖಂಡರು ಪಟ್ಟಣದ ತಹಶೀಲ್ದಾರ್ ಕಚೇರಿ ಎದುರು ಧರಣಿ ನಡೆಸಿದರು.

ಭೋವಿ ಸಮಾಜದ ಎಚ್.ಡಿ.ಕೋಟೆ ಹಾಗೂ ಸರಗೂರು ತಾಲ್ಲೂಕುಗಳ ಅಧ್ಯಕ್ಷ ಐಡಿಯಾ ವೆಂಕಟೇಶ್ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ, ಸಮಾಜಕ್ಕೆ ಸೇರಿದ ಜಮೀನನ್ನು ಅತಿಕ್ರಮಿಸಿಕೊಂಡು ತೊಂದರೆ ನೀಡಲಾಗುತ್ತಿದೆ ಎಂದು ಆರೋಪಿಸಿದ ಮುಖಂಡರು, ಜಮೀನಿನ ಒತ್ತುವರಿ ತೆರವುಗೊಳಿಸಿ ವಿದ್ಯಾರ್ಥಿನಿಲಯ ನಿರ್ಮಾಣಕ್ಕೆ ಅವಕಾಶ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

1963ರಲ್ಲಿ ಪಡುಕೋಟೆ ಗ್ರಾಮದ ಸರ್ವೆ ನಂಬರ್ 1ರಲ್ಲಿ 11 ಸಮುದಾಯಗಳ ವಿದ್ಯಾರ್ಥಿನಿಲಯ ನಿರ್ಮಾಣಕ್ಕಾಗಿ ಸರ್ಕಾರ 180 ಎಕರೆ ಜಮೀನು ಮಂಜೂರು ಮಾಡಿತ್ತು. ಈ ಪೈಕಿ ಭೋವಿ ಸಮಾಜಕ್ಕೆ 15 ಎಕರೆ ಜಮೀನು ಮಂಜೂರಾಗಿದ್ದು, ಇದಕ್ಕೆ ಸಂಬಂಧಿಸಿದಂತೆ ಸಮಾಜದವರು ಕಂದಾಯ ಪಾವತಿಸುತ್ತಾ ಬಂದಿದ್ದಾರೆ ಎಂದು ಮುಖಂಡರು ತಿಳಿಸಿದರು.

ಜಮೀನು ಒತ್ತುವರಿಯಾಗಿರುವ ಕುರಿತು ಅಧಿಕಾರಿಗಳಿಗೆ ಮನವಿ ಸಲ್ಲಿಸಿದ ಹಿನ್ನೆಲೆಯಲ್ಲಿ, 2026ರ ಏ.30 ರಂದು ತಹಶೀಲ್ದಾರ್ ಹಾಗೂ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಒತ್ತುವರಿ ತೆರವುಗೊಳಿಸಿ ಗಡಿ ಗುರುತಿಸಿದ್ದರು. ಮತ್ತೆ ಒತ್ತುವರಿಯಾಗದಂತೆ ತಂತಿ ಕಂಬಗಳನ್ನು ಅಳವಡಿಸಲಾಗಿತ್ತು. ಆದರೆ, ಜೂ.2ರಂದು ಸೋಮೇಶ್ ಗೌಡ ಹಾಗೂ ಅವರ ಮಕ್ಕಳು ತಡರಾತ್ರಿ ಜಮೀನಿಗೆ ಅತಿಕ್ರಮ ಪ್ರವೇಶ ಮಾಡಿ ತಂತಿ ಕಂಬಗಳನ್ನು ಕಿತ್ತು ಬಿಸಾಡಿದ್ದಾರೆ ಎಂದು ಐಡಿಯಾ ವೆಂಕಟೇಶ್ ಆರೋಪಿಸಿದರು.

ಈ ಕುರಿತು ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದರೂ ಸಮಸ್ಯೆ ಬಗೆಹರಿದಿಲ್ಲ. ಅಧಿಕಾರಿಗಳ ಗಮನಕ್ಕೆ ತಂದರೂ ಸೂಕ್ತ ಕ್ರಮ ಕೈಗೊಂಡಿಲ್ಲ ಎಂದು ಆರೋಪಿಸಿದ ಅವರು, ಜಮೀನಿನ ಒತ್ತುವರಿ ತೆರವುಗೊಳಿಸಿ ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು ಎಂದು ಆಗ್ರಹಿಸಿದರು. ಪ್ರತಿಭಟನಾ ಸ್ಥಳಕ್ಕೆ ಭೇಟಿ ನೀಡಿದ ತಹಸೀಲ್ದಾರ್ ಶ್ರೀನಿವಾಸ್ ಹಾಗೂ ಸರ್ಕಲ್ ಇನ್ಸ್ಪೆಕ್ಟರ್ ಗಂಗಾಧರ್ ಪ್ರತಿಭಟನಾಕಾರರ ಅಹವಾಲು ಆಲಿಸಿದರು. ಪ್ರತಿಭಟನೆಯಲ್ಲಿ ಶ್ರೀ ಸಿದ್ದರಾಮೇಶ್ವರ ಸ್ವಾಮೀಜಿ, ಕವಿ ಸ್ವಾಮೀಜಿ, ಭೋವಿ ಸಮಾಜ ನಿಗಮದ ಮಾಜಿ ಅಧ್ಯಕ್ಷ ಜಿ.ವಿ.ಸೀತಾರಾಮ್, ಎಸ್.ವಿಜಯಕುಮಾರ್, ಪಿ.ಬಸವರಾಜು, ಜಿ. ನಾಗರಾಜು, ಪಿ.ಎಲ್. ಚಿನ್ನಸ್ವಾಮಿ, ಎನ್. ಡಿ.ರಾಜಣ್ಣ ಸೇರಿದಂತೆ ಸಮಾಜದ ಮುಖಂಡರು, ಮುಖಂಡರು, ಮಹಿಳೆಯರು, ಭಾಗವಹಿಸಿದ್ದರು.

ವಿಜಯ್ ಕುಮಾರ್‌ಗೆ ಅದ್ಧೂರಿ ಸ್ವಾಗತ

ಚಾಮರಾಜನಗರ, ನಗರಕ್ಕೆ ಆಗಮಿಸಿದ ಜೆಡಿಎಸ್ ಮುಖಂಡ ಹಾಗೂ ಮುಡಾ ಮಾಜಿ ಅಧ್ಯಕ್ಷ ವಿಜಯ್ ಕುಮಾರ್ ಅವರನ್ನು ಗರಡಿ ಟೈಗರ್ಸ್ ಬಳಗ ಹಾಗೂ ಅಭಿಮಾನಿಗಳು ಅದ್ಧೂರಿಯಾಗಿ ಸ್ವಾಗತಿಸಿದರು.

ನಗರದ ಸಂತೇಮರಳ್ಳಿ ವೃತ್ತದಲ್ಲಿ ವಿಜಯ್ ಕುಮಾರ್ ಅವರಿಗೆ ಬೃಹತ್ ಸೇಬಿನ ಹಾರ ಹಾಕಿ, ಜೈಕಾರ ಕೂಗುವ ಮೂಲಕ ಅಭಿಮಾನಿಗಳು ಭವ್ಯ ಸ್ವಾಗತ ಕೋರಿದರು. ಬಳಿಕ ಉಪ್ಪಾರ ಬಡಾವಣೆಯಲ್ಲಿ ಪ್ರತಿಷ್ಠಾಪಿಸಲಾಗಿದ್ದ ಗಣಪತಿಗೆ ವಿಶೇಷ ಪೂಜೆ ಸಲ್ಲಿಸಿದ ಅವರು, ವೇದಿಕೆ ಕಾರ್ಯಕ್ರಮದಲ್ಲಿ ಭಾಗವಹಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ವಿಜಯ್ ಕುಮಾರ್, ಸಂಘ-ಸಂಸ್ಥೆಗಳು ಉಚಿತ ಆರೋಗ್ಯ ತಪಾಸಣಾ ಶಿಬಿರಗಳನ್ನು ಆಯೋಜಿಸುವುದರ ಜತೆಗೆ ಬಡವರ ಧ್ವನಿಯಾಗಿ ಕಾರ್ಯನಿರ್ವಹಿಸುತ್ತಿರುವುದು ಸಂತೋಷದ ವಿಚಾರವಾಗಿದೆ. ಎಲ್ಲರೂ ಒಗ್ಗಟ್ಟು ಮತ್ತು ಪರಸ್ಪರ ವಿಶ್ವಾಸದಿಂದ ಕಾರ್ಯನಿರ್ವಹಿಸಿದರೆ ಸಮಾಜದಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಮುಂದುವರಿಸಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ರಾಜ್ಯ ಉಪ್ಪಾರ ಎಸ್ಸಿ, ಎಸ್ಟಿ ಹೋರಾಟ ಸಮಿತಿ ಅಧ್ಯಕ್ಷ ಬಾಗಳಿ ರೇವಣ್ಣ ಮಾತನಾಡಿದರು.

ಕಾರ್ಯಕ್ರಮದಲ್ಲಿ ರಾಜ್ಯ ಉಪ್ಪಾರ ಎಸ್ಸಿ, ಎಸ್ಟಿ ಹೋರಾಟ ಸಮಿತಿ ಪ್ರಧಾನ ಕಾರ್ಯದರ್ಶಿ ಮಾದೇಶ್, ತಾಪಂ ಮಾಜಿ ಉಪಾಧ್ಯಕ್ಷ ದಯಾನಿಧಿ, ಮುಖಂಡರಾದ ಪೈನಾಪಲ್ ಮಂಜು, ಸೋಮಣ್ಣ, ಸಂಜು, ಚಂದ್ರು, ಮಹದೇವಶೆಟ್ಟಿ, ರಂಗಸ್ವಾಮಿ, ಮಹದೇವಸ್ವಾಮಿ, ವರದರಾಜು, ಆನಂದ್ ಭಗೀರಥ ಹಾಗೂ ಉಪ್ಪಾರ ಸಂಘಟನೆಯ ರಾಜ್ಯ ಪ್ರಧಾನ ಕಾರ್ಯದರ್ಶಿ ಲಕ್ಷ್ಮೀ ರಂಗರಾಮ್ ಸೇರಿದಂತೆ ಗರಡಿ ಟೈಗರ್ಸ್ ಬಳಗದ ಸದಸ್ಯರು ಮತ್ತು ಅಭಿಮಾನಿಗಳು ಉಪಸ್ಥಿತರಿದ್ದರು.

ದಸರಾ ಮಹೋತ್ಸವ

ಕಲಾವಿದರು, ಕಲಾತಂಡಗಳು, ಕವಿಗಳು, ಚಿತ್ರ ಕಲಾವಿದರಿಂದ ಅರ್ಜಿ ಆಹ್ವಾನ

ಚಾಮರಾಜನಗರ: ಚಾಮರಾಜನಗರ ದಸರಾ ಮಹೋತ್ಸವದ ಅಂಗವಾಗಿ ಅಕ್ಟೋಬರ್ 17 ರಿಂದ 19ರವರೆಗೆ ವಿವಿಧ ಕಲಾ ಪ್ರಕಾರಗಳ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸುತ್ತಿದ್ದು, ಕಾರ್ಯಕ್ರಮ ಬಯಸುವ ಕಲಾವಿದರು, ಕಲಾತಂಡಗಳು, ಕವಿಗೋಷ್ಠಿಯಲ್ಲಿ ಭಾಗವಹಿಸುವ ಕವಿಗಳು ಹಾಗೂ ಚಿತ್ರ ಸಂತೆಯಲ್ಲಿ ಭಾಗವಹಿಸುವ ಚಿತ್ರ ಕಲಾವಿದರಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ನಗರದ ಜಿಲ್ಲಾಡಳಿತ ಭವನದ ಮೊದಲನೇ ಮಹಡಿಯಲ್ಲಿರುವ ಕೊಠಡಿ ಸಂಖ್ಯೆ 104 ರಲ್ಲಿ ಅಕ್ಟೋಬರ್ 12ರ ಸಂಜೆ 5.30 ಗಂಟೆಯೊಳಗೆ ಸಲ್ಲಿಸಬೇಕು ಎಂದು ಚಾಮರಾಜನಗರ ದಸರಾ ಸಾಂಸ್ಕೃತಿಕ ಸಮಿತಿ ಅಧ್ಯಕ್ಷರು ಹಾಗೂ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ರೈತ ದಸರಾ ಅಂಗವಾಗಿ ಹಾಲು ಕರೆಯುವ, ಶ್ವಾನ ಪ್ರದರ್ಶನ ಸ್ಪರ್ಧೆ

ಚಾಮರಾಜನಗರ, ಚಾಮರಾಜನಗರ ದಸರಾ ಮಹೋತ್ಸವದ ಅಂಗವಾಗಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖಾ ವತಿಯಿಂದ ಜಿಲ್ಲಾ ರೈತ ದಸರಾ ಮಹೋತ್ಸವದ ಪ್ರಯುಕ್ತ ಜಿಲ್ಲಾಮಟ್ಟದ ಹಾಲು ಕರೆಯುವ ಸ್ಪರ್ಧೆ ಮತ್ತು ಜಿಲ್ಲಾ ಶ್ವಾನ ಪ್ರದರ್ಶನ ಸ್ಪರ್ಧೆಯನ್ನು ಅ.17ರಂದು ನಗರದ ಡಾ.ಬಿ.ಆರ್.ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಹಾಲು ಕರೆಯುವ ಸ್ಪರ್ಧೆಯು ಸಂಜೆ 4.30 ಗಂಟೆಗೆ ನಡೆಯಲಿದ್ದು, ವಿಜೇತರಿಗೆ ಪ್ರಥಮ ಬಹುಮಾನವಾಗಿ 20 ಸಾವಿರ ರೂ., ದ್ವಿತೀಯ ಬಹುಮಾನವಾಗಿ 15 ಸಾವಿರ ರೂ., ತೃತೀಯ ಬಹುಮಾನವಾಗಿ 10 ಸಾವಿರ ರೂ. ನೀಡಲಾಗುವುದು. ಶ್ವಾನ ಪ್ರದರ್ಶನ ಸ್ಪರ್ಧೆಯು ಬೆಳಿಗ್ಗೆ 10 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ನಡೆಯಲಿದ್ದು, ವಿಜೇತರಾದ ಶ್ವಾನಗಳಿಗೆ ವಿಶೇಷ ಬಹುಮಾನಗಳನ್ನು ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಸ್ಥಳೀಯ ಪಶುವೈದ್ಯ ಸಂಸ್ಥೆಗಳನ್ನು ಸಂಪರ್ಕಿಸಬಹುದು. ಜಿಲ್ಲೆಯ ಆಸಕ್ತ ಪಶುಪಾಲಕರು ಮತ್ತು ಶ್ವಾನ ಪಾಲಕರು/ಶ್ವಾನ ಪ್ರಿಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಪಶುಪಾಲನಾ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ಕೋರಿದ್ದಾರೆ.

ದೊಡ್ಡಮ್ಮ ತಾಯಿಗೆ ವಿಶೇಷ ಪೂಜೆ

ಚಾಮರಾಜನಗರ: ನಗರದ ಉಪ್ಪಾರ ಬಡಾವಣೆ ಯಲ್ಲಿ ನೂತನವಾಗಿ ನಿರ್ಮಾಣವಾಗುತ್ತಿರುವ ದೊಡ್ಡಮ್ಮ ತಾಯಿ ದೇವಸ್ಥಾನಕ್ಕೆ ಪಶುಸಂಗೋಪನೆ ಮತ್ತು ರೇ??ಮ ಸಚಿವರು ಹಾಗೂ ಚಾಮರಾಜನಗರ ಜಿಲ್ಲಾ ಉಸ್ತುವಾರಿ ಸಚಿವರಾದ ಸಿ. ಪುಟ್ಟರಂಗಶೆಟ್ಟಿ ಅವರು ಭೇಟಿ ನೀಡಿ, ದೇವಸ್ಥಾನದ ಕಾಮಗಾರಿಯನ್ನು ವೀಕ್ಷಿಸಿದರು.

ಇದಕ್ಕೂ ಮೊದಲು ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಿ, ದೊಡ್ಡಮ್ಮ ತಾಯಿಯ ದರ್ಶನ ಪಡೆದರು. ಈ ಸಂದರ್ಭದಲ್ಲಿ ದೇವಸ್ಥಾನದ ಯಜಮಾನರಾದ ಕೆ.ಟಿ. ನಾಗಶೆಟ್ಟಿ, ನಂಜಪ್ಪ, ಚೂಡಾ ಸದಸ್ಯ ದ್ವಾರಕಿ, ಮಸಣಶೆಟ್ಟಿ, ಚಿಕ್ಕ ಅಂಗ ಶೆಟ್ಟಿ, ಶ್ರೀನಿವಾಸ್, ಕೋಟಿ ನಾಗಶೆಟ್ಟಿ, ಚನ್ನಿಗಶೆಟ್ಟಿ, ಮಹದೇವಶೆಟ್ಟಿ, ಸೋಮಣ್ಣ, ಕೃಷ್ಣ, ಲಿಂಗರಾಜು, ನಟ ಮಂಟೇಸ್ವಾಮಿ, ಮಹದೇಶ್ವರ ನೀಲಗಾರರು, ಸೇರಿದಂತೆ ಇತರರು ಉಪಸ್ಥಿತರಿದ್ದರು.

ಹಂಸವಾಹನದಲ್ಲಿ ಚಾಮುಂಡೇಶ್ವರಿ

ಚಾಮರಾಜನಗರ: ನವರಾತ್ರಿ ಅಂಗವಾಗಿ ನಗರದ ಶ್ರೀಚಾಮರಾಜೇಶ್ವರ ದೇವಸ್ಥಾನದಲ್ಲಿರುವ ಶ್ರೀ ಚಾಮುಂಡೇಶ್ವರಿ ದೇವಿಗೆ ಹಂಸವಾಹಿನಿ ಅಲಂಕಾರ ಮಾಡಲಾಯಿತು.

ದಸರಾ ಉತ್ಸವದ ಆರಂಭದ ದಿನಗಳಲ್ಲಿ ದೇವಿಗೆ ವಿಶೇಷ ಹೂವುಗಳು, ಆಭರಣಗಳು ಮತ್ತು ಸಾಂಪ್ರದಾಯಿಕ ನೀಲಿ ಅಥವಾ ದಿವ್ಯ ಬಣ್ಣಗಳ ಸೀರೆಯಿಂದ ಅಲಂಕರಿಸಿ, ಹಂಸದ ಮೇಲಿರುವಂತೆ ಭವ್ಯವಾಗಿ ಕಂಗೊಳಿಸುವಂತೆ ಮಾಡಲಾಗುತ್ತಿತ್ತು. ಪ್ರಮುಖ ಆಕರ್ಷಣೆಯಾಗಿ ಭಕ್ತರ ಕಣ್ಮನ ಸೆಳೆಯಿತು.



ಅ.16ರಂದು ಬೃಹತ್ ಪ್ರತಿಭಟನೆ; ಎತ್ತಿನಗಾಡಿ, ಟ್ರ್ಯಾಕ್ಟರ್‌ಗಳೊಂದಿಗೆ ತಾಲೂಕು ಕಚೇರಿಗೆ ಮುತ್ತಿಗೆ ನಿರ್ಧಾರ

50 ದಿನ ಹೋರಾಟ: ಸ್ಪಂದಿಸದ ಸರ್ಕಾರ

ಸಾಗುವಳಿ ಚೀಟಿ, ಕೆರೆಗಳಿಗೆ ನೀರು ತುಂಬಿಸಲು ಆಗ್ರಹಿಸಿ ತಮಟೆ ಚಳವಳಿ

ಗುಂಡ್ಲುಪೇಟೆ: ಸಾವಿರಾರು ರೈತರ ಬದುಕಿಗೆ ಸಂಬಂಧಿಸಿದ ಸಾಗುವಳಿ ಹಕ್ಕು ಹಾಗೂ ಕೆರೆಗಳಿಗೆ ನೀರು ತುಂಬಿಸುವ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘದ ಗುಂಡ್ಲುಪೇಟೆ ಘಟಕ ನಡೆಸುತ್ತಿರುವ ಅಹೋರಾತ್ರಿ ಧರಣಿ 50ನೇ ದಿನಕ್ಕೆ ಕಾಲಿಟ್ಟಿದೆ. ಇಷ್ಟಾದರೂ ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಸ್ಪಂದಿಸುತ್ತಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದ ರೈತರು, ಪಟ್ಟಣದಲ್ಲಿ ತಮಟೆ ಬಾರಿಸುವ ಮೂಲಕ ಆಡಳಿತದ ಗಮನ ಸೆಳೆಯುವ ವಿನೂತನ ಪ್ರತಿಭಟನೆ ನಡೆಸಿದರು.

ಪಟ್ಟಣದ ಪ್ರವಾಸಿ ಮಂದಿರದಿಂದ ತಮಟೆ ಬಾರಿಸುತ್ತಾ ಮೆರವಣಿಗೆ ಆರಂಭಿಸಿದ ರೈತರು, ರಾಷ್ಟ್ರೀಯ ಹೆದ್ದಾರಿ ಮೂಲಕ ಸಾಗಿ ತಾಲೂಕು ಕಚೇರಿ ಆವರಣದಲ್ಲಿ ಜಮಾಯಿಸಿದರು. ಜಿಲ್ಲಾಡಳಿತ, ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಶಾಸಕರ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ ಪ್ರತಿಭಟನಾಕಾರರು, ರೈತರ ಸಮಸ್ಯೆಗಳಿಗೆ ತಕ್ಷಣ ಪರಿಹಾರ ಕಲ್ಪಿಸಬೇಕೆಂದು ಒತ್ತಾಯಿಸಿದರು.

ಕೃಷಿಗೆ ಕಿರಿಕಿರಿ, ಗಣಿಗಾರಿಕೆಗೆ ಅನುಮತಿ

ಅರಣ್ಯ ಇಲಾಖೆ ಮತ್ತು ಕಂದಾಯ ಇಲಾಖೆಗಳ ನಡುವಿನ ಪ್ರಕ್ರಿಯೆಗಳಿಂದ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಕೃಷಿ ಚಟುವಟಿಕೆಗಳನ್ನು ನಡೆಸಲು ಅನುಮತಿ ಪಡೆಯುವುದೇ ಕಷ್ಟವಾಗಿರುವಾಗ ಗಣಿಗಾರಿಕೆಗೆ ಅನುಮತಿ ನೀಡುತ್ತಿರುವುದು ಯಾವ ನ್ಯಾಯ ಎಂದು ಶಿವಪುರ ಮಹದೇವಪ್ಪ ಪ್ರಶ್ನಿಸಿದರು.

ಚಿಕ್ಕ ಎಲೆಚೆಟ್ಟಿ ಗ್ರಾಮದಲ್ಲಿ ಸುಮಾರು 50 ಎಕರೆ ಜಮೀನಿನಿಂದ ರೈತರನ್ನು ತೆರವುಗೊಳಿಸಲಾಗಿದೆ ಎಂದು ಆರೋಪಿಸಿದ ಅವರು, ರೈತರ ಭೂಮಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಅಧಿಕಾರಿಗಳು ಗಂಭೀರವಾಗಿ ಪರಿಗಣಿಸಿ ತಕ್ಷಣ ಪರಿಹರಿಸಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ರೈತ ಸಂಘದ ತಾಲೂಕು ಅಧ್ಯಕ್ಷ ಮಲ್ಲಯನಪುರ ಶಿವಣ್ಣ, ತಾಲೂಕು ಪ್ರಧಾನ ಕಾರ್ಯದರ್ಶಿ ಕೋಡಳ್ಳಿ ಪ್ರಸಾದ್, ಶಿವಕುಮಾರ್ ಪಿಕೆ, ಹಕ್ಕಲಪುರ ಕುಮಾರ್, ಗುರುಪ್ರಸಾದ್, ರೋಹನ್ ಗೌಡ, ಮನು, ಚಂದ್ರು ಸೇರಿದಂತೆ ಮಹಿಳಾ ಪದಾಧಿಕಾರಿಗಳು ಹಾಗೂ ರೈತರು ಭಾಗವಹಿಸಿದ್ದರು.

ಕೆರೆಗಳಿಗೆ ನೀರು ತುಂಬಿಸುವ ಬೇಡಿಕೆಗೂ ನಿರ್ಲಕ್ಷ್ಯ

ತಾಲೂಕಿನ ಕೆರೆಗಳಿಗೆ ನೀರು ತುಂಬಿಸುವ ಬೇಡಿಕೆಯನ್ನು ಈಡೇರಿಸುವ ಮೂಲಕ ಕೃಷಿ ಹಾಗೂ ರೈತರ ಬದುಕಿಗೆ ನೆರವಾಗಬೇಕು. ರೈತರ ಸಮಸ್ಯೆಗಳನ್ನು ದೂರದಿಂದಲೇ ನೋಡುವ ಜನಪ್ರತಿನಿಧಿಗಳು ಕನಿಷ್ಠ ಒಂದು ದಿನವಾದರೂ ಧರಣಿ ಸ್ಥಳದಲ್ಲಿ ರೈತರೊಂದಿಗೆ ಕುಳಿತು ಅವರ ಸಂಕಷ್ಟಗಳನ್ನು ಅರಿತುಕೊಳ್ಳಲಿ ಎಂದು ಸವಾಲು ಹಾಕಿದರು. ರೈತರ ಜಮೀನುಗಳಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಕೂಡಲೇ ಬಗೆಹರಿಸದಿದ್ದರೆ ಮುಂದಿನ ದಿನಗಳಲ್ಲಿ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು. ಅಗತ್ಯಬಿದ್ದರೆ ಜೈಲಿಗೆ ಹೋಗಲೂ ಸಿದ್ಧರಿದ್ದೇವೆ. ಒಂದು ವರ್ಷವಾದರೂ ಹೋರಾಟವನ್ನು ಕೈಬಿಡುವುದಿಲ್ಲ ಎಂದು

ಅ. 16ರಂದು ರೈತಶಕ್ತಿ ಪ್ರದರ್ಶನಕ್ಕೆ ಸಿದ್ಧತೆ

ರೈತರ ಬೇಡಿಕೆಗಳ ಈಡೇರಿಕೆಗಾಗಿ ಅಕ್ಟೋಬರ್ 16ರಂದು ತಾಲೂಕಿನ ಎಲ್ಲ ಗ್ರಾಮಗಳ ರೈತರನ್ನು ಸಂಘಟಿಸಿ ಬೃಹತ್ ಪ್ರತಿಭಟನೆ ನಡೆಸಲು ರೈತ ಸಂಘ ನಿರ್ಧರಿಸಿದೆ. ಎತ್ತಿನಗಾಡಿ ಹಾಗೂ ಟ್ರ್ಯಾಕ್ಟರ್‌ಗಳೊಂದಿಗೆ ತಾಲೂಕು ಕಚೇರಿ ಮುಂದೆ ಪ್ರತಿಭಟನೆ ನಡೆಸಿ ಆಡಳಿತದ ಗಮನ ಸೆಳೆಯಲಾಗುವುದು ಎಂದು ಮುಖಂಡರು ತಿಳಿಸಿದರು. 50 ದಿನಗಳ ಹೋರಾಟದ ಬಳಿಕವೂ ಬೇಡಿಕೆ ಗಳು ಈಡೇರದ ಹಿನ್ನೆಲೆಯಲ್ಲಿ ಮುಂದಿನ ಪ್ರತಿಭಟನೆ ನಿರ್ಣಾಯಕವಾಗುವ ಸಾಧ್ಯತೆಯಿದೆ. ಜಿಲ್ಲಾಡಳಿತ ರೈತರ ಸಮಸ್ಯೆಗಳಿಗೆ ಯಾವ ರೀತಿಯಲ್ಲಿ ಸ್ಪಂದಿಸಲಿದೆ ಎಂಬುದನ್ನು ಕಾದುನೋಡಬೇಕಿದೆ. ಈ ಮಧ್ಯೆ, ಧರಣಿ ಸ್ಥಳಕ್ಕೆ ಆಗಮಿಸಿದ ಆರ್‌ಎಫ್‌ಒ ಶಿವಕುಮಾರ್ ಹಾಗೂ ಪ್ರಭಾರ ಅಧಿಕಾರಿ ವಿನೋದ್ ರೈತರ ಸಮಸ್ಯೆಗಳನ್ನು ಆಲಿಸಿದರು.

3,592 ರೈತರಿಗೆ ಸಾಗುವಳಿ ಚೀಟಿ ನೀಡಲು ಮೀನಮೇಷವೇಕೆ?

ರೈತ ಮುಖಂಡ ಶಿವಪುರ ಮಹದೇವಪ್ಪ ಮಾತನಾಡಿ, ಕಳೆದ 50 ದಿನಗಳಿಂದ ರೈತರು ಅಹೋರಾತ್ರಿ ಧರಣಿ ನಡೆಸುತ್ತಿದ್ದರೂ ಸಮಸ್ಯೆಗಳನ್ನು ಆಲಿಸಲು ಅಧಿಕಾರಿಗಳು ಸಭೆ ನಡೆಸಿಲ್ಲ. ರೈತರ ಸಂಕಷ್ಟಗಳಿಗೆ ಸ್ಪಂದಿಸಬೇಕಾದ ಆಡಳಿತ ವ್ಯವಸ್ಥೆ ನಿಷ್ಕ್ರಿಯವಾಗಿದೆ. ಪ್ರಜಾಪ್ರಭುತ್ವದಲ್ಲಿ ಜನರ ಮತ ಪಡೆದು ಅಧಿಕಾರಕ್ಕೆ ಬಂದ ಜನಪ್ರತಿನಿಧಿಗಳು ರೈತರ ನೋವಿಗೆ ಸ್ಪಂದಿಸದಿರುವುದು ದುರದೃಷ್ಟಕರ ಎಂದು ಆರೋಪಿಸಿದರು. ಸುಮಾರು 70 ವರ್ಷಗಳಿಂದ ಭೂಮಿಯನ್ನು ಉಳುಮೆ ಮಾಡಿಕೊಂಡು ಜೀವನ ಸಾಗಿಸುತ್ತಿರುವ ರೈತರು ಇಂದಿಗೂ ಸಾಗುವಳಿ ಚೀಟಿಗಾಗಿ ಕಾಯುವ ಪರಿಸ್ಥಿತಿ ಇದೆ. 3,592 ರೈತರಿಗೆ ಸಾಗುವಳಿ ಹಕ್ಕು ನೀಡಲು ಸರ್ಕಾರಕ್ಕೆ ಇನ್ನೆಷ್ಟು ವರ್ಷ ಬೇಕು? ರೈತರು ತಮ್ಮ ಪಿತ್ರಾರ್ಜಿತ ಆಸ್ತಿಯನ್ನು ಕೇಳುತ್ತಿಲ್ಲ. ದಶಕಗಳಿಂದ ಕೃಷಿ ಮಾಡುತ್ತಿರುವ ಭೂಮಿಗೆ ಸಾಗುವಳಿ ಚೀಟಿ ಹಾಗೂ ಹಕ್ಕುಪತ್ರ ನೀಡುವಂತೆ ಕೇಳುತ್ತಿದ್ದಾರೆ. ರೈತರ ಈ ಬೇಡಿಕೆಯನ್ನು ಈಡೇರಿಸಲು ವಿಳಂಬ ಮಾಡುತ್ತಿರುವುದೇಕೆ ಎಂದು ಪ್ರಶ್ನಿಸಿದರು.

ಬಂಡೀಪುರ ಅರಣ್ಯದಲ್ಲಿ ಜಿಂಕೆ ಬೇಟೆ!

- ಮಾಂಸ ಸಾಗಿಸುತ್ತಿದ್ದ ಓರ್ವನ ಬಂಧನ: ಮತ್ತೊಬ್ಬ ಪರಾರಿ
- ನಾಡಬಂದೂಕು, ಜಿಂಕೆ ಚರ್ಮ, ಮಾಂಸ ಸೇರಿದಂತೆ ಬೇಟೆಗೆ ಬಳಸಿದ ವಸ್ತುಗಳು ವಶಕ್ಕೆ

ಗುಂಡ್ಲುಪೇಟೆ, :- ಬಂಡೀಪುರ ಹುಲಿ ಸಂರಕ್ಷಿತ ಅರಣ್ಯ ಪ್ರದೇಶದ ಬಫರ್ ಜೋನ್ ವ್ಯಾಪ್ತಿಯ ನೇನೇಕಟ್ಟೆ ಅರಣ್ಯದಲ್ಲಿ ಜಿಂಕೆಯನ್ನು ಬೇಟೆಯಾಡಿ ಮಾಂಸ ಸಾಗಿಸುತ್ತಿದ್ದ ಇಬ್ಬರ ಪೈಕಿ ಓರ

ನಾಗಮಂಗಲದಲ್ಲಿ ಸಾವಿರಾರು ಎಕರೆ ಸರ್ಕಾರಿ ಭೂಮಿ ಲೂಟಿ ಆರೋಪ

ಕೋವಿಡ್ ಅನುದಾನದಲ್ಲೂ 4 ಕೋಟಿ ದುರುಪಯೋಗ । ಎಸ್‌ಐಟಿ ತನಿಖೆಗೆ ಕೆ.ಆರ್. ರವೀಂದ್ರ ಆಗ್ರಹ

ಮಂಡ್ಯ: ಜಿಲ್ಲೆಯ ನಾಗಮಂಗಲ ತಾಲೂಕಿನಲ್ಲಿ ಸಾವಿರಾರು ಎಕರೆ ಸರ್ಕಾರಿ ಭೂಮಿ ಕಬಳಿಕೆಯಾಗಿದ್ದು ಇಡೀ ಹಗರಣಕ್ಕೆ ಅಧಿಕಾರಿಗಳು ರಾಜಕಾರಣಿಗಳು ಮತ್ತು ಅಂಡರ್ ವರ್ಲ್ಡ್ ನಂಟು ಹೊಂದಿರುವ ವ್ಯಕ್ತಿಗಳ ಕುಮ್ಮಕ್ಕು ಇದೆ ಎಂದು ಸಾಮಾಜಿಕ ಹೋರಾಟಗಾರ ಕೆ.ಆರ್.ರವೀಂದ್ರ ಕಲ್ಲಹಳ್ಳಿ ಅವರು ಗಂಭೀರ ಆರೋಪ ಮಾಡಿದರು. ಪತ್ರಿಕಾಗೋಷ್ಠಿ ನಡೆಸಿ ಅವರು ದಾಖಲೆಗಳ ಸಮೇತ ಮಾತನಾಡಿದರು.2016ರಲ್ಲಿ ತಾವು ಲೋಕಾಯುಕ್ತಕ್ಕೆ ದೂರು ನೀಡಿದ್ದೆವು ಮತ್ತು ಹೈಕೋರ್ಟ್ ನ್ಯಾಯಮೂರ್ತಿ ಬಿ.ವೀರಪ್ಪ ಅವರ ಆದೇಶದಂತೆ ಲೋಕಾಯುಕ್ತ ಪೊಲೀಸರು ದಾಳಿ ನಡೆಸಿ 320 ಎಕರೆ ಅಕ್ರಮ ಖಾತೆ ಸೃಷ್ಟಿ ಸಂಬಂಧ 11 ಖಾಸಗಿ ವ್ಯಕ್ತಿಗಳು ಮತ್ತು ಸರ್ಕಾರಿ ಸಿಬ್ಬಂದಿ ವಿರುದ್ಧ ಪ್ರಕರಣ ದಾಖಲಿಸಿದ್ದರು ಎಂದು ಅವರು ತಿಳಿಸಿದರು.

ನಾಗಮಂಗಲದಲ್ಲಿ 25 ಸಾವಿರ ಎಕರೆಗೂ ಹೆಚ್ಚು ಮಂಜೂರಾತಿ ಆಗಿದೆ ಎಂದು ಅವರು ಆರೋಪಿಸಿದ ಅವರು, 29 ಸಾವಿರದ 230 ಎಕರೆ ಗೋಮಾಳದಲ್ಲಿ 250 ಜನ ಮತ್ತು ಗುಂಡುತೋಪಿನ 3 ಎಕರೆ 37 ಗುಂಟೆಯಲ್ಲಿ 99 ಜನ ಅಕ್ರಮ ಸಾಗುವಳಿ ಮಾಡುತ್ತಿದ್ದಾರೆ ಎಂದು ಅವರು ಹೇಳಿದರು.

ತನಿಖೆ ನಡೆಯುತ್ತಿರುವಾಗಲೇ 2023 ರ ಜನವರಿ 7 ರಂದು ಚುನಾವಣೆಗೆ 3 ತಿಂಗಳು ಮೊದಲೇ ಸಾರ್ವಜನಿಕವಾಗಿ ಸಾಗುವಳಿ ಚೀಟಿ ವಿತರಣಾ ಕಾರ್ಯಕ್ರಮ ಮಾಡಲಾಗಿದೆ ಮತ್ತು ಈ ಕಾರ್ಯಕ್ರಮದಲ್ಲಿ ಅಂಡರ್ ವರ್ಲ್ಡ್ ನಂಟು ಹೊಂದಿರುವವರು ಭಾಗವಹಿಸಿದ್ದರು ಎಂದು ಅವರು ಆರೋಪಿಸಿದರು.

ನಾಗಮಂಗಲದಲ್ಲಿ ನಿಜವಾದ ರೈತರ ಹೆಸರಲ್ಲಿ ಆರ್‌ಟಿಸಿ ಇದ್ದರೂ ಅವರ ಮಂಜೂರಾತಿ ಪತ್ರ ಮತ್ತು ಮಂಜೂರಾತಿ ಕಡತವನ್ನು ಅಧಿಕಾರಿಗಳು ನಾಶಪಡಿಸಿದ್ದಾರೆ ಕತ್ರಿಗುಪ್ಪೆಯಲ್ಲಿ 18 ಎಕರೆಗೆ ಅಕ್ರಮವಾಗಿ ತಂತಿ ಬೇಲಿ ಹಾಕಲಾಗಿದೆ ಮತ್ತು ಮಾಜಿ ಶಾಸಕ ಎಲ್.ಆರ್.ಶಿವರಾಮೇಗೌಡರ ಕಾಲದಲ್ಲಿ 25 ಸಾವಿರ ಎಕರೆ ಮಂಜೂರಾತಿ ಆಗಿದೆ ಎಂದು ಅವರು ಆರೋಪಿಸಿದರು.

ನಕಲಿ ಅಂಗವಿಕಲ ಪ್ರಮಾಣ ಪತ್ರ ನೀಡಿ 8 ಜನ ನೌಕರಿಗೆ: 2012 ಮತ್ತು 2017ರಲ್ಲಿ 8 ಜನ ನಕಲಿ ಅಂಗವಿಕಲ ಪ್ರಮಾಣ ಪತ್ರದಿಂದ ನೌಕರಿ ಪಡೆದಿದ್ದು, ಈ ಬಗ್ಗೆ ಅನಾಮಧೇಯ ಪತ್ರಗಳು ಬಂದ ಹಿನ್ನೆಲೆಯಲ್ಲಿ ವಿಚಾರಣೆ ನಡೆದಿದ್ದು, ವಿಚಾರಣೆ ಪೂರ್ಣಗೊಂಡು ನಕಲಿ ಪ್ರಮಾಣ ಪತ್ರ ನೀಡಿರುವುದು ದೃಢಪಟ್ಟಿದೆ. ಇವರೆಲ್ಲರೂ ಬಳ್ಳಾರಿ ಮತ್ತು ಚಿತ್ರದುರ್ಗ ಜಿಲ್ಲೆಯವರು. ಇದರಲ್ಲಿ ನಾಗಮಂಗಲ ತಾಲೂಕಿನಲ್ಲೇ 6 ಜನ ನಕಲಿ ಪ್ರಮಾಣ ಪತ್ರ ಕೊಟ್ಟು ಕೆಲಸ ಮಾಡುತ್ತಿದ್ದಾರೆ. ಅದರಲ್ಲಿ ಸಿದ್ದಪ್ಪ ಎಂಬುವವರು ಇತ್ತೀಚೆಗೆ ಚಿಕ್ಕಮಗಳೂರು ಜಿಲ್ಲೆಗೆ ವರ್ಗಾವಣೆಯಾಗಿದ್ದಾರೆ.ಈ ಬಗ್ಗೆ ಎಸ್‌ಐಟಿ ತನಿಖೆಗೆ ಒಪ್ಪಿಸಬೇಕು ಎಂದು ಮನವಿ ಮಾಡಲಾಗಿದೆ. ಈಗ ಒಂದು ಕಮಿಟಿ ಮಾಡಿದ್ದಾರೆ. ನಕಲಿ ಪ್ರಮಾಣ ಪತ್ರ ನೀಡಿದವರನ್ನು ಕೆಲಸದಿಂದ ವಜಾ ಮಾಡಿ, ಎಫ್‌ಐಆರ್ ಹಾಕಬೇಕು ಎಂದು ಒತ್ತಾಯಿಸಿದರು.

ಕೋವಿಡ್ ನಲ್ಲೂ ಹಣ ದುರುಪಯೋಗ: ಕೋವಿಡ್ ಮತ್ತು ಅತಿವೃಷ್ಟಿ ಅನುದಾನದಲ್ಲಿ 3 ಕೋಟಿಗೂ ಅಧಿಕ ದುರುಪಯೋಗ ಆಗಿದೆ ಎಂದು ನಾನು ದೂರು ನೀಡಿದ್ದೆ. ಜಿಲ್ಲಾಧಿಕಾರಿಗಳು ತನಿಖಾ ತಂಡ ರಚನೆ ಮಾಡಿದ್ದರು. ತನಿಖೆಯಲ್ಲಿ 4 ಕೋಟಿ ಅನುದಾನ ದುರುಪಯೋಗ ಆಗಿರುವುದು ಸಾಬೀತಾಗಿದೆ. ಈ ಬಗ್ಗೆ ಜಿಲ್ಲಾಧಿಕಾರಿಗಳು ತಹಶೀಲ್ದಾರ್ ಸೇರಿದಂತೆ 4 ಜನರ ವಿರುದ್ಧ ಸರ್ಕಾರಕ್ಕೆ ವರದಿ ನೀಡಿದ್ದಾರೆ. ಈಗ ಈ ಪ್ರಕರಣದಲ್ಲಿ ಲೋಕಾಯುಕ್ತ ಪೊಲೀಸರು 4 ಜನರ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ಕೋರಿ ಸರ್ಕಾರಕ್ಕೆ ವರದಿ ಸಲ್ಲಿಕೆ ಮಾಡಿದ್ದಾರೆ ಎಂದರು.

ಜಿಲ್ಲಾ ಉಸ್ತುವಾರಿ ಸಚಿವರು ನಿಜ ರೈತರಿಗೆ ನ್ಯಾಯ ಕೊಡಿಸಬೇಕು ಮತ್ತು ಮಾಜಿ ಶಾಸಕ ಸುರೇಶ್‌ಗೌಡರು ಮಾಡುತ್ತಿರುವ ಹೋರಾಟ ನ್ಯಾಯಬದ್ಧವಾಗಿ ನಡೆಯಲಿ ಅದಕ್ಕೆ ನಮ್ಮ ಬೆಂಬಲವಿದೆ ಎಂದು ಹೇಳಿದರು. ನಿವೃತ್ತ ನ್ಯಾಯಮೂರ್ತಿಗಳು ಮತ್ತು ಜಿಲ್ಲಾ ನ್ಯಾಯಾಧೀಶರು ತನಿಖೆ ಮಾಡುತ್ತಿರುವಾಗ ಜಿಲ್ಲಾಧಿಕಾರಿಗಳ ಮೇಲೆ ಒತ್ತಡ ಹೇರಿ ಚಳುವಳಿ ಮಾಡಬೇಡಿ ಎಂದು ಅವರು ಮನವಿ ಮಾಡಿದರು. ಎಲ್ಲ ಪ್ರಕರಣಗಳಿಗೂ ಎಸ್‌ಐಟಿ ಅಥವಾ ಸಿಬಿಐ ತನಿಖೆಯಾಗಬೇಕು ಎಂದು ಅವರು ಒತ್ತಾಯಿಸಿದರು.

ಅ.14 ರಂದು ಲೋಕಾಯುಕ್ತದಿಂದ ದೂರು ಅರ್ಜಿ ಸ್ವೀಕಾರ

ಮಡಿಕೇರಿ: ಕರ್ನಾಟಕ ಲೋಕಾಯುಕ್ತ ಮಡಿಕೇರಿಯ ಲೋಕಾಯುಕ್ತ ಅಧಿಕಾರಿಗಳು ಅಕ್ಟೋಬರ್, 14 ರಂದು ಬೆಳಗ್ಗೆ 11 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಪೊನ್ನಂಪೇಟೆ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಕರ್ನಾಟಕ ಲೋಕಾಯುಕ್ತ ಕಾಯಿದೆಯಡಿ ದೂರು ಅರ್ಜಿ ಸ್ವೀಕರಿಸಲಿದ್ದಾರೆ. ಭರ್ತಿ ಮಾಡಿದ ಮತ್ತು ನೋಟರಿಯಿಂದ ಆಫಿಡೆವಿಟ್ ಮಾಡಿಸಿದ ಅರ್ಜಿ ಸ್ವೀಕರಿಸಲಿದ್ದಾರೆ.

ಸರ್ಕಾರಿ ಕಚೇರಿಗಳಲ್ಲಿ ಅಧಿಕೃತ ಕೆಲಸಗಳಲ್ಲಿ ವಿಳಂಬ ಹಾಗೂ ಇನ್ನಿತರ ತೊಂದರೆ ನೀಡುತ್ತಿರುವ ಸರ್ಕಾರಿ ಅಧಿಕಾರಿ/ ನೌಕರರ ವಿರುದ್ಧ ಸಾರ್ವಜನಿಕರು ದೂರುಗಳನ್ನು ನಿಗದಿತ ಪತ್ರದಲ್ಲಿ ನೀಡಬಹುದಾಗಿದೆ. ಸಾರ್ವಜನಿಕರು ಈ ಅವಕಾಶ ಸದುಪಯೋಗಪಡಿಸಿಕೊಳ್ಳಲು ಕೋರಿದೆ. ಹೆಚ್ಚಿನ ವಿವರಗಳಿಗೆ ಮಡಿಕೇರಿ ಲೋಕಾಯುಕ್ತ ಪೊಲೀಸ್ ಕಚೇರಿ, ಗೌಳಿಬೀದಿ, ಮಡಿಕೇರಿ ದೂ.ಸಂ.08272-295297 ನ್ನು ಸಂಪರ್ಕಿಸಬಹುದು ಎಂದು ಕರ್ನಾಟಕ ಲೋಕಾಯುಕ್ತ ಪೊಲೀಸ್ ಉಪಾಧೀಕ್ಷಕರು ತಿಳಿಸಿದ್ದಾರೆ.

ಭಾರತ್ ಜೋಡೋ ನೋಂದಣಿ ಪ್ರಕ್ರಿಯೆ ಶೀಘ್ರ ಪೂರ್ಣಗೊಳಿಸಿ: ಡಾ. ಕುಮಾರ

ಮಂಡ್ಯ: ಜಿಲ್ಲೆಯಲ್ಲಿ ಭಾರತ್ ಜೋಡೋ ಯುವ ಸಂಘಗಳಿಗೆ ನೋಂದಣಿ ಪ್ರಕ್ರಿಯೆಯನ್ನು ಚುರುಕುಗೊಳಿಸಿ, ಸಾಧ್ಯವಾದಷ್ಟು ಶೀಘ್ರವಾಗಿ ನೋಂದಣಿ ಪ್ರಕ್ರಿಯೆಯನ್ನು ಪೂರ್ಣಗೊಳಿಸುವಂತೆ ಜಿಲ್ಲಾಧಿಕಾರಿಗಳಾದ ಡಾ. ಕುಮಾರ ಅವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಸೋಮವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾಧಿಕಾರಿಯವರ ಅಧ್ಯಕ್ಷತೆಯಲ್ಲಿ ಹಮ್ಮಿಕೊಳ್ಳಲಾಗಿದ್ದ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಭಾರತ್ ಜೋಡೋ ನೋಂದಣಿ ಕಾರ್ಯವನ್ನು ತ್ವರಿತಗೊಳಿಸಬೇಕು. ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ನೋಂದಣಿ ಪ್ರಕ್ರಿಯೆ ಶೇಕಡ 100ರಷ್ಟು ಪೂರ್ಣಗೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳು ಪರಸ್ಪರ ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ನಿರ್ದೇಶನ ನೀಡಿದರು.

ಭಾರತ್ ಜೋಡೋ ಸರ್ಕಾರದ ಮಹತ್ವಾಕಾಂಕ್ಷೆಯ ಕಾರ್ಯಕ್ರಮವಾಗಿದ್ದು, ಸ್ವತಃ ಮುಖ್ಯಮಂತ್ರಿಗಳು ಹಾಗೂ ಉಪಮುಖ್ಯಮಂತ್ರಿಗಳೇ ಇದರ ಪ್ರಗತಿಯನ್ನು ಮೇಲ್ವಿಚಾರಣೆ ಮಾಡುತ್ತಿದ್ದಾರೆ. ಹೀಗಾಗಿ, ನೋಂದಣಿ ಕಾರ್ಯದಲ್ಲಿ ಯಾವುದೇ ರೀತಿಯ ನಿರ್ಲಕ್ಷ್ಯಕ್ಕೆ ಅವಕಾಶ ನೀಡದೆ, ಅಧಿಕಾರಿಗಳು ಕಾರ್ಯಪ್ರವೃತ್ತರಾಗಬೇಕು ಎಂದು ತಿಳಿಸಿದರು.

ಆಫ್‌ಲೈನ್ ಮೂಲಕವೂ ನೋಂದಣಿ ಪ್ರಕ್ರಿಯೆಯನ್ನು ಪರಿಣಾಮಕಾರಿಯಾಗಿ ಪೂರ್ಣಗೊಳಿಸಬೇಕು. ಯುವಕರನ್ನು ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯಕ್ರಮದಡಿ ನೋಂದಾಯಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು. ನಿಗದಿತ ಗುರಿಯನ್ನು ಸಾಧಿಸುವ ನಿಟ್ಟಿನಲ್ಲಿ ತಾಲ್ಲೂಕುವಾರು ಪ್ರಗತಿಯನ್ನು ಪರಿಶೀಲಿಸಿ, ಬಾಕಿ ಇರುವ ನೋಂದಣಿ ಕಾರ್ಯವನ್ನು ಆದ್ಯತೆಯ ಮೇರೆಗೆ ಪೂರ್ಣಗೊಳಿಸಬೇಕು ಎಂದು ಅವರು ತಿಳಿಸಿದರು.

ಅಕ್ಟೋಬರ್ 15 ರೊಳಗೆ ಬೆಳೆ ಸಮೀಕ್ಷೆ ಪೂರ್ಣಗೊಳಿಸಿ: ಜಿಲ್ಲೆಯಲ್ಲಿ ಬೆಳೆ ಸಮೀಕ್ಷೆ ಕಾರ್ಯವನ್ನು ನಿಗದಿತ ಕಾಲಮಿತಿಯೊಳಗೆ ಪೂರ್ಣಗೊಳಿಸುವಂತೆ ಜಿಲ್ಲಾಧಿಕಾರಿಗಳಾದ ಡಾ. ಕುಮಾರ ಅವರು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಬೆಳೆ ಸಮೀಕ್ಷೆ ಕಾರ್ಯವು ಅಕ್ಟೋಬರ್ 15 ಕೊನೆಯ ದಿನವಾಗಿದ್ದು, ಅಷ್ಟರೊಳಗೆ ಸಮೀಕ್ಷೆಯನ್ನು ಪೂರ್ಣಗೊಳಿಸಬೇಕು. ನಿಗದಿತ ಅವಧಿಯಲ್ಲಿ ಬೆಳೆ ಸಮೀಕ್ಷೆ ಪೂರ್ಣಗೊಳ್ಳದಿದ್ದಲ್ಲಿ ಇನ್‌ಪುಟ್ ಸಬ್ಸಿಡಿ (ಬೆಳೆ ನಷ್ಟ ಪರಿಹಾರ) ವಿತರಿಸುವಲ್ಲಿ ತೊಂದರೆ ಉಂಟಾಗುವ ಸಾಧ್ಯತೆ ಇದೆ. ಆದ್ದರಿಂದ ಯಾವುದೇ ಲೋಪದೋಷಗಳಿಗೆ ಆಸ್ಪದ ನೀಡದೆ ಕೃಷಿ ಇಲಾಖೆಯ ಉಪನಿರ್ದೇಶಕರು, ಸಹಾಯಕ ನಿರ್ದೇಶಕರು, ತಾಲ್ಲೂಕುಗಳ ತಹಶೀಲ್ದಾರರು ಹಾಗೂ ತಾಲ್ಲೂಕು ಪಂಚಾಯಿತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಿ ಸಮೀಕ್ಷೆಯನ್ನು ಶೀಘ್ರ ಪೂರ್ಣಗೊಳಿಸಬೇಕು ಎಂದು ತಿಳಿಸಿದರು.

ಬೆಳೆ ಸಮೀಕ್ಷೆಯು ಅತ್ಯಂತ ಸೂಕ್ಷ್ಮವಾದ ಕಾರ್ಯವಾಗಿದ್ದು, ಅಧಿಕಾರಿಗಳು ಈ ವಿಷಯದ ಗಂಭೀರತೆಯನ್ನು ಅರಿತು ಎಚ್ಚರಿಕೆಯಿಂದ ಕಾರ್ಯನಿರ್ವಹಿಸಬೇಕು. ರೈತರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಅಗತ್ಯ ಕ್ರಮಗಳನ್ನು ಕೈಗೊಂಡು, ನಿಗದಿತ ಗಡುವಿನೊಳಗೆ ಸಮೀಕ್ಷೆ ಪೂರ್ಣಗೊಳಿಸುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಸಭೆಯಲ್ಲಿ ಜಿಲ್ಲಾ ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ಜಯಸ್ವಾಮಿ ಜಿ. ಎಸ್ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ಕೃಷ್ಣರಾಜಸಾಗರದಲ್ಲಿ ಅ. 16 ರಿಂದ 21 ರವರೆಗೆ ಕಾವೇರಿ ಆರತಿ – ಸಾಂಸ್ಕೃತಿಕ ಕಾರ್ಯಕ್ರಮ

ಮಂಡ್ಯ: ಜಲಸಂಪನ್ಮೂಲ ಇಲಾಖೆ ಕಾವೇರಿ ನೀರಾವರಿ ನಿಗಮ ನಿಯಮಿತ ಹಾಗೂ ಜಿಲ್ಲಾಡಳಿತ ವತಿಯಿಂದ 2026 ನೇ ಸಾಲಿನ ನಾಡ ಹಬ್ಬದ ಪ್ರಯುಕ್ತ ಕೃಷ್ಣರಾಜಸಾಗರ ಬೃಂದಾವನ ಉದ್ಯಾನವನದಲ್ಲಿ ಕಾವೇರಿ ಆರತಿ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಅಕ್ಟೋಬರ್ 16 ರಿಂದ 21 ರವರೆಗೆ ಸಂಜೆ 6.00 ಗಂಟೆಗೆ ಕೃಷ್ಣ ರಾಜಸಾಗರ ಬೃಂದಾವನ ಉದ್ಯಾನವನದಲ್ಲಿ ನಡೆಯಲಿದೆ.

ಕಾರ್ಯಕ್ರಮದಲ್ಲಿ ಆದಿಚುಂಚನಗಿರಿ ಮಠ ಮಹಾ ಸಂಸ್ಥಾನ ಮಠದ ಪೀಠಾಧ್ಯಕ್ಷ ಡಾ. ನಿರ್ಮಾಲಾನಂದನಾಥ ಸ್ವಾಮೀಜಿ, ಸುತ್ತೂರು ವೀರ ಸಿಂಹಾಸನ ಮಹಾಸಂಸ್ಥಾನ ಮಠದ ಅಧ್ಯಕ್ಷ ಡಾ. ಶಿವರಾತ್ರಿ ದೇಶಿ ಕೇಂದ್ರ ಮಹಾಸ್ವಾಮಿ, ಸಿದ್ದಗಂಗಾ ಮಠದ ಅಧ್ಯಕ್ಷ ಸಿದ್ದಲಿಂಗ ಮಹಾ ಸ್ವಾಮೀಜಿ, ಕೆಂಗೇರಿ ಒಕ್ಕಲಿಗರ ಮಹಾ ಸಂಸ್ಥಾನ ಮಠದ ಪೀಠಾಧ್ಯಕ್ಷ ಡಾ. ನಿಶ್ಚಲಾನಂದನಾಥ ಸ್ವಾಮೀಜಿ, ಕಲಬುರ್ಗಿ ಜಿಲ್ಲೆ ಕೊಡ್ಲಾ ಉರಿಲಿಂಗಪೆದ್ದೇಶ್ವರ ಮಹಾಸಂಸ್ಥಾನ ಮಠದ ಜ್ಞಾನಪ್ರಕಾಶ ಸ್ವಾಮೀಜಿ, ಮೈಸೂರು ಭಾಗದ ಕಾಗಿನೆಲೆ ಮಹಾಸಂಸ್ಥಾನ ಕನಕ ಗುರು ಪೀಠದ ಶಿವಾನಂದಾಪುರಿ ಸ್ವಾಮೀಜಿ ರವರು ದಿವ್ಯ ಸಾನಿಧ್ಯವನ್ನು ವಹಿಸಲಿದ್ದಾರೆ.

ಅಕ್ಟೋಬರ್ 16 ರಂದು ಸಂಜೆ 6.00 ಗಂಟೆಗೆ ಕಾವೇರಿ ಆರತಿ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮವನ್ನು ಮಾನ್ಯ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ರವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ.

ಸಮಾರಂಭದಲ್ಲಿ ಭಾರತ ಸರ್ಕಾರದ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವರಾದ ಹೆಚ್.ಡಿ. ಕುಮಾರಸ್ವಾಮಿ ಹಾಗೂ ಕರ್ನಾಟಕ ಸರ್ಕಾರದ ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ ಅವರು ಘನ ಉಪಸ್ಥಿತಿ ವಹಿಸಲಿದ್ದಾರೆ.

ಬೃಹತ್ ಮತ್ತು ಮಧ್ಯಮ ನೀರಾವರಿ ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವರಾದ ಎನ್. ಚಲುವರಾಯಸ್ವಾಮಿ,ಕೃಷಿ ಸಚಿವರಾದ ಪಿ.ಎಂ. ನರೇಂದ್ರಸ್ವಾಮಿ, ಇಂಧನ ಹಾಗೂ ಪ್ರವಾಸೋದ್ಯಮ ಸಚಿವರಾದ ಕೆ.ಜೆ. ಜಾರ್ಜ್,ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರಾದ ಶಿವರಾಜ್ ಸಂಗಪ್ಪ ತಂಗಡಗಿ,ನಗರಾಭಿವೃದ್ಧಿ ಸಚಿವರಾದ ಡಾ. ಯತೀಂದ್ರ ಸಿದ್ದರಾಮಯ್ಯ ಹಾಗೂ ಪೌರಾಡಳಿತ ಸಚಿವರಾದ ಹೆಚ್.ಸಿ. ಬಾಲಕೃಷ್ಣ, ಮಾನ್ಯ ಮುಜರಾಯಿ ಮೀನುಗಾರಿಕೆ ಮತ್ತು ಬಂದರು ಹಾಗೂ ಒಳನಾಡು ಜಲ ಸಾರಿಗೆ ಸಚಿವರಾದ ಕೆ ಎಸ್. ಬಸವಂತಪ್ಪ ಅವರು ಗೌರವ ಉಪಸ್ಥಿತಿ ವಹಿಸಲಿದ್ದಾರೆ.

ಶ್ರೀ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ಶ್ರೀರಂಗಪಟ್ಟಣ ವಿಧಾನಸಭಾ ಕ್ಷೇತ್ರದ ಶಾಸಕರಾದ ಎ.ಬಿ. ರಮೇಶ್ ಬಂಡಿಸಿದ್ದೇಗೌಡ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ಅಕ್ಟೋಬರ್ 16 ರಿಂದ 21 ರವರೆಗೆ ಸಂಜೆ 7.00 ಗಂಟೆಗೆ ಕೃಷ್ಣರಾಜಸಾಗರ ಬೃಂದಾವನ ಉದ್ಯಾನವನದಲ್ಲಿ ನಡೆಯುವ ಸಾಂಸ್ಕೃತಿಕ ಕಾರ್ಯಕ್ರಮಗಳ (ಸಂಗೀತ ರಸಸಂಜೆ) ವಿವರ

ಅ. 16 ರಂದು ಸಂಜೆ 7.00 ಗಂಟೆಗೆ ನವೀನ ಸಜ್ಜು ಮತ್ತು ತಂಡದವರಿಂದ ಸಾಂಸ್ಕೃತಿಕ ಕಾರ್ಯಕ್ರಮ.

ಅ. 17 ರಂದು ಸಂಜೆ 7.00 ಗಂಟೆಗೆ ದಿವ್ಯಾ ರಾಮಚಂದ್ರ ಮತ್ತು ತಂಡದವರಿಂದ ಸಾಂಸ್ಕೃತಿಕ ಕಾರ್ಯಕ್ರಮ.

ಅ. 18. ರಂದು ಸಂಜೆ 7.00 ಗಂಟೆಗೆ ಆಲ್ ಓಕೆ ಮತ್ತು ತಂಡದವರಿಂದ ಸಂಸ್ಕೃತಿ ಕಾರ್ಯಕ್ರಮ.

ಅ. 19 ರಂದು ಸಂಜೆ 7.00 ಗಂಟೆಗೆ ಭಾಗ್ಯಶ್ರೀ ಗೌಡ ಮತ್ತು ತಂಡದರಿಂದ ಸಾಂಸ್ಕೃತಿಕ ಕಾರ್ಯಕ್ರಮ.

ಅ. 20 ರಂದು ಸಂಜೆ 7.00 ಗಂಟೆಗೆ ಕಿಕ್ಕೇರಿ ಕೃಷ್ಣಮೂರ್ತಿ ಮತ್ತು ತಂಡದವರಿಂದ ಸಾಂಸ್ಕೃತಿಕ ಕಾರ್ಯಕ್ರಮ.

ಅ. 21 ರಂದು ಸಂಜೆ 7.00 ಗಂಟೆಗೆ ಕಂಬದ ರಂಗಯ್ಯ ಮತ್ತು ತಂಡದವರಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ.

ಪೂಜಾರಿರ ಮೊಣ್ಣಪ್ಪ ಅರೆಭಾಷಿಕ ಯುವ ಜನಾಂಗಕ್ಕೆ ಮಾದರಿ : ಡಾ.ಕಾವೇರಿಮನೆ ಬೋಜಪ್ಪ

ಮಡಿಕೇರಿ: ಕೊಡಗು ಮತ್ತು ದ.ಕ ಜಿಲ್ಲೆಯ ಅರೆಭಾಷಿಕ ಗೌಡರಿಗೆ ಪೂಜಾರಿ ಮೊಣ್ಣಪ್ಪ ನವರು ಮಾದರಿಯಾಗಿದ್ದು, ಅಪರೂಪದ ವ್ಯಕ್ತಿತ್ವದ ಅವರು ಸಮಾಜದ ಅಭಿವೃದ್ಧಿಗಾಗಿ ಹಗಲಿರುಳು ದುಡಿದ ಭೀಷ್ಮನೆಂದು ಖ್ಯಾತರಾಗಿದ್ದು, ಅರೆಭಾಷೆ ಅಕಾಡೆಮಿಯವರು ಅವರನ್ನು ನೆನಪಿಸಿ ಸ್ಮರಣ ಕಾರ್ಯಕ್ರಮವನ್ನು ಆಯೋಜಿಸುವ ಮೂಲಕ ಇತರ ಸಂಘ-ಸಂಸ್ಥೆಗಳಿಗೆ ಮಾದರಿರಾಗಿದ್ದಾರೆ ಎಂದು 97ರ ಹರೆಯದ ವೃದ್ಧ ಹಾಗೂ ಅರೆಭಾಷಿಕ ಜನಾಂಗದ ಹಿರಿಯ ವ್ಯಕ್ತಿ ಡಾ.ಕಾವೇರಿಮನೆ ಬೋಜಪ್ಪ ಅವರು ಅಭಿಪ್ರಾಯ ಪಟ್ಟರು.

ಬೆಂಗಳೂರಿನ ಚೌಡೇಶ್ವರಿ ನಗರದಲ್ಲಿರುವ ಪೂಜಾರಿರ ಮೊಣ್ಣಪ್ಪ ಲಾಯರ್ ಲೇಔಟ್‌ನ ಕೊಡಗು ಮತ್ತು ದ.ಕ ಗೌಡ ಸಮಾಜದ 'ನಮ್ಮನೆ ಸಾಂಸ್ಕೃತಿಕ ಕಲಾಕೇಂದ್ರದಲ್ಲಿ ಆಯೋಜಿಸಲಾದ ಸಭೆಯಲ್ಲಿ ಕರ್ನಾಟಕ ಅರೆಭಾಷೆ ಸಂಸ್ಕೃತಿ ಮತ್ತು ಸಾಹಿತ್ಯ ಅಕಾಡೆಮಿ ಬೆಮಗಳೂರಿನ ಕೊಡಗು ಮತ್ತು ದಕ್ಷಿಣ ಕನ್ನಡ ಗೌಡ ಸಮಾಜ, ಕೊಡಗು ಗೌಡ ಸಮಾಜ ಹಾಗೂ ಯಲಹಂಕ ಗೌಡ ಸಮಾಜದವರು ಸೇರಿ ಆಯೋಜಿಸಲಾದ ಸ್ಮರಣ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಾಣಿಜ್ಯ ತೆರಿಗೆ ಇಲಾಖೆಯ ನಿವೃತ್ತ ಜಂಟಿ ನಿರ್ದೇಶಕರಾದ ನಂಗಾರು ನಾಣ

ದಸರಾ ಸಂಭ್ರಮ: ಪರಂಪರೆಯ ವೈಭವ

ಸ್ವಾಮಿನಾಥನ್
ಮೊ:9880041516
ಹವ್ಯಾಸಿ ಬರಹಗಾರರು ಮತ್ತು ಕವಿ

ಮೈಸೂರಿನ ಸಂಸ್ಕೃತಿಯ ಉತ್ಸವ ಎಂದಾಗ ಭಾರತೀಯ ಸಂಸ್ಕೃತಿಯಲ್ಲಿ ಹಬ್ಬಗಳಿಗೆ ವಿಶೇಷ ಸ್ಥಾನವಿದೆ. ಅದರಲ್ಲಿಯೂ ಶರನ್ನವರಾತ್ರಿ ಅಥವಾ ದಸರಾ ಹಬ್ಬವು ದೇಶಾದ್ಯಂತ ಅತ್ಯಂತ ಸಡಗರದಿಂದ ಆಚರಿಸಲ್ಪಡುವ ಪ್ರಮುಖ ಉತ್ಸವ. ಕೇಡಿನ ಮೇಲೆ ಒಳ್ಳೆಯದರ ವಿಜಯದ ಪ್ರತೀಕವಾದ ಈ ಹಬ್ಬವು ಧಾರ್ಮಿಕ ಆಚರಣೆಗಳಷ್ಟೇ ಅಲ್ಲದೆ, ನಮ್ಮ ಸಾಂಸ್ಕೃತಿಕ ಪರಂಪರೆಯ ಜೀವಂತಿಕೆಯೂ ಹೌದು. ಕರ್ನಾಟಕದಲ್ಲಿ, ವಿಶೇಷವಾಗಿ ಮೈಸೂರಿನಲ್ಲಿ ದಸರಾ ಎಂದರೆ ಕೇವಲ ಒಂದು ಹಬ್ಬವಲ್ಲ; ಅದೊಂದು ಇತಿಹಾಸದ ಅನಾವರಣ ಹಾಗೂ ಜನರ ಉತ್ಸಾಹದ ಪ್ರತೀಕ.

ಧಾರ್ಮಿಕ ಮತ್ತು ಆಧ್ಯಾತ್ಮಿಕ ಮಹತ್ವ

ದಸರಾ ಎಂದರೆ 'ಹತ್ತು ದಿನಗಳ ಹಬ್ಬ'. ಧಾರ್ಮಿಕ ನಂಬಿಕೆಯ ಪ್ರಕಾರ, ದುರ್ಗಾ ದೇವಿಯು ಮಹಿಷಾಸುರನೆಂಬ ರಾಕ್ಷಸನೊಂದಿಗೆ ಒಂಬತ್ತು ದಿನಗಳ ಕಾಲ ಯುದ್ಧ ಮಾಡಿ, ಹತ್ತನೇ ದಿನ ಅಂದರೆ ವಿಜಯದಶಮಿಯಂದು ಅವನನ್ನು ಸಂಹರಿಸಿದಳು ಎಂದು ಪುರಾಣಗಳು ಹೇಳುತ್ತವೆ. ಉತ್ತರ ಭಾರತದಲ್ಲಿ ಶ್ರೀರಾಮನಿಂದ ರಾವಣನ ಸಂಹಾರವನ್ನು ಸ್ಮರಿಸಲಾಗುತ್ತದೆ.

ನವರಾತ್ರಿಯ ಒಂಬತ್ತು ದಿನಗಳಲ್ಲಿ ದೇವಿಯನ್ನು ನವದುರ್ಗೆಯರ ವಿಭಿನ್ನ ರೂಪಗಳಲ್ಲಿ (ಶೈಲಪುತ್ರಿ, ಬ್ರಹ್ಮಚಾರಿಣಿ, ಚಂದ್ರಘಂಟಾ, ಕೂಷ್ಮಾಂಡ, ಸ್ಕಂದಮಾತಾ, ಕಾತ್ಯಾಯನಿ, ಕಾಳರಾತ್ರಿ, ಮಹಾಗೌರಿ ಮತ್ತು ಸಿದ್ಧಿದಾತ್ರಿ) ಪೂಜಿಸಲಾಗುತ್ತದೆ. ಭಕ್ತರು ಈ ದಿನಗಳಲ್ಲಿ ಉಪವಾಸ ವ್ರತ ಆಚರಿಸಿ, ಜಪ-ತಪ ಮತ್ತು ಧಾರ್ಮಿಕ ನಿಯಮಗಳ ಮೂಲಕ ಶಕ್ತಿ ದೇವಿಯ ಆರಾಧನೆ ಮಾಡುತ್ತಾರೆ. ಈ ಒಂಬತ್ತು ದಿನಗಳ ಕಾಲ ಮಹಿಳೆಯರು ಸಾಂಪ್ರದಾಯಿಕ ಶೈಲಿಯಲ್ಲಿ ವಿಭಿನ್ನ ಬಣ್ಣದ ಸೀರೆಗಳನ್ನು ಧರಿಸಿ ದೇವಿಯನ್ನು ಪೂಜಿಸುವುದು ಹಾಗೂ ಸಂಭ್ರಮಿಸುವುದು ವಿಶೇಷ ಆಚರಣೆಯಾಗಿದೆ.

ಇದು ಕೇವಲ ಅಸುರ ಸಂಹಾರದ ಕಥೆಯಲ್ಲ; ಮನುಷ್ಯನ ಒಳಗಿರುವ ಅಹಂಕಾರ, ಕಾಮ, ಕ್ರೋಧ, ಲೋಭ ಮುಂತಾದ ಅರಿಷಡ್ವರ್ಗಗಳನ್ನು ಹತ್ತಿಕ್ಕಿ, ಸತ್ವವೃತ್ತಿಯನ್ನು ಬೆಳೆಸಿಕೊಳ್ಳಬೇಕೆಂಬ ಆಧ್ಯಾತ್ಮಿಕ ಸಂದೇಶವನ್ನು ಈ ಹಬ್ಬ ಸಾರುತ್ತದೆ. ದಸರಾ ಹಬ್ಬದಲ್ಲಿ ಆಯುಧಪೂಜೆ, ವಾಹನಪೂಜೆ ಮತ್ತು ಪುಸ್ತಕಪೂಜೆಯ ಮೂಲಕ ಜನರು ತಮ್ಮ ವೃತ್ತಿ, ಶ್ರಮ ಮತ್ತು ಜ್ಞಾನಕ್ಕೆ ಗೌರವ ಸಲ್ಲಿಸುತ್ತಾರೆ. ವಿಜಯದಶಮಿಯ ದಿನದಂದು ಹೊಸ ಕೆಲಸಗಳಿಗೆ ಮುನ್ನುಡಿ ಬರೆಯುವುದು ಮತ್ತು ವಿದ್ಯಾರಂಭ ಮಾಡುವುದು ನಮ್ಮ ಸಂಪ್ರದಾಯ.



ವಿಜಯನಗರದಿಂದ ಮೈಸೂರಿನವರೆಗೆ

ದಸರೆಯ ಇತಿಹಾಸದಲ್ಲಿ ವಿಜಯನಗರ ಸಾಮ್ರಾಜ್ಯದ ಹಂಪಿಯ ಮಹಾನವಮಿ ಉತ್ಸವಕ್ಕೆ ಮಹತ್ವದ ಸ್ಥಾನವಿದೆ. ಧಾರ್ಮಿಕ ಆಚರಣೆಗಳು, ರಾಜವೈಭವ ಮತ್ತು ಸಾಂಸ್ಕೃತಿಕ ಪ್ರದರ್ಶನಗಳ ಸಮನ್ವಯವಾಗಿದ್ದ ಈ ಉತ್ಸವದ ಪರಂಪರೆ ನಂತರವೂ ವಿವಿಧ ರೂಪಗಳಲ್ಲಿ ಮುಂದುವರಿಯಿತು.

ಮೈಸೂರು ಒಡೆಯರ ವಂಶದ ರಾಜ ಒಡೆಯರ್ 1 ಅವರು 1610ರಲ್ಲಿ ಶ್ರೀರಂಗಪಟ್ಟಣದಲ್ಲಿ ದಸರಾ ಆಚರಣೆಯನ್ನು ಆರಂಭಿಸಿದರು ಎಂಬುದು ಮೈಸೂರು ದಸರೆಯ ಇತಿಹಾಸದ ಪ್ರಮುಖ ಮೈಲಿಗಲ್ಲು. ಒಡೆಯರ ಕಾಲದಲ್ಲಿ ಈ ಉತ್ಸವ ರಾಜಪರಂಪರೆಯ ಅವಿಭಾಜ್ಯ ಭಾಗವಾಯಿತು. ರಾಜಪ್ರಭುತ್ವದ ಅಂತ್ಯದ ನಂತರ ಕರ್ನಾಟಕ ಸರ್ಕಾರದ ನೇತೃತ್ವದಲ್ಲಿ ದಸರಾ ಮುಂದುವರಿದು, ಇಂದು ನಾಡಹಬ್ಬವಾಗಿ ಬೆಳೆದಿದೆ.

ಮೈಸೂರು ದಸರೆಯ ಜಾಗತಿಕ ಗುರುತು

ಮೈಸೂರು ಅರಮನೆ ದೀಪಾಲಂಕಾರದಿಂದ ಕಂಗೊಳಿಸುವಾಗ, ಜಂಬೂ ಸವಾರಿಯ ವೈಭವವನ್ನು ಕಣ್ತುಂಬಿಕೊಳ್ಳಲು ಜನಸಾಗರವೇ ಹರಿದುಬರುತ್ತದೆ. ಜಂಬೂ ಸವಾರಿಯಲ್ಲಿ ಚಿನ್ನದ ಅಂಬಾರಿಯಲ್ಲಿ ಚಾಮುಂಡೇಶ್ವರಿ ದೇವಿಯ ಉತ್ಸವಮೂರ್ತಿಯನ್ನು ಕೊಂಡೊಯ್ಯುವುದು ಪ್ರಮುಖ ಆಕರ್ಷಣೆ. ಜನಪದ ಕಲಾತಂಡಗಳು, ವಾದ್ಯವೃಂದಗಳು ಮತ್ತು ಸ್ತಬ್ಧಚಿತ್ರಗಳು ಮೆರವಣಿಗೆಯ ವೈಭವವನ್ನು ಹೆಚ್ಚಿಸುತ್ತವೆ.

ಮೈಸೂರು ಅರಮನೆ, ಚಾಮುಂಡಿ ಬೆಟ್ಟ, ಸಂಗೀತ, ಚಿತ್ರಕಲೆ, ರೇಷ್ಮೆ ಮತ್ತು ಶ್ರೀಗಂಧದ ಪರಂಪರೆಗಳು ನಗರದ ಸಾಂಸ್ಕೃತಿಕ ಗುರುತನ್ನು ಬಲಪಡಿಸಿವೆ. ದಸರಾ ಈ ವೈಶಿಷ್ಟ್ಯಗಳನ್ನು ಜಗತ್ತಿಗೆ ಪರಿಚಯಿಸುವ ವೇದಿಕೆಯಾಗಿದೆ. ಪ್ರವಾಸೋದ್ಯಮದ ಜೊತೆಗೆ ಸ್ಥಳೀಯ ವ್ಯಾಪಾರಿಗಳು, ಕಲಾವಿದರು ಮತ್ತು ಆತಿಥ್ಯ ಉದ್ಯಮಕ್ಕೂ ಇದು ಆರ್ಥಿಕ ಅವಕಾಶಗಳನ್ನು ಸೃಷ್ಟಿಸುತ್ತದೆ.

ಭಾರತದಾದ್ಯಂತ ಮತ್ತು ಕರ್ನಾಟಕದಲ್ಲಿ ದಸರಾ ವೈವಿಧ್ಯ

ಪಶ್ಚಿಮ ಬಂಗಾಳದಲ್ಲಿ ದುರ್ಗಾಪೂಜೆಯ ಪೆಂಡಾಲ್‌ಗಳು ಮತ್ತು ದೇವಿಯ ಮೂರ್ತಿಗಳು ಪ್ರಮುಖ ಆಕರ್ಷಣೆ. ಉತ್ತರ ಭಾರತದಲ್ಲಿ ರಾಮಲೀಲೆ ಮತ್ತು ರಾವಣ ದಹನಕ್ಕೆ ಪ್ರಾಮುಖ್ಯವಿದೆ. ಗುಜರಾತ್‌ನಲ್ಲಿ ಗರ್ಬಾ ಮತ್ತು ದಾಂಡಿಯಾ ನೃತ್ಯಗಳು ನವರಾತ್ರಿಗೆ ವಿಶೇಷ ಕಳೆ ನೀಡುತ್ತವೆ. ಹಿಮಾಚಲ ಪ್ರದೇಶದ ಕುಲ್ಲುವಿನಲ್ಲಿ ವಿಜಯದಶಮಿಯಂದೇ ಮುಖ್ಯ ದಸರಾ ಉತ್ಸವ ಆರಂಭವಾಗುವುದು ವಿಶಿಷ್ಟ.

ಕರ್ನಾಟಕದಲ್ಲಿಯೂ ಮೈಸೂರಿನ ಆಚರಣೆಯ ಜೊತೆಗೆ ವಿವಿಧ ಪ್ರದೇಶಗಳ ದೇವಾಲಯ ಉತ್ಸವಗಳು, ಜನಪದ ಕಲೆಗಳು ಮತ್ತು ಸ್ಥಳೀಯ ಸಂಪ್ರದಾಯಗಳು ದಸರೆಯ ಸಂಭ್ರಮವನ್ನು ಹೆಚ್ಚಿಸುತ್ತವೆ. ಮನೆಗಳಲ್ಲಿ ರಾಜ-ರಾಣಿ ಹಾಗೂ ಪೌರಾಣಿಕ ಕಥೆಗಳನ್ನು ಬಿಂಬಿಸುವ 'ಬೊಂಬೆ ಕೂರಿಸುವ' ಸುಂದರ ಸಂಪ್ರದಾಯವೂ ನಮ್ಮ ಸಾಂಸ್ಕೃತಿಕ ಭಾಗವಾಗಿ ಇಂದಿಗೂ ಮುಂದುವರಿದಿದೆ.

ಹೊಸ ಟ್ರೆಂಡ್‌ಗಳು ಮತ್ತು ಯುವಪೀಳಿಗೆಯ ಆಚರಣೆ

ಕಾಲಕ್ಕೆ ತಕ್ಕಂತೆ ದಸರಾ ಆಚರಣೆಯ ಶೈಲಿಯಲ್ಲಿಯೂ ಸಣ್ಣ ಬದಲಾವಣೆಗಳಾಗುತ್ತಿವೆ. ಇಂದಿನ ಯುವಪೀಳಿಗೆಯು ಕೇವಲ ಸಾಂಪ್ರದಾಯಿಕ ಆಚರಣೆಗಳಿಗಷ್ಟೇ ಸೀಮಿತವಾಗದೆ, ಹಬ್ಬವನ್ನು ಆಧುನಿಕ ಸ್ಪರ್ಶದೊಂದಿಗೆ ಆಚರಿಸಿಕೊಳ್ಳುತ್ತಿದೆ.

ಸಾಮಾಜಿಕ ಜಾಲತಾಣಗಳ ಮೂಲಕ ಸಾಂಪ್ರದಾಯಿಕ ಉಡುಗೆ-ತೊಡುಗೆಗಳ ಫೋಟೋಗಳನ್ನು ಹಂಚಿಕೊಳ್ಳುವುದು, ನವರಾತ್ರಿ ರಾತ್ರಿಗಳಲ್ಲಿ ಸ್ನೇಹಿತರೊಂದಿಗೆ ಒಟ್ಟುಗೂಡಿ ಸಾಂಪ್ರದಾಯಿಕ ಗರ್ಬಾ ಹಾಗೂ ದಾಂಡಿಯಾ ನೃತ್ಯಗಳಲ್ಲಿ ಉತ್ಸಾಹದಿಂದ ಪಾಲ್ಗೊಳ್ಳುವುದು ಇಂದಿನ ಟ್ರೆಂಡ್ ಆಗಿದೆ. ಇದರೊಂದಿಗೆ, ಡಿಜಿಟಲ್ ಮಾಧ್ಯಮದ ಮೂಲಕ ನಮ್ಮ ಹಬ್ಬದ ಹಿನ್ನೆಲೆ ಮತ್ತು ಕರಕುಶಲ ವಸ್ತುಗಳನ್ನು ಜಗತ್ತಿಗೆ ಪರಿಚಯಿಸುವ ಕೆಲಸವನ್ನು ಯುವಕರು ಮಾಡುತ್ತಿದ್ದಾರೆ. ಹಳೆಯ ಸಂಪ್ರದಾಯಗಳ ಬೇರುಗಳನ್ನು ಗಟ್ಟಿಯಾಗಿಟ್ಟುಕೊಂಡೇ, ಹೊಸ ಆಲೋಚನೆಗಳೊಂದಿಗೆ ಹಬ್ಬವನ್ನು ಆಚರಿಸುವ ಈ ನವಪೀಳಿಗೆಯ ಉತ್ಸಾಹವು ದಸರೆಯ ಪರಂಪರೆಯನ್ನು ಮತ್ತಷ್ಟು ಜೀವಂತವಾಗಿರಿಸಿದೆ.

ದಸರಾ ಇತಿಹಾಸದ ನೆನಪು, ವರ್ತಮಾನದ ಸಂಭ್ರಮ ಮತ್ತು ಭವಿಷ್ಯಕ್ಕೆ ತಲುಪಿಸಬೇಕಾದ ಸಾಂಸ್ಕೃತಿಕ ಪರಂಪರೆ. ಸತ್ಯ, ನ್ಯಾಯ, ಸಹಬಾಳ್ವೆ ಮತ್ತು ಶ್ರಮಕ್ಕೆ ಗೌರವ ನೀಡುವ ಮೌಲ್ಯಗಳನ್ನು ನಮ್ಮ ಬದುಕಿನಲ್ಲಿ ಅಳವಡಿಸಿಕೊಂಡಾಗಲೇ ಒಳಿತಿನ ವಿಜಯವನ್ನು ಸಾರುವ ಈ ಹಬ್ಬದ ಆಶಯ ಸಾರ್ಥಕವಾಗುತ್ತದೆ.



ಮೊದೂರು ಶ್ರೀ ನಿಧಿ ಅಯ್ಯಂಗಾರ್ ಮನೆಯಲ್ಲಿ ನವರಾತ್ರಿ ಸಂಭ್ರಮ

ಸಾವಿರ ಗೊಂಬೆಗಳ ವಿಶೇಷ ಅಲಂಕಾರ

ಕೆ.ಆರ್.ಪೇಟೆ: ತಾಲ್ಲೂಕಿನ ಬೂಕನಕೆರೆ ಹೋಬಳಿಯ ಮೊದೂರು ಗ್ರಾಮದಲ್ಲಿ ನವರಾತ್ರಿ ಹಬ್ಬವನ್ನು ವಿಶೇಷವಾಗಿ ಆಚರಿಸಲಾಗುತ್ತಿದೆ. ಮೊದೂರು ಗ್ರಾಮದ ಶ್ರೀ ಅಭಯ ಆಂಜನೇಯ ದೇವಾಲಯದ ಅರ್ಚಕರಾದ ಶ್ರೀನಿಧಿ ಅಯ್ಯಂಗಾರ್ ಅವರ ನಿವಾಸದಲ್ಲಿ ನವರಾತ್ರಿ ಹಬ್ಬದ ಪ್ರಯುಕ್ತ ಒಂದು ಸಾವಿರಕ್ಕೂ ಹೆಚ್ಚು ವಿಶೇಷ ಅಲಂಕಾರದ ಗೊಂಬೆಗಳನ್ನು ಕೂರಿಸಿ, ವಿಶೇಷ ಪೂಜೆ ಸಲ್ಲಿಸಲಾಗುತ್ತಿದೆ.

ಶ್ರೀನಿಧಿ ಅವರ ಕುಟುಂಬ ಪ್ರತಿ ವರ್ಷ ನವರಾತ್ರಿ ಹಬ್ಬವನ್ನು ಶ್ರದ್ಧಾ ಭಕ್ತಿಯಿಂದ ಆಚರಿಸಿಕೊಂಡು ಬರುತ್ತಿದೆ. ಈ ಬಾರಿ ತಮ್ಮ ನಿವಾಸದಲ್ಲಿ ವಿವಿಧ ದೇವಾನುದೇವತೆಗಳ, ಪೌರಾಣಿಕ ಕಥೆಗಳನ್ನು ಸಾರುವ ಸುಂದರ ಗೊಂಬೆಗಳನ್ನು ವಿಶೇಷ ಅಲಂಕಾರದೊಂದಿಗೆ ಜೋಡಿಸಿದ್ದಾರೆ. ವಿದ್ಯುತ್ ದೀಪಾಲಂಕಾರದಿಂದ ಮನೆ ಮದುವಣಗಿತ್ತಿಯಂತೆ ಕಂಗೊಳಿಸುತ್ತಿದೆ.

ಈ ಕುರಿತು ಮಾತನಾಡಿದ ಶ್ರೀನಿಧಿ ಅಯ್ಯಂಗಾರ್ ನಮ್ಮ ಪೂರ್ವಜರ ಕಾಲದಿಂದಲೂ ನವರಾತ್ರಿ ಹಬ್ಬದ ಅಂಗವಾಗಿ ಸುಂದರ ಗೊಂಬೆಗಳನ್ನು ಕೂರಿಸುವ ಸಂಪ್ರದಾಯ ನಡೆದುಕೊಂಡು ಬಂದಿದೆ. ಅದರಂತೆ ಈ ವರ್ಷವೂ ಕೂಡ ನಮ್ಮ ಮನೆಯಲ್ಲಿ ನವ ದುರ್ಗೆಯರ ಅವತಾರಗಳು, ಮೈಸೂರು ದಸರಾದ ಪ್ರಸಿದ್ಧ ಜಂಬೂಸವಾರಿ, ಅಯೋಧ್ಯೆಯ ಶ್ರೀರಾಮ ಮಂದಿರದ ಮಾದರಿ ಸೇರಿದಂತೆ ಸುಮಾರು ಒಂದು ಸಾವಿರಕ್ಕೂ ಹೆಚ್ಚು ಬಣ್ಣ ಬಣ್ಣದ ಗೊಂಬೆಗಳನ್ನು ಕೂರಿಸಿ ವಿಶೇಷ ಪೂಜೆ ಸಲ್ಲಿಸುತ್ತಿದ್ದೇವೆ ಎಂದರು.

ನವರಾತ್ರಿ ಎಂದರೆ ಒಂಭತ್ತು ರಾತ್ರಿಗಳ ಕಾಲ ದುರ್ಗಾ ದೇವಿಯ ಒಂಭತ್ತು ಅವತಾರಗಳನ್ನು ಪೂಜಿಸುವ ಪವಿತ್ರ ಹಬ್ಬ. ಈ ಹಬ್ಬ ಕೆಟ್ಟದರ ವಿರುದ್ಧ ಒಳ್ಳೆಯದರ ಗೆಲುವನ್ನು ಸಂಕೇತಿಸುತ್ತದೆ. ಗೊಂಬೆಗಳನ್ನು ಕೂರಿಸುವುದರಿಂದ ಮನೆಯಲ್ಲಿ ಸಕಾರಾತ್ಮಕ ಶಕ್ತಿ ಹೆಚ್ಚಾಗುತ್ತದೆ ಮತ್ತು ಮಕ್ಕಳಿಗೆ ನಮ್ಮ ಪುರಾಣ, ಇತಿಹಾಸ, ಸಂಸ್ಕೃತಿಯ ಬಗ್ಗೆ ತಿಳಿಯುತ್ತದೆ ಎಂಬ ಕಾರಣಕ್ಕೆ ಈ ಸಂಪ್ರದಾಯವನ್ನು ಮುಂದುವರಿಸಿಕೊಂಡು ಬಂದಿದ್ದೇವೆ ಎಂದು ನವರಾತ್ರಿಯ ಇತಿಹಾಸವನ್ನು ತಿಳಿಸಿದರು.

ನವರಾತ್ರಿಯ ಒಂಭತ್ತು ದಿನಗಳ ಕಾಲ ಬೆಳಿಗ್ಗೆ ಮತ್ತು ಸಂಜೆ ಗೊಂಬೆಗಳಿಗೆ ವಿಶೇಷ ಪೂಜೆ ಸಲ್ಲಿಸಲಾಗುತ್ತಿದೆ. ಸಂಜೆ ವೇಳೆ ಮಹಿಳೆಯರು ಮತ್ತು ಮಕ್ಕಳು ಸೇರಿ ಭಜನೆ ಮಾಡುತ್ತಿದ್ದಾರೆ. ಈ ವಿಶೇಷ ಅಲಂಕಾರ ನೋಡಲು ಮೊದೂರು ಹಾಗೂ ಸುತ್ತಮುತ್ತಲಿನ ಗ್ರಾಮಗಳಿಂದ ಜನರು ಆಗಮಿಸುತ್ತಿದ್ದಾರೆ.

ಆದಿಚುಂಚನಗಿರಿ ಮಠದಲ್ಲಿ ಶರನ್ನವರಾತ್ರಿ ವೈಭವ

ಶ್ರೀನಿರ್ಮಲಾನಂದನಾಥಶ್ರೀಗಳಿಂದ ಧಾರ್ಮಿಕ ಕಾರ್ಯಕ್ಕೆ ಚಾಲನೆ

ನಾಗಮಂಗಲ: ಪ್ರಸಿದ್ಧ ಧಾರ್ಮಿಕ ಕ್ಷೇತ್ರವಾದ ಶ್ರೀಆದಿಚುಂಚನಗಿರಿ ಮಹಾಸಂಸ್ಥಾನ ಮಠದಲ್ಲಿ ಶರನ್ನವರಾತ್ರಿ ಉತ್ಸವದ ಅಂಗವಾಗಿ ಭಾನುವಾರ ಸಂಜೆ ವಿವಿಧ ಧಾರ್ಮಿಕ ಪೂಜಾ ಕೈಂಕರ್ಯಗಳು ಭಕ್ತಿಭಾವ ಹಾಗೂ ಸಾಂಪ್ರದಾಯಿಕ ವಿಧಿವಿಧಾನಗಳೊಂದಿಗೆ ನೆರವೇರಿದವು.

ಮಠದ ಪೀಠಾಧ್ಯಕ್ಷರಾದ ಪರಮಪೂಜ್ಯ ಜಗದ್ಗುರು ಶ್ರೀಶ್ರೀಶ್ರೀಡಾ.ನಿರ್ಮಲಾನಂದನಾಥ ಮಹಾಸ್ವಾಮೀಜಿಯವರಿಗೆ ರಾತ್ರಿ 7-30ಕ್ಕೆ ಸಿದ್ಧ ಸಿಂಹಾಸನ ಪೂಜೆ ಹಾಗೂ ಷೋಡಶೋಪಚಾರ ಪೂಜೆಯನ್ನು ಶಾಸ್ತ್ರೋಕ್ತವಾಗಿ ನೆರವೇರಿಸಲಾಯಿತು. ಶರನ್ನವರಾತ್ರಿ ಉತ್ಸವದ ಧಾರ್ಮಿಕ ಮಹತ್ವವನ್ನು ಸಾರುವ ಈ ವಿಶೇಷ ಪೂಜಾ ಕಾರ್ಯಕ್ರಮದಲ್ಲಿ ಮಠದ ಸಂಪ್ರದಾಯದಂತೆ ಶ್ರೀಗಳಿಗೆ ಪೂಜಾ ಕೈಂಕರ್ಯಗಳನ್ನು ಭಕ್ತಿಪೂರ್ವಕವಾಗಿ ಸಮರ್ಪಿಸಲಾಯಿತು.

ಶರನ್ನವರಾತ್ರಿ ನಾಡಿನ ಪ್ರಮುಖ ಧಾರ್ಮಿಕ ಉತ್ಸವಗಳಲ್ಲಿ ಒಂದಾಗಿದ್ದು, ದೇವಿಯ ಆರಾಧನೆ, ವಿಶೇಷ ಪೂಜೆಗಳು ಹಾಗೂ ವಿವಿಧ ಧಾರ್ಮಿಕ ಆಚರಣೆಗಳ ಮೂಲಕ ಭಕ್ತರಲ್ಲಿ ಆಧ್ಯಾತ್ಮಿಕ ಚಿಂತನೆ ಮತ್ತು ಧಾರ್ಮಿಕ ಶ್ರದ್ಧೆಯನ್ನು ಮೂಡಿಸುತ್ತದೆ. ಈ ಧಾರ್ಮಿಕ ಪರಂಪರೆ ಹಾಗೂ ಸಂಸ್ಕೃತಿಯ ಮಹತ್ವವನ್ನು ಪ್ರತಿಬಿಂಬಿಸುತ್ತದೆ.

ಮಠದಲ್ಲಿ ಶರನ್ನವರಾತ್ರಿ ಅಂಗವಾಗಿ ನಡೆಯುವ ಪೂಜಾ ಕೈಂಕರ್ಯಗಳು ಭಕ್ತರಿಗೆ ಆಧ್ಯಾತ್ಮಿಕ ಅನುಭೂತಿ ನೀಡುವುದರ ಜತೆಗೆ ಗುರುಪರಂಪರೆಯ ಮೇಲಿನ ಭಕ್ತಿ ಮತ್ತು ಗೌರವವನ್ನು ಮತ್ತಷ್ಟು ಗಟ್ಟಿಗೊಳಿಸುತ್ತವೆ. ಸಾಂಪ್ರದಾಯಿಕ ವಿಧಿವಿಧಾನಗಳೊಂದಿಗೆ ನಡೆಯುವ ಇಂತಹ ಧಾರ್ಮಿಕ ಕಾರ್ಯಕ್ರಮಗಳು ಭಾರತೀಯ ಸಂಸ್ಕೃತಿ, ಆಚಾರ-ವಿಚಾರ ಹಾಗೂ ಆಧ್ಯಾತ್ಮಿಕ ಪರಂಪರೆಯನ್ನು ಮುಂದಿನ ಪೀಳಿಗೆಗೆ ಪರಿಚಯಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತವೆ.

ಶ್ರೀ ಕ್ಷೇತ್ರ ಆದಿಚುಂಚನಗಿರಿ ಮಹಾಸಂಸ್ಥಾನ ಮಠವು ಧಾರ್ಮಿಕ, ಆಧ್ಯಾತ್ಮಿಕ ಹಾಗೂ ಶೈಕ್ಷಣಿಕ ಕ್ಷೇತ್ರಗಳಲ್ಲಿ ತನ್ನದೇ ಆದ ಪರಂಪರೆಯನ್ನು ಹೊಂದಿದ್ದು, ವಿವಿಧ ಧಾರ್ಮಿಕ ಉತ್ಸವಗಳ ಮೂಲಕ ಭಕ್ತರಲ್ಲಿ ಧರ್ಮನಿಷ್ಠೆ, ಸೇವಾಭಾವ ಮತ್ತು ಆಧ್ಯಾತ್ಮಿಕ ಜಾಗೃತಿಯನ್ನು ಬೆಳೆಸುವ ಕಾರ್ಯದಲ್ಲಿ ತೊಡಗಿದೆ. ಶರನ್ನವರಾತ್ರಿ ಉತ್ಸವದ ಅಂಗವಾಗಿ ನಡೆಯುತ್ತಿರುವ ವಿಶೇಷ ಪೂಜಾ ಕಾರ್ಯಕ್ರಮಗಳು ಈ ಪರಂಪರೆಯ ಮಹತ್ವವನ್ನು ಸಾರುತ್ತಿವೆ.

ಹಿನ್ನೆಲೆಯಲ್ಲಿ ಆದಿಚುಂಚನಗಿರಿ ಮಹಾಸಂಸ್ಥಾನ ಮಠದಲ್ಲಿ ನಡೆಯುತ್ತಿರುವ ಉತ್ಸವವು ಮಠದ

ಒಂದು ಜೀವದ ಅಂತ್ಯವಾದರೆ ಇಡೀ ಸಮಾಜವೇ ಕಂಬನಿ ಮಿಡಿಯುತ್ತದೆ. ಆದರೆ ನಮ್ಮ ಕಣ್ಣೆದುರೇ, ಯಾವುದೇ ರಕ್ತದ ಕಲೆಗಳಿಲ್ಲದೆ ದಿನನಿತ್ಯ ನಡೆಯುತ್ತಿರುವ ಕನಸುಗಳ ಹತ್ಯೆಗೆ ಮಾತ್ರ ಇಲ್ಲಿ ಯಾರೂ ಹೊಣೆಯಾಗುತ್ತಿಲ್ಲ. ಪ್ರತಿಯೊಬ್ಬ ವ್ಯಕ್ತಿಯೂ ತನ್ನ ಕಣ್ಣುಗಳಲ್ಲಿ ನೂರಾರು ಆಸೆಗಳ ಮೂಟೆಯನ್ನು ಕಟ್ಟಿಕೊಂಡು ಬದುಕುತ್ತಿರುತ್ತಾನೆ. ಆದರೆ, ಇಂದಿನ ಯಾಂತ್ರಿಕ ಸಮಾಜ ಮತ್ತು ಸಾಂಪ್ರದಾಯಿಕ ಶಿಕ್ಷಣದ ಕಟ್ಟುಪಾಡುಗಳ ನಡುವೆ ಆ ಕನಸುಗಳು ಚಿಗುರುವ ಮುನ್ನವೇ ಕಮರಿ ಹೋಗುತ್ತಿವೆ.

ಇಂದಿನ ಆಧುನಿಕ ಜಗತ್ತಿನಲ್ಲೂ ನಮ್ಮ ಸಮಾಜವು ಯುವ ಪೀಳಿಗೆಯನ್ನು ತನ್ನದೇ ಆದ ಹಳೆಯ ಚೌಕಟ್ಟಿನೊಳಗೆ ತುರಿಸಲು ಪ್ರಯತ್ನಿಸುತ್ತಿದೆ. "ನಾಲ್ಕು ಜನ ಏನೆಂದುಕೊಂಡಾರು?" ಎಂಬ ಒಂದೇ ಒಂದು ಪ್ರಶ್ನೆ ಇಂದಿಗೂ ಅನೇಕ ಅದ್ಭುತ ಪ್ರತಿಭೆಗಳ ಉಸಿರುಗಟ್ಟಿಸುತ್ತಿದೆ. ಒಬ್ಬ ಯುವಕನಿಗೆ ಕಲೆಯಲ್ಲೋ, ಸಾಹಿತ್ಯದಲ್ಲೋ ಅಥವಾ ಕ್ರೀಡೆಯಲ್ಲೋ ಸಾಧನೆ ಮಾಡುವ ಹಂಬಲವಿದ್ದರೆ, ಸಮಾಜವು ಅದನ್ನು ಕೇವಲ 'ವ್ಯರ್ಥ ಕಾಲಹರಣ' ಎಂದು ಜರೆಯುತ್ತದೆ. ಇಲ್ಲಿ ಯಶಸ್ಸು ಎಂದರೆ ಕೇವಲ ದೊಡ್ಡ ಬ್ಯಾಂಕ್ ಬ್ಯಾಲೆನ್ಸ್ ಮತ್ತು ಅಂತಸ್ತು ಎಂಬ ತಪ್ಪು ಕಲ್ಪನೆ ಆಳವಾಗಿ ಬೇರೂರಿದೆ.

ಇದಕ್ಕೆ ಮತ್ತೊಂದು ದೊಡ್ಡ ಆಯುಧವಾಗಿ ಬಳಕೆಯಾಗುತ್ತಿರುವುದು ನಮ್ಮ ಇಂದಿನ ಶಿಕ್ಷಣ ಪದ್ಧತಿ. ಮಕ್ಕಳನ್ನು ಜ್ಞಾನವಂತರನ್ನಾಗಿ ಮಾಡುವ ಬದಲಿಗೆ, ಕೇವಲ ಅಂಕ ಗಳಿಕೆಯ ಯಂತ್ರಗಳನ್ನಾಗಿ ಮಾಡುವ ಪೈಪೋಟಿ ಇಲ್ಲಿ ನಡೆಯುತ್ತಿದೆ. ಪ್ರತಿಯೊಬ್ಬ ಮಗುವಿನಲ್ಲೂ ಒಂದು ವಿಶಿಷ್ಟ ಸೃಜನಶೀಲತೆ ಇರುತ್ತದೆ. ಆದರೆ, ಎಲ್ಲರನ್ನೂ ಒಂದೇ ಪರೀಕ್ಷೆಯ ತಕ್ಕಡಿಯಲ್ಲಿ ತೂಗುವ ಮೂಲಕ ಅವರಲ್ಲಿರುವ ನೈಜ ಆಸಕ್ತಿಗಳನ್ನು ಬಾಲ್ಯದಲ್ಲೇ ಚಿವುಟಿ ಹಾಕಲಾಗುತ್ತಿದೆ. ಹೆತ್ತವರ ಆಸೆಗಳನ್ನು ಮಕ್ಕಳ ಮೇಲೆ ಹೇರಿ, ಅವರ ಸ್ವಂತ ಕನಸುಗಳ ಬಲಿಪೀಠದ ಮೇಲೆ ನಿಲ್ಲಿಸಲಾಗುತ್ತಿದೆ.

ಈ ಹತ್ಯೆಯ ಭೀಕರತೆ ಏನೆಂದರೆ, ಇಲ್ಲಿ ಬಲಿಪಶುಗಳು ಶಾರೀರಿಕವಾಗಿ ಬದುಕಿರುತ್ತಾರೆ, ಆದರೆ ಅವರೊಳಗಿನ ಉತ್ಸಾಹ ಮತ್ತು ಜೀವಂತಿಕೆ ಸತ್ತಿರುತ್ತದೆ. ಕೇವಲ ಕರ್ತವ